ಸಂಪುಟ: ೦೬/ ಸಂಚಿಕೆ: ೨೭೭/ಗುರುವಾರ ದಿನಾಂಕ : ೦೨-೦೧-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 277/ THURSDAY Date : 02-01-2025/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಪರಿಣಾಮಕಾರಿಯಾಗಿ ಕೆಲಸ ಮಾಡಿ: ಹಿರಿಯ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಲಹೆ



ಬೆಂಗಳೂರು: ಆಡಳಿತಾಂಗದಲ್ಲಿ ಐಎಎಸ್, ಐಪಿಎಸ್, ಐಆರ್‌ಎಸ್, ಐಎಫ್‌ಎಸ್ ಅಧಿಕಾರಿಗಳ ಜವಾಬ್ದಾರಿ ಹೆಚ್ಚು. ಜನರ ಆರ್ಥಿಕ ಶಕ್ತಿ ಹೆಚ್ಚಿಸಲು ಇನ್ನಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡಿ. ಪ್ರಾದೇಶಿಕ ಅಸಮತೋಲನ, ಅಸಮಾನತೆ ತೊಡೆಯಲು ಸಹಕಾರ ಬೇಕು. ಈ ವರ್ಷದ ಕಾರ್ಯಕ್ಷಮತೆ ಹೆಚ್ಚಿಸಿಕೊಳ್ಳೋಣ ಎಂದು ಸಿಎಂ ಸಿದ್ದರಾಮಯ್ಯ ಸಲಹೆ ನೀಡಿದ್ದಾರೆ. ಹೊಸ ವರ್ಷದ ಶುಭಾಶಯ ತಿಳಿಸಲು ವಿಧಾನಸೌಧದಲ್ಲಿ ಹಿರಿಯ ಅಧಿಕಾರಿಗಳು ಸಿಎಂ ಸಿದ್ದರಾಮಯ್ಯರನ್ನು ಇಂದು ಭೇಟಿ ಮಾಡಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ಬದುಕಿನಲ್ಲಿ ಏಳು ಬೀಳು ಸಹಜ ಮತ್ತು ನಿರಂತರ. ಪರಿಸ್ಥಿತಿಗಳು ಸದಾ ನಮ್ಮ ಪರವಾಗಿ ಇರುವುದಿಲ್ಲ. ಆದರೆ ಆತ್ಮವಿಶ್ವಾಸ ಕಳೆದುಕೊಳ್ಳದೆ ಧೈರ್ಯದಿಂದ ಸಮಸ್ಯೆಗಳನ್ನು, ಸಂದರ್ಭಗಳನ್ನು ನಿರ್ವಹಿಸಿ ಪರಿಹಾರ ಕಂಡುಕೊಳ್ಳಲು ಸಾಧ್ಯವಿದೆ. ಆಡಳಿತಾಂಗದಲ್ಲಿ ಐಎಎಸ್, ಐಪಿಎಸ್, ಐಆರ್‌ಎಸ್ ಹಾಗೂ ಐಎಫ್‌ಎಸ್ ಅಧಿಕಾರಿಗಳ ಜವಾಬ್ದಾರಿ ಹೆಚ್ಚು. ನಾವು ಕಾನೂನುಗಳನ್ನು ರಚಿಸಿ, ಜಾರಿ ಆಗುವ ದಿಕ್ಕಿನಲ್ಲಿ ನಿರಂತರ ನಿಗಾ ವಹಿಸುತ್ತೇವೆ. ಅಧಿಕಾರಿ ವರ್ಗ ಸಮಾಜಕ್ಕೆ ಪೂರಕವಾಗಿ ಕ್ರಿಯಾಶೀಲತೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಹೇಳಿದ್ದಾರೆ.

ಭಾರತದ ಆರ್ಥಿಕತೆ ಕುಸಿತ ಕಂಡಿದ್ದಾಗ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಮನಮೋಹನ್ ಸಿಂಗ್ ಅವರು ದೇಶದ ಆರ್ಥಿಕತೆಗೆ ಹೊಸ ಚೈತನ್ಯ ನೀಡಿದರು. ದೇಶದ ಆರ್ಥಿಕ ಬೆಳವಣಿಗೆ ಆಗಿ ಇದರ ಲಾಭ ದೇಶದ ಜನರಿಗೆ ಲಭಿಸುವಂತೆ ಮಾಡಿದರು. ಸಂವಿಧಾನದ ನಿರ್ದೇಶಕ ತತ್ವಗಳಾದ ಸಮಾನತೆ, ಜಾತ್ಯತೀತತೆ, ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ದೇಶದ ಜನರ ಮೂಲಭೂತ ಹಕ್ಕುಗಳನ್ನಾಗಿ ಮಾಡಿದರು. ಮಾಹಿತಿ ಹಕ್ಕು, ಆಹಾರದ ಹಕ್ಕು, ಶಿಕ್ಷಣದ ಹಕ್ಕುಗಳನ್ನು ಕಡ್ಡಾಯ ಮಾಡಿದರು. ಆ ಮೂಲಕ ಸಮಾನತೆಯೆಡೆಗೆ ದೇಶವನ್ನು ಮುನ್ನಡೆಸಿದರು ಎಂದಿದ್ದಾರೆ.

**ಜನರು ಕೊಳ್ಳುವ ಶಕ್ತಿ ಹೆಚ್ಚಾಗಬೇಕು**

ಸಮಾನ ಅವಕಾಶಗಳು ಸಿಕ್ಕಾಗ ಸಮಾನತೆಯ ದಿಕ್ಕಿಗೆ ನಾವು ಸಾಗಬಹುದು ಎನ್ನುವ ಕಾರಣದಿಂದಲೇ ಐದು ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ಜನರ ಕೈಯಲ್ಲಿ ಹಣ ಇರಬೇಕು, ಜನರು ಕೊಳ್ಳುವ ಶಕ್ತಿ ಹೆಚ್ಚಾಗಬೇಕು. ಇದಕ್ಕೆ ತಕ್ಕಂತೆ ರಾಜ್ಯದ ಜನರ ಜೇಬಿಗೆ ಹಣ ನೀಡುವ ಗ್ಯಾರಂಟಿಗಳನ್ನು ನಾವು ಜಾರಿ ಮಾಡಿದೆವು. ಮಧ್ಯವರ್ತಿಗಳ ಹಾವಳಿ ಇಲ್ಲದಂತೆ ನೇರವಾಗಿ ಜನರಿಗೆ ಹಣ ತಲುಪಿಸುತ್ತಿದ್ದೇವೆ. ಇದು ಇನ್ನಷ್ಟು ಪರಿಣಾಮಕಾರಿಯಾಗಿ ಜನರಿಗೆ ತಲುಪಿಸುವ ಜವಾಬ್ದಾರಿ ನಿಮ್ಮೆಲ್ಲರ ಮೇಲಿದೆ. ಇಲ್ಲಿಯವರೆಗೂ 35 ಸಾವಿರ ಕೋಟಿ ರೂ. ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಖರ್ಚು ಮಾಡಿದ್ದೇವೆ. ಈಗಲಾದರೂ ನಂಜುಂಡಪ್ಪ ಅವರ ವರದಿಯಲ್ಲಿನ ಪ್ರಾದೇಶಿಕ ಅಸಮಾನತೆ ಕಡಿಮೆಯಾಗಿದೆಯಾ ಎನ್ನುವುದನ್ನು ಅಧ್ಯಯನ ನಡೆಸಿ ವರದಿ ನೀಡಲು ಗೋವಿಂದರಾವ್ ಅವರ ಸಮಿತಿ ರಚಿಸಲಾಗಿದೆ. ಏಕೆ ಉತ್ತರ ಕರ್ನಾಟಕದ ಅಸಮಾನತೆ ಕಡಿಮೆ ಆಗಿಲ್ಲ ಎನ್ನುವ ಬಗ್ಗೆಯೂ ಬೆಳಗಾವಿ ಅಧಿವೇಶನದಲ್ಲಿ ಚರ್ಚಿಸಿದ್ದೇವೆ. ಇದನ್ನು ನಾವು ಗಂಭೀರವಾಗಿ ಪರಿಗಣಿಸಿದ್ದೇವೆ. ನೀವೂ ಅಷ್ಟೆ ಗಂಭೀರವಾಗಿ ಪರಿಗಣಿಸಿ ಪ್ರಾದೇಶಿಕ ಅಸಮತೋಲನ ತೊಡೆದು ಹಾಕಲು ಶ್ರಮಿಸಬೇಕು ಎಂದಿದ್ದಾರೆ.


ಯುವ ಜನತೆ ನಮ್ಮ ಸಮಾಜದ ಆಸ್ತಿ. ಇವರ ಭವಿಷ್ಯ ಹಾಳಾಗದಂತೆ ಎಚ್ಚರ ವಹಿಸುವ ಸವಾಲನ್ನು ಐಪಿಎಸ್ ಅಧಿಕಾರಿಗಳು ಸ್ವೀಕರಿಸಬೇಕು. ಡ್ರಗ್ಸ್ ಹಾವಳಿ, ಅಪರಾಧಿಕ ಜಗತ್ತಿನ ಕಡೆಗೆ ಯುವ ಜನತೆ ಆಕರ್ಷಿತರಾಗದಂತೆ ಎಚ್ಚರ ವಹಿಸಿ. ತಂತ್ರಜ್ಞಾನ ಮತ್ತು ವಿಜ್ಞಾನದ ಪ್ರಗತಿ ಆಗುತ್ತಿದೆ. ಈ ಪ್ರಗತಿ ಅಪರಾಧಗಳಿಗೆ ಬಳಕೆ ಆಗದೆ ಯುವ ಜನರ ಭವಿಷ್ಯ ರೂಪಿಸಲು ಸಹಕಾರಿ ಆಗುವಂತೆ ಕರ್ತವ್ಯ ನಿರ್ವಹಿಸಿ ಎಂದು ಸೂಚಿಸಿದ್ದಾರೆ.

ಅಧಿಕಾರಿ ವರ್ಗ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿದರೆ ರಾಜ್ಯದಲ್ಲಿ ಅದ್ಭುತ ಬದಲಾವಣೆ, ಸುಧಾರಣೆಗಳನ್ನು ತರಲು ಸಾಧ್ಯವಿದೆ. ಇದಕ್ಕಾಗಿ ನಿಮ್ಮ ಕಾರ್ಯಕ್ಷಮತೆ ಬಳಕೆಯಾಗಲಿ. ಅಧಿಕಾರಿ ವರ್ಗಕ್ಕೆ ನಮ್ಮ ಸಲಹೆಯ ಅಗತ್ಯ ಇಲ್ಲ. ನೀವು ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಂಡರೆ ಸಾಕು. ಭ್ರಷ್ಟಾಚಾರ ವ್ಯವಸ್ಥೆ ಕಡಿಮೆ ಆಗುವ ಬದಲಿಗೆ ಹೆಚ್ಚಾಗುತ್ತಿರುವುದು ದುರಂತ. ಆದ್ದರಿಂದ ನಾವೆಲ್ಲರೂ ನಮ್ಮ ಆತ್ಮಸಾಕ್ಷಿಗೆ ತಕ್ಕಂತೆ ಪ್ರಾಮಾಣಿಕವಾಗಿ ನಡೆದುಕೊಳ್ಳೋಣ ಎಂದು ತಿಳಿಸಿದ್ದಾರೆ. 39 ಸಾವಿರ ಕೋಟಿ ಬಿಲ್ ಬಾಕಿ

ನಮ್ಮ-ನಿಮ್ಮ ಉದ್ದೇಶ ಒಂದೇ. ಸಮಾಜದ ಪ್ರಗತಿ ಮತ್ತು ಆರೋಗ್ಯಕರ ಬದಲಾವಣೆ. ಇದಕ್ಕಾಗಿ ನಮ್ಮ ನಮ್ಮ ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಳ್ಳೋಣ. ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಸುಳ್ಳನ್ನು ಪದೇ ಪದೇ ಹರಡಿಸುತ್ತಿದ್ದಾರೆ. ಇದು ಸುಳ್ಳು ಎನ್ನುವುದು ನಿಮಗೇ ಗೊತ್ತಿದೆ. ಹಿಂದಿನ ಸರ್ಕಾರ ಬಜೆಟ್ ಒಪ್ಪಿಗೆ ಪಡೆಯದೆ ಯದ್ವಾ ತದ್ವಾ ಟೆಂಡರ್ ಕರೆದು ಹಾನಿ ಮಾಡಿತ್ತು. ಸುಮಾರು 39 ಸಾವಿರ ಕೋಟಿ ರೂ ಬಿಲ್ ಬಾಕಿ ಉಳಿಸಿ ಹೋಗಿದ್ದರು. ಜೊತೆಗೆ ಕೇಂದ್ರ ಸರ್ಕಾರದಿಂದ ನಮಗೆ ಅನ್ಯಾಯ ಮುಂದುವರೆದಿದೆ. ಇದೆಲ್ಲವನ್ನೂ ಸರಿದೂಗಿಸಿಕೊಂಡು ಅಭಿವೃದ್ಧಿಗೂ ಹಣ ಒದಗಿಸುತ್ತಿದ್ದೇವೆ. ಆದ್ದರಿಂದ ಇಲಾಖೆಗಳಲ್ಲಿರುವ ಹಣ ಹೆಚ್ಚು ಸೋರಿಕೆ ಆಗದಂತೆ ತಡೆಯುವ ಜವಾಬ್ದಾರಿ ಮತ್ತು ಕರ್ತವ್ಯ ಅಧಿಕಾರಿಗಳ ಮೇಲಿದೆ. ಹಣ ಸಂಗ್ರಹಿಸುವ ಇಲಾಖೆಗಳು ಮತ್ತು ಹಣ ಖರ್ಚು ಮಾಡುವ ಇಲಾಖೆಗಳೆರಡೂ ಸಮತೂಕದಿಂದ ಕರ್ತವ್ಯ ನಿರ್ವಹಿಸಬೇಕು.

ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಅತೀಕ್ ಅಹ್ಮದ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್ ಸೇರಿ ಎಲ್ಲಾ ಹಿರಿಯ ಅಧಿಕಾರಿಗಳು, ಸಚಿವರಾದ ಜಮೀರ್ ಅಹಮದ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಉಪಸ್ಥಿತರಿದ್ದರು.

## ಸಂಪುಟ ಪುನಾರಚನೆ ಪರೋಕ್ಷ ಸುಳಿವು ನೀಡಿದ ಮುಖ್ಯಮಂತ್ರಿ



ಬೆಂಗಳೂರು: ಕರ್ನಾಟಕ ಸರ್ಕಾರದಲ್ಲಿ ಈ ಹೊಸ ವರ್ಷಕ್ಕೆ ಸಂಪುಟ ಪುನಾರಚನೆ ಆಗಲಿದೆಯೇ? ಎಂಬ ಕುರಿತು ಮತ್ತೆ ಚರ್ಚೆ ಶುರುವಾಗಿದೆ. ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಲಿದ್ದಾರೆ ಎಂಬ ಸುದ್ದಿಗಳೂ ಹರಿದಾಡಿತ್ತು. ಹಾಗೇ, ಹೊಸ ಶಾಸಕರು ಸಚಿವರಾಗಿ ಅಧಿಕಾರ ವಹಿಸಿಕೊಳ್ಳುವ ಬಗ್ಗೆಯೂ ವದಂತಿಗಳು ಹರಿದಾಡಿದ್ದವು. ಆದರೆ, ಕಾಂಗ್ರೆಸ್ ಪಕ್ಷದ ಯಾವ ನಾಯಕರೂ ಈ ಬಗ್ಗೆ ಮಾಹಿತಿ ನೀಡಿಲ್ಲ. ಇದರ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದ ಹೇಳಿಕೆಯಿಂದ ಸಂಪುಟ ಪುನಾರಚನೆ ವಿಚಾರ ಮತ್ತೆ ಜೀವ ಪಡೆದಿದೆ.

ಹೊಸ ಟೀಂ ಕಟ್ಟುವ ಬಗ್ಗೆ ಸಿದ್ದರಾಮಯ್ಯ ಪರೋಕ್ಷ ಸುಳಿವು ನೀಡಿದ್ದಾರೆ. ಹೊಸ ತಂಡವನ್ನು ಕಟ್ಟುವ ಬಗ್ಗೆ ಸಿಎಂ ಸಿದ್ದರಾಮಯ್ಯ ಹೇಳಿಕೆ ನೀಡಿರುವುದು ಚರ್ಚೆಗೆ ಕಾರಣವಾಗಿದೆ. ಡಿಸೆಂಬರ್ ಅಂತ್ಯಕ್ಕೆ ಸಂಪುಟ ಪುನಾರಚನೆ ಬಗ್ಗೆ ಬೆಳವಣಿಗೆ ಆಗಿತ್ತು. ಕೆಲವು ಪ್ರಭಾವಿ ನಾಯಕರ ಒತ್ತಡಕ್ಕೆ ಆ ವಿಷಯ ತಣ್ಣಗಾಗಿತ್ತು. ಇದೀಗ ಮತ್ತೆ ರಾಜ್ಯ ಸಚಿವ ಸಂಪುಟ ಪುನಾರಚನೆಗೆ ಆಗ್ರಹ ಶುರುವಾಗಿದೆ. ಬಜೆಟ್ ಅಧಿವೇಶನದ ವೇಳೆಗೆ ಕೆಲವು ಬದಲಾವಣೆಯಾಗುವ ಸಾಧ್ಯತೆಯಿದೆ.

ಈ ಬದಲಾವಣೆ ಒಂದೇ ಸ್ಥಾನಕ್ಕೆ ಸೀಮಿತನಾ ಅಥವಾ ಹೆಚ್ಚು ಸಚಿವರ ಬದಲಾವಣೆಯಾಗುತ್ತದೆಯಾ? ಎಂಬ ಬಗ್ಗೆ ಖಚಿತ ಮಾಹಿತಿಯಿಲ್ಲ. ಕೆಪಿಸಿಸಿ ಅಧ್ಯಕ್ಷ ಸ್ಥಾನದ ಮೇಲೂ ನಾಯಕರು ಕಣ್ಣು ಇಟ್ಟಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆಗೆ ಹಲವು ನಾಯಕರು ಲಾಬಿ ಮಾಡುತ್ತಿದ್ದಾರೆ. ಸಚಿವ ಸ್ಥಾನದ ಜತೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ನಿಭಾಯಿಸುವ ಬೇಡಿಕೆ ಕೇಳಿಬಂದಿದೆ. ಈ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ನಿರ್ಧಾರದ ಮೇಲೆ ಎಲ್ಲರ ಗಮನ ನೆಟ್ಟಿದೆ.

ಈ ಹಿಂದೆ ಮುಖ್ಯಮಂತ್ರಿ ಸ್ಥಾನಕ್ಕಾಗಿ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವೆ ಭಾರೀ ಪೈಪೋಟಿ ಏರ್ಪಟ್ಟಿತ್ತು. ಬಳಿಕ, ಕಾಂಗ್ರೆಸ್ ಹೈಕಮಾಂಡ್ ಡಿ.ಕೆ. ಶಿವಕುಮಾರ್ ಮನವೊಲಿಸಿ ಡಿಸಿಎಂ ಸ್ಥಾನ ವಹಿಸಿತ್ತು. 2025ರಲ್ಲಿ ರಾಜ್ಯ ಸರ್ಕಾರದಲ್ಲಿ ಮಹತ್ವದ ಬದಲಾವಣೆಯಾಗಲಿದೆ ಎನ್ನಲಾಗಿತ್ತು. ಇತ್ತೀಚೆಗಷ್ಟೆ ಹೇಳಿಕೆ ನೀಡಿದ್ದ ಡಿಸಿಎಂ ಡಿ.ಕೆ. ಶಿವಕುಮಾರ್, ಕರ್ನಾಟಕದಲ್ಲಿ ಸದ್ಯಕ್ಕೆ ಮುಖ್ಯಮಂತ್ರಿ ಕುರ್ಚಿ ಖಾಲಿ ಇಲ್ಲ. ಅಧಿಕಾರ ಹಂಚಿಕೆ ವಿಷಯದಲ್ಲಿ ನಮ್ಮ ನಡುವೆ ಒಪ್ಪಂದವಾಗಿರುವುದು ನಿಜ. ಸಮಯ ಬಂದಾಗ ಆ ಬಗ್ಗೆ ಬಹಿರಂಗಪಡಿಸುತ್ತೇವೆ ಎಂದು ಹೇಳಿದ್ದರು.

ಸಿಎಂ ಸಿದ್ದರಾಮಯ್ಯ ಕೂಡ ಹೊಸ ವರ್ಷದಲ್ಲಿ ಸಂಪುಟ ಪುನಾರಚನೆ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸಲಿದೆ ಎಂದು ಹೇಳಿದ್ದರು.

## ಗುತ್ತಿಗೆದಾರ ಆತ್ಮಹತ್ಯೆ ಪ್ರಕರಣ

### ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ : ಸಿದ್ದರಾಮಯ್ಯ



ಬೆಂಗಳೂರು: ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆಯವರು ರಾಜೀನಾಮೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ. ಇದು ರಾಜಕೀಯ ದ್ವೇಷದಿಂದ ಮಾಡಿರುವ ಆರೋಪ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬುಧವಾರ ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆಯವರು ರಾಜೀನಾಮೆ ನೀಡಬೇಕೆಂಬ ಪ್ರತಿಪಕ್ಷಗಳ ಒತ್ತಾಯ ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ , "ಆತ್ಮಹತ್ಯೆ ಮಾಡಿಕೊಂಡಿರುವ ಬೀದರ್‌ನ ಗುತ್ತಿಗೆದಾರನ ಡೆತ್ ನೋಟ್ ನಲ್ಲಿ ಸಚಿವ ಪ್ರಿಯಾಂಕ್ ಖರ್ಗೆಯವರ ಹೆಸರಿರುವುದಿಲ್ಲ. ಈ ಪ್ರಕರಣದಲ್ಲಿ ಅವರ ಪಾತ್ರವಾಗಲಿ, ಸಾಕ್ಷ್ಯವಾಗಲಿ ಇಲ್ಲ. ಆದ್ದರಿಂದ ರಾಜಿನಾಮೆ ಕೊಡುವ ಪ್ರಶ್ನೆ ಉದ್ಭವಿಸುವುದಿಲ್ಲ. ಆದಾಗ್ಯೂ ಯಾವುದೇ ವಿಚಾರಣೆಗೆ ತಾನು ಸಿದ್ಧವಿರುವುದಾಗಿ ಸಚಿವರು ತಿಳಿಸಿದ್ದಾರೆ. ಆದರೆ ಇಂತಹದೇ ಪ್ರಕರಣದಲ್ಲಿ ಹಿಂದೆ ಬಿಜೆಪಿಯ ಕೆ.ಎಸ್.ಈಶ್ವರಪ್ಪಅವರ ಹೆಸರನ್ನು ಡೆತ್ ನೋಟ್ ನಲ್ಲಿ ಬರೆಯಲಾಗಿತ್ತು. ಪ್ರಕರಣದ ಸಂಬಂಧ ದಾಖಲಾಗಿರುವ ದೂರಿನ ತನಿಖೆಯನ್ನು ಸಿಐಡಿಗೆ ವಹಿಸಲಾಗಿದ್ದು, ವರದಿ ಬಂದ ನಂತರ ಸೂಕ್ತ ಕ್ರಮಕೈಗೊಳ್ಳಲಾಗುವುದು. ಇದು ರಾಜಕೀಯ ದ್ವೇಷದಿಂದ ಮಾಡಿರುವ ಆರೋಪ" ಎಂದು ತಿಳಿಸಿದರು.

**ಬಿಜೆಪಿ ಯಾವುದೇ ಪ್ರಕರಣವನ್ನು ಸಿಬಿಐಗೆ ವಹಿಸಿಲ್ಲ :**

ಬಿಜೆಪಿಯವರು ತನಿಖೆಯನ್ನು ಸಿಬಿಐಗೆ ವಹಿಸಬೇಕೆಂದು ಒತ್ತಾಯಿಸುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ರಾಜ್ಯದ ಪೊಲೀಸರ ಬಗ್ಗೆ ಬಿಜೆಪಿಯವರಿಗೆ ನಂಬಿಕೆಯಿಲ್ಲವೇ? ಬಿಜೆಪಿಯವರು ಅಧಿಕಾರದಲ್ಲಿದ್ದಾಗ , ಒಂದು ಪ್ರಕರಣವನ್ನೂ ಸಿಬಿಐಗೆ ವಹಿಸಿರಲಿಲ್ಲ. ಆದ್ದರಿಂದ ಸಿಬಿಐಗೆ ತನಿಖೆ ವಹಿಸಬೇಕೆಂಬ ಬೇಡಿಕೆ ಮುಂದಿರಿಸಲು ಬಿಜೆಪಿಯವರಿಗೆ ನೈತಿಕತೆ ಇಲ್ಲ ಎಂದು ತಿಳಿಸಿದರು.

**ಸಿ.ಟಿ.ರವಿ ಪ್ರಕರಣ ಸಿಐಡಿ ತನಿಖೆ:** ಎಂ-ಎಲ್‌ಸಿ ಸಿ.ಟಿರವಿಯವರು ರಾಜ್ಯಪಾಲರಿಗೆ ದೂರು ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಸಿ.ಟಿ.ರವಿಯವರ ಪ್ರಕರಣವನ್ನೂ ಸಿಐಡಿಗೆ ವಹಿಸಲಾಗಿದೆ. ಅವಾಚ್ಯ ಪದಬಳಕೆ ಆಗಿರುವ ಬಗ್ಗೆ ಎಫ್ ಎಸ್ ಎಲ್ ವರದಿ ಬರಲಿದೆ. ಮಹಿಳಾ ಸಚಿವರಿಗೆ ಅವಹೇಳನ ಮಾಡಿರುವ ಆರೋಪವಿದ್ದು, ಸಿ.ಟಿ.ರವಿಯವರ ಮೇಲೆ ದೂರು ದಾಖಲಾಗಿದೆ ಎಂದರು.

## ಪುಣೆ-ಎಸ್‌ಎಸ್‌ಎಎಸ್ ಹುಬ್ಬಳ್ಳಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಇಂದು ಘಟಪ್ರಭಾ ನಿಲ್ದಾಣದಲ್ಲಿ ಹೆಚ್ಚುವರಿ ನಿಲುಗಡೆಗೆ ಹಸಿರು ನಿಶಾನೆ

ಬೆಳಗಾವಿ : ನೈಋತ್ಯ ರೈಲ್ವೆ ವತಿಯಿಂದ ರೈಲು ಸಂಖ್ಯೆ 20670 ಪುಣೆ-ಎಸ್‌ಎಸ್‌ಎಎಸ್ ಹುಬ್ಬಳ್ಳಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಜನವರಿ 2 ರಂದು ಸಂಜೆ 7 ಗಂಟೆಗೆ ಘಟಪ್ರಭಾ ನಿಲ್ದಾಣದಲ್ಲಿ ಹೆಚ್ಚುವರಿ ನಿಲುಗಡೆಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಿ ಹಸಿರು ನಿಶಾನೆ ತೋರುವರು. ಲೋಕಸಭಾ ಸದಸ್ಯರಾದ ಜಗದೀಶ್ ಶೆಟ್ಟರ್ ಹಾಗೂ ರಾಜ್ಯಸಭಾ ಸದಸ್ಯರಾದ ಈರಣ್ಣ ಕಡಾಡಿ ಅವರು ಭಾಗವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ವಿಧಾನ ಸಭೆ ಸದಸ್ಯರಾದ ರಮೇಶ ಜಾರಕಿಹೊಳಿ, ವಿಧಾನ ಪರಿಷತ್ ಸದಸ್ಯರಾದ ಪ್ರಕಾಶ್ ಹುಕ್ಕೇರಿ, ಚನ್ನರಾಜ್ ಹಟ್ಟಿಹೊಳಿ, ಹನಮಂತ ನಿರಾಣಿ, ಡಾ.ತಳವಾರ ಸಾಬಣ್ಣ, ಲಖನ್ ಜಾರಕಿಹೊಳಿ ಹಾಗೂ ಎಂ.ನಾಗರಾಜು ಅವರು ಆಗಮಿಸುವರು.

## ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಹೊಸಬರ ನೇಮಕ ಹೈಕಮಾಂಡ್ ತೀರ್ಮಾನ: ಸತೀಶ್ ಜಾರಕಿಹೊಳಿ



ಬೆಳಗಾವಿ: ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಹೊಸಬರನ್ನು ನೇಮಕ ಮಾಡಬೇಕೆ ಅಥವಾ ಬೇಡವೇ ಎಂಬುದರ ಕುರಿತು ಪಕ್ಷದ ಹೈಕಮಾಂಡ್ ತೀರ್ಮಾನ ಕೈಗೊಳ್ಳಲಿದೆ.

ಈ ವಿಚಾರ ನಮ್ಮ ಹಂತದಲ್ಲಿ ನಿರ್ಧಾರವಾಗುವಂತದ್ದಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ಬುಧವಾರ ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಬ್ಬೊಬ್ಬರು ಎರಡು ಹುದ್ದೆಯಲ್ಲಿದ್ದರೆ ಜವಾಬ್ದಾರಿಯನ್ನು ನಿರ್ವಹಿಸುವುದು ಕಷ್ಟವಾಗುತ್ತದೆ. ಆದರಿಂದ, ಈ ಸಂಬಂಧ ಹೈಕಮಾಂಡ್ ಸೂಕ್ತ ಸಂದರ್ಭದಲ್ಲಿ ತೀರ್ಮಾನ ಕೈಗೊಳ್ಳಲಿದೆ ಎಂದು ಹೇಳಿದರು.

ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಸಮಿತಿಗೆ ನೂತನ ಅಧ್ಯಕ್ಷರನ್ನು ನೇಮಕ ಮಾಡುವ ಕುರಿತು ಎಲ್ಲರೂ ಚರ್ಚೆ ಮಾಡಿದ್ದೇವೆ. ಪಕ್ಷ ಸಂಘಟನೆಗೆ ಹೆಚ್ಚು ಸಮಯ ಮೀಸಲಿಡುವಂತಹ ವ್ಯಕ್ತಿಯ ಹೆಸರನ್ನು ಶಿಫಾರಸ್ಸು ಮಾಡಿದ್ದೇವೆ. ಈ ಸ್ಥಾನಕ್ಕೆ ಮೃಣಾಲ್ ಹೆಬ್ಬಾಳ್ಕರ್ ಹೆಸರು ಚರ್ಚೆಗೆ ಬಂದಿಲ್ಲ ಎಂದು ಸತೀಶ್ ಜಾರಕಿಹೊಳಿ ತಿಳಿಸಿದರು.

ನಿಗಮ, ಮಂಡಳಿಗಳಿಗೆ ಅಧ್ಯಕ್ಷರು, ನಿರ್ದೇಶಕರನ್ನು ನೇಮಕ ಮಾಡುವ ವಿಚಾರದಲ್ಲಿ ಶಿಫಾರಸ್ಸು ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿದ್ದಾರೆ. ಈಗಾಗಲೇ, ಶೇ.70ರಷ್ಟು ನೇಮಕಾತಿಗಳನ್ನು ಮಾಡಲಾಗಿದೆ. ಉಳಿದ ಹುದ್ದೆಗಳಿಗೂ ಶೀಘ್ರದಲ್ಲೆ ಅರ್ಹರನ್ನು ನೇಮಕ ಮಾಡುತ್ತಾರೆ ಎಂದು ಅವರು ಹೇಳಿದರು.

ರಾಜ್ಯ ಸರಕಾರ ಉತ್ತಮ ರೀತಿಯಲ್ಲಿ ಆಡಳಿತ ನಡೆಸುತ್ತಿದೆ. ಬಿಜೆಪಿಯವರು ಅನಾವಶ್ಯಕವಾಗಿ ಗೊಂದಲ ಮೂಡಿಸಲು ಪ್ರಯತ್ನ ನಡೆಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಮಂಡನೆಯಾಗಲಿರುವ ರಾಜ್ಯ ಬಜೆಟ್ ಮೇಲೆ ಜನರು ಸಾಕಷ್ಟು ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದಾರೆ. ನಮ್ಮ ಸರಕಾರ ಜನಪರವಾಗಿ ಕೆಲಸ ಮಾಡಲಿದೆ ಎಂದು ಸತೀಶ್ ಜಾರಕಿಹೊಳಿ ಹೇಳಿದರು. ರಾಜ್ಯದಲ್ಲಿ ಈ ಬಾರಿ ಸುರಿದ ಭಾರಿ ಮಳೆಯಿಂದಾಗಿ ಸಾಕಷ್ಟು ಕಡೆ ಸೇತುವೆಗಳು ಹಾಳಾಗಿವೆ. ಅವುಗಳ ದುರಸ್ಥಿಗೆ ಈಗಾಗಲೆ ಕ್ರಮ ಕೈಗೊಳ್ಳಲಾಗಿದೆ. ಬಜೆಟ್‌ನಲ್ಲಿ ಸೇತುವೆ ಹಾಗೂ ರಸ್ತೆ ನಿರ್ಮಾಣಕ್ಕಾಗಿ ಹೆಚ್ಚುವರಿಯಾಗಿ 4 ಸಾವಿರ ಕೋಟಿ ರೂ.ಗಳ ಅನುದಾನ ಒದಗಿಸಲಾಗಿದೆ ಎಂದು ಅವರು ತಿಳಿಸಿದರು.

## ಇಂದು ಬ.ವಿ.ವಿ. ಸಂಭ್ರಮ-ಮುಧೋಳ ಹಬ್ಬ




ಮುಧೋಳ: ಅ.19. 1906 ರಲ್ಲಿ ಈ ಅಖಂಡ ವಿಜಯಪೂರ ಜಿಲ್ಲೆಯ ಜನರಿಗೆ ಮೌಲ್ಯಧಾರಿತ ಶಿಕ್ಷಣ ಮತ್ತು ಸಂಸ್ಕಾರವನ್ನು ನೀಡಲು ಪರಮ ಪೂಜ್ಯ ಬೀಳೂರು ಗುರುಬಸವ ಶ್ರೀಗಳಿಂದ ಒಂದು ಸಂಸ್ಕೃತ ಪಾಠ ಶಾಲೆಯ ಮೂಲಕ ಆರಂಭವಾದ ಬಾಗಲಕೋಟೆಯ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘವು ಪ್ರಸ್ತುತ ಪ್ರಸ್ತುತ 50,000 ವಿದ್ಯಾರ್ಥಿಗಳು 6000.ಕ್ಕೂ ಹೆಚ್ಚು ಉತ್ತಮ ವಿದ್ಯಾರ್ಹತೆಯ ಸಮರ್ಪಿತ ಸಿಬ್ಬಂದಿಗಳ ಮೇಲ್ವಿಚಾರಣೆಯಲ್ಲಿ ವೈದ್ಯಕೀಯ, ದಂತವೈದ್ಯಕೀಯ, ಡಿಪ್ಲೋಮಾ, ಇಂಜಿನಿಯರಿಂಗ್, ತಂತ್ರಜ್ಞಾನ, ಕಲೆ, ವಿಜ್ಞಾನ, ಸಂಶೋಧನೆ, ವಾಣಿಜ್ಯ, ಕಾನೂನು, ನಿರ್ವಹಣೆ, ಶಿಕ್ಷಣ, ಪತ್ರಿಕೋದ್ಯಮ, ಮಾನವ ಸಂಪನ್ಮೂಲ, ನರ್ಸಿಂಗ್, ತರಬೇತಿ, ಕ್ರೀಡೆ ಮತ್ತು ವೃತ್ತಿಪರ ವ್ಯಾಪಾರ ವಿಭಾಗಗಳ ಜೊತೆಗೆ ತಮ್ಮ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣವನ್ನು ಅಭ್ಯಸಿಸುತ್ತಿದ್ದಾರೆ ಎಂಬುದು ಹೆಮ್ಮೆಯ ವಿಷಯ, ಇದರೊಂದಿಗೆ ಗ್ರಾಮೀಣಾಭಿವೃದ್ಧಿ, ಕೌಶಲ್ಯ ತರಬೇತಿ, ಮತ್ತು ಪುಣ್ಯಕ್ಷೇತ್ರಗಳಾದ ಶ್ರೀಶೈಲ ಹಾಗೂ ತಿರುಪತಿಯಲ್ಲಿ ಅನ್ನ ಛತ್ರಗಳನ್ನು ನಿರ್ವಹಿಸುತ್ತಿದೆ. ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಸಿ. ಚರಂತಿಮಠ ಮತ್ತು ದೂರದೃಷ್ಟಿಯ ಸದಸ್ಯರುಗಳ ಅವಿರತ ಪ್ರಯತ್ನಗಳಿಂದ ಗುಣಮಟ್ಟದ ಶಿಕ್ಷಣ ನೀಡುವ ಧ್ಯೇಯೋದ್ದೇಶದಿಂದ 166ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ನಡೆಸುತ್ತಿರುವ ಪ್ರಮುಖ ಶೈಕ್ಷಣಿಕ ಸಂಸ್ಥೆಯಾಗಿದೆ.

ಕಾಯಕವೇ ಕೈಲಾಸ ಎಂದು ನಿಸ್ವಾರ್ಥ ಸೇವೆಯ ಮೂಲಕ ಗುಣಮಟ್ಟದ ಆಧುನಿಕ ಶಿಕ್ಷಣವನ್ನು ಒದಗಿಸಲು ಅತ್ಯುತ್ತಮ ಪ್ರಯತ್ನ ಮಾಡುವದಕ್ಕಾಗಿ ಸಂಘದ ಅನೇಕ ಸಂಸ್ಥೆಗಳು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿರುವುದು ಗಮನಾರ್ಹ. ಸಂಘವು 1949ನೇ ಇಸ್ವಿಯಲ್ಲಿ ಮುಧೋಳದಲ್ಲಿ ಪ್ರಾಥಮಿಕ, ಮಾಧ್ಯಮಿಕ ಶಾಲೆ ಪ್ರಾರಂಭಿಸುವ ಮೂಲಕ ನಗರದಲ್ಲಿ ತನ್ನ ಕಾರ್ಯಕ್ಷೇತ್ರವನ್ನು ವಿಸ್ತರಿಸುತ್ತ ಪ್ರಸ್ತುತ 19 ಅಂಗ ಸಂಸ್ಥೆಗಳನ್ನು ಸ್ಥಾಪಿಸಿ, ಈ ಭಾಗದ 10,000ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಅತ್ಯುತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುತ್ತಿದೆ.

ವಿದ್ಯಾರ್ಥಿಗಳಲ್ಲಿ ಶಿಕ್ಷಣ, ಸಂಸ್ಕೃತಿ, ಕಲೆ, ಕ್ರೀಡಾ ಮನೋಭಾವ, ದೇಶಭಕ್ತಿ, ಸಾಮಾಜಿಕ ಹೊಣೆಗಾರಿಕೆಗಳ ಮಹತ್ವ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಅನುವು ಮಾಡಿಕೊಡಲು ಬಸವೇಶ್ವರ ಈ ಸಂಘವು ಬಿವಿವಿ. ಸಂಭ್ರಮದ ಮುಖಾಂತರ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈಗಾಗಲೇ ಬಿಡದಿ"(ಬೆಂಗಳೂರು) ಹಬ್ಬವನ್ನು ಯಶಸ್ವಿಯಾಗಿ ಆಯೋಜಿಸಲಾಗಿದೆ. ಅದೇ ಮಾದರಿಯಲ್ಲಿ ಮುಧೋಳ ಮತ್ತು ರಾಮದುರ್ಗಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಅಂತಿಮವಾಗಿ ಸಂಘದ ಅಡಿಯಲ್ಲಿ ಬರುವ ಎಲ್ಲಾ ಶಾಲಾ ಕಾಲೇಜುಗಳ ಜೊತೆಗೆ ಬಾಗಲಕೋಟೆ ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳನ್ನು ಒಳಗೊಂಡು "ಬಿ.ವಿ.ವಿ. ಸಂಭ್ರಮ" ವನ್ನು ಬಾಗಲಕೋಟೆಯಲ್ಲಿ ಆಚರಿಸಲಾಗುತ್ತದೆ.

ಬಿವಿವಿ. ಸಂಭ್ರಮವನ್ನು ಮುಧೋಳ ತಾಲೂಕಿನ ಶಾಲಾ ಕಾಲೇಜುಗಳನ್ನೊಳಗೊಂಡು "ಮುಧೋಳ ಹಬ್ಬ" ವನ್ನಾಗಿ ಜ.2 ರಂದು ಆಚರಿಸಲು ನಿರ್ಧರಿಸಿದ್ದು, ಈ ಹಬ್ಬದ ಅಂಗವಾಗಿ ಎಲ್ಲ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಎಲ್ಲ ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಒಂದೆಡೆ ಸೇರುವ ಮೂಲಕ ಶೈಕ್ಷಣಿಕ ಹಬ್ಬವಾಗಿ ಆಚರಿಸಲು ಮತ್ತು ಎಲ್ಲ ಶಿಕ್ಷಣ ಸಂಸ್ಥೆಗಳ ಜೊತೆಗೂಡಿ ಒಂದು ಒಳ್ಳೆಯ ಶಿಕ್ಷಣ ಪರಿಸರ ಒದಗಿಸಲು ಇದೊಂದು ಪ್ರಯತ್ನವಾಗಿದ್ದು, ಈ ಹಬ್ಬದಲ್ಲಿ ಉಪನ್ಯಾಸ ಕಾರ್ಯಕ್ರಮ, ವಿಚಾರಗೋಷ್ಠಿ, ನಾಟಕ ಪ್ರದರ್ಶನ, ಸಾಂಸ್ಕೃತಿಕ ಕಾರ್ಯಕ್ರಮ, ಸಂಗೀತ ಸಂಜೆ, ವಿದ್ಯಾರ್ಥಿ ಸಾಧಕರಿಗೆ ಸನ್ಮಾನ ಹಾಗೂ ಆಯೋಜಿತ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಣೆ ಆಯೋಜಿಸಿದೆ.

ಜನವರಿ 02 ರಂದು ಮುಂಜಾನೆ 8:45ಕ್ಕೆ ಮುಧೋಳದ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಮೆರವಣಿಗೆ ಹಮ್ಮಿಕೊಳ್ಳಲಾಗಿದ್ದು, ಈ ವರ್ಷದ "ಬಿವಿವಿ. ಸಂಭ್ರಮ -ಮುಧೋಳ ಹಬ್ಬ"ವನ್ನು ಪರಮ ಪೂಜ್ಯ ಸ್ವಾಮಿ ನಿರ್ಭಯಾನಂದ ಸರಸ್ವತಿ, ಅಧ್ಯಕ್ಷರು ರಾಮಕೃಷ್ಣ ವಿವೇಕಾನಂದ ಆಶ್ರಮ ಗದಗ-ವಿಜಯಪುರ ಇವರ ಅಮೃತ ಹಸ್ತದಿಂದ ಉದ್ಘಾಟನೆಗೊಳ್ಳುತ್ತಿದ್ದು, ಗೌರವ ಉಪಸ್ಥಿತಿ ಮಹೇಶ ಎನ್. ಅಥಣಿ ಅವರು ವಹಿಸುತ್ತಿದ್ದು, ಮುಧೋಳ ಸುತ್ತಮುತ್ತಲಿನ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಕಾರ್ಯಕ್ರಮದ ಅಧ್ಯಕ್ಷರಾದ ಡಾ.ವೀರಣ್ಣ ಸಿ. ಚರಂತಿಮಠ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಈ ಸಂದರ್ಭದಲ್ಲಿ ಹೈಸ್ಕೂಲ ಮತ್ತು ಮುಧೋಳ ಇಂಜನಿಯರಿಂಗ ಸಮಿತಿಯ ಕಾರ್ಯಾಧ್ಯಕ್ಷ ಮಹಾಂತೇಶ ಶೆಟ್ಟರ, ಮಹೇಶ ಕಕರಡ್ಡಿ ಮತ್ತು ಎಲ್ಲ ಶಾಲಾ ಕಾಲೇಜುಗಳ ಮುಖ್ಯಸ್ಥರು ಇತರರಿದ್ದರು.

## ಅಮರ ಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ



ಬೆಳಗಾವಿ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಬೆಳಗಾವಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಬುಧವಾರ (ಜ.1) ನಗರದ ಕುಮಾರ ಗಂಧರ್ವ ರಂಗಮಂದಿರದಲ್ಲಿ ಅಮರ ಶಿಲ್ಪಿ ಜಕಣಾಚಾರಿ ಅವರ ಸಂಸ್ಮರಣಾ ದಿನಾಚರಣೆಯನ್ನು ಸರಳವಾಗಿ ಆಚರಿಸಲಾಯಿತು.

ದೇಶದ ಮಾಜಿ ಪ್ರಧಾನ ಮಂತ್ರಿಗಳಾದ ಡಾ.ಮನಮೋಹನ ಸಿಂಗ್ ಅವರ ನಿಧನದಿಂದಾಗಿ ಶೋಕಾಚರಣೆ ಜಾರಿ ಇರುವ ಹಿನ್ನಲೆಯಲ್ಲಿ ಅಮರ ಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಮಾಡುವ ಮೂಲಕ ಗೌರವ ಸಲ್ಲಿಸಿ, ಸಂಸ್ಮರಣಾ ದಿನಾಚರಣೆಯನ್ನು ಸರಳವಾಗಿ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕ ಉಪ ಆಯುಕ್ತ ಉದಯಕುಮಾರ ತಳವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ವಿಧ್ಯಾವತಿ ಭಜಂತ್ರಿ ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.

## ಸಾರಿಗೆ ನಿಗಮಗಳಿಗೆ ಸಾಲ ಪಡೆಯಲು ಅನುಮೋದನೆ ನೀಡಿ ಆದೇಶಿಸಿದ ರಾಜ್ಯ ಸರಕಾರ

ಬೆಂಗಳೂರು : ನಾಲ್ಕು ಸಾರಿಗೆ ನಿಗಮಗಳು ನವೆಂಬರ್-2024ರ ಅಂತ್ಯಕ್ಕೆ ಬಾಕಿ ಉಳಿಸಿಕೊಂಡಿರುವ ಭವಿಷ್ಯ ನಿಧಿ ಹಾಗೂ ಇಂಧನದ ಬಾಕಿ ಮೊತ್ತ ಪಾವತಿಸಲು ಒಟ್ಟು 2000 ಕೋಟಿ ರೂ. ಮೊತ್ತದ ಸಾಲವನ್ನು ಹಣಕಾಸು ಸಂಸ್ಥೆಗಳಿಂದ ಪಡೆಯಲು ಅನುಮೋದನೆ ನೀಡಿ ರಾಜ್ಯ ಸರಕಾರ ಮಂಗಳವಾರ ಆದೇಶ ಹೊರಡಿಸಿದೆ.

ನಾಲ್ಕು ಸಾರಿಗೆ ನಿಗಮಗಳು ಪ್ರಸ್ತುತ ಎದುರಿಸುತ್ತಿರುವ ಆರ್ಥಿಕ ಸಂಕಷ್ಟದಿಂದ ಹೊರಬರಲು ಹಾಗೂ ಶಾಸನಬದ್ಧ ಪಾವತಿಯಾದ ಭವಿಷ್ಯ ನಿಧಿ ಹಾಗೂ ಇಂಧನದ ಬಾಕಿ ಮೊತ್ತ ಪಾವತಿಸಲು 3728.90 ಕೋಟಿ ರೂ. ಸಾಲದ ಅವಶ್ಯಕತೆ ಇದ್ದು, ಈ ಸಾಲದ ಮರುಪಾವತಿಗೆ ತಗಲುವ ಅಸಲು ಮತ್ತು ಬಡ್ಡಿ ಮೊತ್ತವನ್ನು ಸರಕಾರವು ಭರಿಸಲು ಕೋರಿ, ಸಂಸ್ಥೆಗಳಿಗೆ ಸರಕಾರದ ಸರ್ವೀಸ್ ಲೋನ್ ಅನ್ನು ಪಡೆಯಲು ಅನುಮತಿ ನೀಡಿ ಆದೇಶದಲ್ಲಿ ತಿಳಿಸಲಾಗಿದೆ.

ಕೆಎಸ್ಸಾರ್ಟಿಸಿ 623.80 ಕೋಟಿ ರೂ., ಬಿಎಂಟಿಸಿ 589.20 ಕೋಟಿ ರೂ., ವಾಯುವ್ಯ ಸಾರಿಗೆ ನಿಗಮ 646 ಕೋಟಿ ರೂ. ಹಾಗೂ ಕಲ್ಯಾಣ ಕರ್ನಾಟಕ ಸಾರಿಗೆ ನಿಗಮ 141 ಕೋಟಿ ರೂ.ಗಳನ್ನು ಸಾಲದ ರೂಪದಲ್ಲಿ ಆದೇಶದಲ್ಲಿ ಉಲ್ಲೇಖಿಸಲಾಗಿದೆ.

*******

# ಅತ್ಯಾಧುನಿಕ ಗಣಕಯಂತ್ರ ಪ್ರಯೋಗಾಲಯ ಉದ್ಘಾಟನೆ



ಬಾಗಲಕೋಟೆ: ಅಧುನಿಕತೆಗೆ ತಕ್ಕಂತೆ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಪ್ರಯೋಗಾಲಯಗಳ ನವಿಕರಣಗೊಳಿಸಲಾಗಿದೆ ಅದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದು ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಹೇಳಿದರು.

ಅವರು ನಗರದ ಬಿ.ವಿ.ವಿ.ಸಂಘದ ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದಲ್ಲಿ ಮಂಗಳವಾರ ನೂತನ ಗಣಕ ಯಂತ್ರಗಳ ಗಣಿತಶಾಸ್ತ್ರದ ಪ್ರಯೋಗಾಲಯವನ್ನು ಉದ್ಘಾಟಿಸಿ ಮಾತನಾಡಿದರು.

ಆಧುನಿಕತೆಗೆ ತಕ್ಕಂತೆ ವಿದ್ಯಾರ್ಥಿಗಳ ಕಲಿಕೆಗೆ ಅನುಕೂಲವಾಗುವಂತೆ ಮಹಾವಿದ್ಯಾಲಯಗಳಲ್ಲಿ ಪ್ರಯೋಗಾಲಗಳನ್ನು ನವಿಕರಣಗೊಳಿಸಿ ಅತ್ಯಾಧುನಿಕ ಯಂತ್ರಗಳ ಸೌಲಭ್ಯಗಳನ್ನು ಒದಗಿಸಲಾಗಿದೆ, ದೂರ ಸಂಪರ್ಕ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಮಹಾವಿದ್ಯಾಲಯದ ಹಳೆ ವಿದ್ಯಾರ್ಥಿಯಾದ ಮಹಾಂತೇಶ ಬಣಗಾರರವರು ಮಹಾವಿದ್ಯಾಲಯಕ್ಕೆ ಸುಮಾರು 30ಕ್ಕೂ ಹೆಚ್ಚು ಅತ್ಯಾಧುನಿಕ ಗಣಕ ಯಂತ್ರಗಳನ್ನು ದೇಣಿಗೆಯಾಗಿ ನೀಡಿರುವರು ಅವುಗಳನ್ನು ಈ ಪ್ರಯೋಗಾಲಯದಲ್ಲಿ ಅಳವಡಿಸಿಲಾಗಿದೆ, ಈ ಎಲ್ಲ ಸೌಲಭ್ಯಗಳನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಮಹಾಂತೇಶ ಬಣಕಾರ ಮಾತನಾಡಿದ ನಮಗೆ ಜ್ಞಾನವನ್ನು ನೀಡಿದ ತಂದೆ ತಾಯಿ ಹಾಗೂ ಗುರು ಮತ್ತು ಮಹಾವಿದ್ಯಾಲಯಗಳು ಸದಾಕಾಲ ಸ್ಮರಣಿಯರು, ಅವರುಗಳ ಋಣ ತೀರಿಸಲಾಗದು ಎಂದರು.

ಕಾರ್ಯಕ್ರಮದಲ್ಲಿ ಬಿ.ವಿ.ವಿ.ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಕಾಲೇಜುಗಳ ಆಡಳಿತ ಮಂಡಳಿ ಕಾಯಾಧ್ಯಕ್ಷ ಗುರುಬಸವ ಸೂಳಿಬಾವಿ, ಪ್ರಾಚಾರ್ಯ ಡಾ.ಎಸ್.ಆರ್.ಗಾಂವಕರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಮಹಾಂತೇಶ ಬಣಕಾರವರನ್ನು ಸನ್ಮಾನಿಸಿ ಗೌರವಿಸಲಾಯಿತು

# ಸಂಪಾದಕರ ಸಂಘದ ಕೊಪ್ಪಳ ಘಟಕಕ್ಕೆ ನೂತನ ಸಾರಥಿಗಳು

## ಅಧ್ಯಕ್ಷರಾಗಿ ಶ್ರೀನಿವಾಸ ಕಾರ್ಯದರ್ಶಿಯಾಗಿ ಖಲೀಲ್ ಉಡೇವು ಆಯ್ಕೆ

ಕೊಪ್ಪಳ: ನಗರದ ಪ್ರವಾಸಿ ಮಂದಿರದಲ್ಲಿ ಸಂಘಟನೆಯ ರಾಜ್ಯಾಧ್ಯಕ್ಷ ಎ.ಸಿ. ತಿಪ್ಪೇಸ್ವಾಮಿ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಕೊಪ್ಪಳ ಜಿಲ್ಲಾ ಘಟಕದ ಪುನಾರಚನೆ ಭಾನುವಾರ ನಡೆಯಿತು.

ಕೊಪ್ಪಳ ಜಿಲ್ಲಾ ಘಟಕಕ್ಕೆ ಅಧ್ಯಕ್ಷರಾಗಿ ಶ್ರೀನಿವಾಸ ಎಂ.ಜೆ ಮತ್ತು ಪ್ರಧಾನ ಕಾರ್ಯದರ್ಶಿಯಾಗಿ ಮೊಹಮ್ಮದ್ ಖಲೀಲ್ ಉಡೇವು ಆವರು ಅವಿರೋಧವಾಗಿ ಆಯ್ಕೆಯಾದರು.

ನಂತರ ಈರಣ್ಣ ಕಳ್ಳಿಮನಿ ಹಾಗೂ ಎಸ್.ಎಂ, ಪಟೇಲ್ ಉಪಾಧ್ಯಕ್ಷರಾಗಿ, ವೈ.ಬಿ. ಜೂಡಿ ಜಂಟಿ ಕಾರ್ಯದರ್ಶಿ, ವೈ ನಾಗರಾಜ್ ಖಜಾಂಚಿಯಾಗಿ ಎಂ.ಡಿ. ಅಖೀಲ್ ಉಡ–'ೇವು ಸಂಘಟನಾ ಕಾರ್ಯದರ್ಶಿ, ಅಕ್ಷಯ್ ಇರಕಲ್ ಸಹಕಾರ್ಯದರ್ಶಿಯಾಗಿ, ಕಾರ್ಯಕಾರಿ ಮಂಡಳಿಯ ಸದಸ್ಯರಾಗಿ ದೇವುನಾಗನೂರು, ಎಚ್.ವಿ. ರಾಜಾಭಕ್ಷಿ ಆಯ್ಕೆಯಾದರು.



ಮುಂದಿನ ಜಿಲ್ಲಾ ಘಟಕದ ಸಭೆಯಲ್ಲಿ ಅನುಮೋದಿಸಿ ಹಿರಿಯ ಸದಸ್ಯ ಎನ್.ಎಂ. ದೊಡ್ಮನಿ ಅವರನ್ನು ರಾಜ್ಯ ಕಾರ್ಯಕಾರಣಿಗೆ ಕಳಿಸಿಕೊಡುವಂತೆ ರಾಜ್ಯಾಧ್ಯಕ್ಷ ಸಲಹೆ ನೀಡಿದರು.

ನಂತರ ಮಾತನಾಡಿದ ರಾಜ್ಯಾಧ್ಯಕ್ಷ ಎ.ಸಿ. ತಿಪ್ಪೇಸ್ವಾಮಿ, ಸ್ಥಳೀಯ ಅಂದರೆ ಜಿಲ್ಲಾಮಟ್ಟದ ದಿನಪತ್ರಿಕೆಗಳು ಸಾಕಷ್ಟು ಸಮಸ್ಯೆ ಎದುರಿಸುತ್ತಿವೆ, ಸರ್ಕಾರದಿಂದ ಸೂಕ್ತವಾಗಿರುವ ಸೌಲಭ್ಯಗಳು ಸಿಗುತ್ತಿಲ್ಲ, ಈ ಹಿಂದೆ ಹೋರಾಟ ಮಾಡುವ ಉದ್ದೇಶಕ್ಕೆ ಅಸ್ತಿತ್ವಕ್ಕೆ ಬಂದಿದ್ದ ಸಾಕಷ್ಟು ಸಂಪಾದಕರ ಸಂಘಗಳು ಸ್ವಾರ್ಥಕ್ಕೆ ನಾಶವಾಗಿವೆ ಎಂದರು.

ನಮ್ಮದು ವಿಭಿನ್ನ ಸಂಘಟನೆಯಾಗಿದ್ದು ಇಡೀ ರಾಜ್ಯದಾದ್ಯಂತ ಹೆಚ್ಚು ಮನ್ನಣೆ ಸಿಗುತ್ತಿದೆ. ಈಗಾಗಲೆ ರಾಜ್ಯದ 630 ಪತ್ರಿಕೆಗಳ ಪೈಕಿ ನಮ್ಮ ಸಂಘದಲ್ಲಿ 280ಕ್ಕೂ ಹೆಚ್ಚು ಪತ್ರಿಕೆಗಳು ಸದಸ್ಯತ್ವ ಪಡೆದುಕೊಂಡಿವೆ. ನಮ್ಮ ಜವಾಬ್ದಾರಿ ಹೆಚ್ಚಾಗಿದ್ದು, ಈ ಹಿನ್ನೆಲೆ ಸಂಘಟಿತರಾಗಿ ಹೋರಾಟ ಮಾಡಬೇಕಿದೆ ಎಂದರು.

ಪ್ರಧಾನ ಕಾರ್ಯದರ್ಶಿ ಟಿ.ಎಸ್. ಕೃಷ್ಣಮೂರ್ತಿ ಮಾತನಾಡಿ, ಈಗಾಗಲೆ ಜಿಲ್ಲಾ ಘಟಕದಿಂದ ಎಚ್.ಎಸ್. ಹರೀಶ್ ಮತ್ತು ವಿಶ್ವನಾಥ್ ಬೆಳಗಲ್‌ಮಠ ಅವರನ್ನು ಕೇಂದ್ರ ಸಮಿತಿಗೆ ತೆಗೆದುಕೊಳ್ಳಲಾಗಿದೆ. ನಮ್ಮ ಸಂಘಟನೆ ಗಟ್ಟಿಯಾಗಿದ್ದರೆ ಸರ್ಕಾರದಿಂದ ಹೆಚ್ಚಿನ ಸೌಲಭ್ಯಗಳನ್ನು ಪಡೆದುಕೊಂಡು ನಮ್ಮ ಪತ್ರಿಕೆಗಳನ್ನು ಅಭಿವೃದ್ಧಿ ಪಡಿಸಲು ಸಾಧ್ಯ ಎಂದರು.

ಇದೀಗ ಕೊಪ್ಪಳದ ನೂತನ ಜಿಲ್ಲಾ ಘಟಕ ಹೆಚ್ಚು ಕ್ರಿಯಾಶೀಲವಾಗಿ ಕೆಲಸ ಮಾಡಬೇಕು. ಸದಸ್ಯತ್ವ ಪಡೆಯದೇ ಇರುವವರನ್ನು ಕೈಬಿಡಬೇಕು, ಸದಸ್ಯತ್ವ ಸ್ವೀಕರಿಸಿದ ಬಳಿಕ ಅವರನ್ನು ಜಿಲ್ಲಾ ಘಟಕಕ್ಕೆ ಮರು ಸೇರ್ಪಡೆ ಮಾಡಿಕೊಳ್ಳಿ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ಸಮಿತಿಯ ಉಪಾಧ್ಯಕ್ಷ ಎಚ್.ಎಸ್. ಹರೀಶ್, ರಾಜ್ಯ ಸಮಿತಿಯ ಪ್ರತಿನಿಧಿ ವಿಶ್ವನಾಥ್ ಬೆಳಗಲ್‌ಮಠ, ರಾಜ್ಯ ಘಟಕದ ಜಂಟಿ ಕಾರ್ಯದರ್ಶಿಗಳಾದ ಬಿ. ದಿನೇಶ್ ಗೌಡಗೇರೆ, ಸಿ. ರಂಗನಾಥ್, ಮಂಡ್ಯ ಜಿಲ್ಲಾ ಘಟಕದ ಅಧ್ಯಕ್ಷ ಎಲ್ ಶಿವಶಂಕರ್ ಇದ್ದರು.

## ಚೂರು–ಪಾರು

### ಸೇವಾ ನ್ಯೂನತೆ: ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಿಂದ ತೀರ್ಪು ಪ್ರಕಟ

ಕೊಪ್ಪಳ : ಫಿರ್ಯಾದುದಾರ ಗ್ರಾಹಕರಿಗೆ ಎದುರುದಾರ ಮಣಪ್ಪುರಂ ಗೋಲ್ಡ್ ಫೈನಾನ್ಸ್ ವತಿಯಿಂದ ಸೇವಾ ನ್ಯೂನತೆ ಉಂಟಾದ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ತೀರ್ಪು ಪ್ರಕಟಿಸಲಾಗಿದೆ.

ಗ್ರಾಹಕ ಫಿರ್ಯಾದು ಸಂಖ್ಯೆ: 60/2024 ರಲ್ಲಿ 2024ರ ಡಿಸೆಂಬರ್ 30 ರಂದು ನೀಡಿದ ಅಂತಿಮ ತೀರ್ಪಿನ ಸಾರಾಂಶದ ಅನ್ವಯ ಫಿರ್ಯಾದುದಾರರಾದ ಹಿರೇಬಸಪ್ಪ ತಂದೆ ದಿ:ಶಂಕ್ರಪ್ಪ ಸಾ:ಬೇವೂರ್, ತಾ:ಯಲಬುರ್ಗಾ ಇವರು ತನ್ನ ವ್ಯವಸಾಯದ ಕೆಲಸಕಾರ್ಯಗಳಿಗೆ ಹಣದ ಅವಶ್ಯಕತೆ ಇರುವುದರಿಂದ 2024ರ ಮೇ 01 ರಿಂದ 03 ರವರೆಗೆ ಮೂರು ಹಂತಗಳಲ್ಲಿ ಒಟ್ಟು 62.7 ಗ್ರಾಂ ಬಂಗಾರದ ಆಭರಣಗಳನ್ನು ಮಣಪ್ಪುರಂ ಗೋಲ್ಡ್ ಫೈನಾನ್ಸ್ ಯಲಬುರ್ಗಾ ಇವರಲ್ಲಿ ಅಡವಿಟ್ಟು ರೂ. 2,84,000 ಗಳನ್ನು ಸಾಲವಾಗಿ ಪಡೆದುಕೊಂಡಿರುತ್ತಾರೆ. ದೂರುದಾರರಾದ ಹಿರೇಬಸಪ್ಪ ರವರು ಈ ಅಸಲು ಮತ್ತು ಬಡ್ಡಿಯನ್ನು ಮಣಪ್ಪುರಂ ಗೋಲ್ಡ್ ಫೈನಾನ್ಸ್ ರವರಿಗೆ ಮರುಪಾವತಿ ಮಾಡಿ ತಾನು ಅಡವಿಟ್ಟ ಬಂಗಾರದ ಆಭರಣಗಳನ್ನು ಹಿಂದಿರುಗಿಸುವಂತೆ ಕೇಳಿಕೊಂಡಿರುತ್ತಾರೆ. ಮಣಪ್ಪುರಂ ಗೋಲ್ಡ್ ಫೈನಾನ್ಸ್ ರವರು ಆಡವಿಟ್ಟ ಆಭರಣಗಳನ್ನು ಹಿಂದಿರುಗಿಸದೇ ಸೇವಾ ನ್ಯೂನತೆಯನ್ನು ಎಸಗಿದ್ದು ಆಭರಣಗಳನ್ನು ಮರಳಿಸದೇ ವಿನಾಕಾರಣ ದಿನಗಳನ್ನು ಮುಂದೂಡುತ್ತಾ ಬಂದಿರುತ್ತಾರೆ. ದೂರುದಾರನು ವಕೀಲರ ಮೂಲಕ ನೋಟಿಸ್ ನೀಡಿದಾಗ್ಯೂ ಸಹ ಸ್ಪಂದಿಸದೇ ನಿರ್ಲಕ್ಷ್ಯ ತೋರಿರುತ್ತಾರೆ. ದೂರುದಾರರು ಎದುರುದಾರರ ವರ್ತನೆಯಿಂದ ಬೇಸತ್ತು ಎದುರುದಾರರಾದ ಮಣಪ್ಪುರಂ ಗೋಲ್ಡ್ ಫೈನಾನ್ಸ್‌ರವರ ವಿರುದ್ಧ ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

ದೂರನ್ನು ದಾಖಲಿಸಿಕೊಂಡ ಕೊಪ್ಪಳ ಜಿಲ್ಲಾ ಆಯೋಗದ ಅಧ್ಯಕ್ಷರಾದ ಜಿ.ಇ.ಸೌಭಾಗ್ಯಲಕ್ಷ್ಮೀ ಹಾಗೂ ಸದಸ್ಯರಾದ ರಾಜು. ಎನ್.ಮೇತ್ರಿ ರವರು ವಾದ ಪ್ರತಿವಾದಗಳನ್ನು ಆಲಿಸಿ, ಎದುರುದಾರ–ರಿಂದ ಉಂಟಾದ ಸೇವಾ ನ್ಯೂನತೆಗಾಗಿ ಎದುರುದಾರ ಮಣಪ್ಪುರಂ ಗೋಲ್ಡ್ ಫೈನಾನ್ಸ್‌ರವರು ದೂರುದಾರರು ಅಡವಿಟ್ಟ ಬಂಗಾರದ ಆಭರಣಗಳನ್ನು 30 ದಿನಗಳ ಒಳಗಾಗಿ ಹಿಂದಿರುಗಿಸುವಂತೆ ಹಾಗೂ ದೂರುದಾರನಿಂದ ಪಡೆದ ಮೊತ್ತ ರೂ. 2,84,000 ಗಳಿಗೆ ವಾರ್ಷಿಕ ಶೇ 6 ಬಡ್ಡಿಯನ್ನು ಮಾತ್ರ ಎದುರುದಾರರಿಗೆ ಸಾಲ ಮರುಪಾವತಿ ದಿನದಿಂದ ದೂರುದಾರರಿಗೆ ನೀಡುವಂತೆ ಆದೇಶಿಸಿರುತ್ತಾರೆ ಹಾಗೂ ದೂರುದಾರರಿಗೆ ಉಂಟಾದ ಮಾನಸಿಕ ಯಾತನೆಗಾಗಿ ರೂ. 5,000 ಗಳನ್ನು ಹಾಗೂ ದೂರಿನ ಖರ್ಚು ರೂ. 5000 ಗಳನ್ನು ಎದುರುದಾರರು ದೂರುದಾರರಿಗೆ ಪಾವತಿಸುವಂತೆ ಆದೇಶವನ್ನು ನೀಡಿರುತ್ತಾರೆ ಎಂದು ಕೊಪ್ಪಳ ಜಿಲ್ಲಾ ಗ್ರಾಹಕರ ಆಯೋಗದ ಸಹಾಯಕ ರಿಜಿಸ್ಟ್ರಾರ ಹಾಗೂ ಸಹಾಯಕ ಆಡಳಿತಾಧಿಕಾರಿ ಪಿ.ಎಸ್ ಅಮರದೀಪ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಪರಿಚಿತ ಶವ ಪತ್ತೆ: ವಾರಸುದಾರರ ಪತ್ತೆಗೆ ಮನವಿ

ಕೊಪ್ಪಳ : ಕೊಪ್ಪಳದ ಮುನಿರಾಬಾದ್ ರೈಲ್ವೇ ನಿಲ್ದಾಣದಲ್ಲಿ ಸುಮಾರು 40 ವರ್ಷದ ಅಪರಿಚಿತ ಮಹಿಳೆ ಮೃತ ಪಟ್ಟ ಬಗ್ಗೆ ಗದಗ ರೈಲ್ವೇ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ: 72/2024 ಕಲಂ:194 ಬಿ.ಎನ್.ಎಸ್.ಎಸ್. ಅಡಿ ಪ್ರಕರಣ ದಾಖಲಾಗಿದೆ.

ಮೃತ ಮಹಿಳೆ ಚಹರೆ: ಮೃತ ಮಹಿಳೆಯು ಸಾದಾರಣ ಮೈಕಟ್ಟು, ಸಾದ ಕಪ್ಪು ಮೈಬಣ್ಣ ಹಾಗೂ ಮೈಮೇಲೆ ಚಾಕಲೇಟ್ ಬಣ್ಣದ ವಸ್ತ್ರ ಧ–ರಿಸಿರುತ್ತಾಳೆ. ಈ ಮೃತ ಮಹಿಳೆ ಚಹರೆ ಪಟ್ಟಿಗೆ ಹೋಲಿಕೆಯಾಗುವಂತಹ ಮಹಿಳೆ ಕಾಣೆಯಾಗಿದ್ದಲ್ಲಿ ಕೂಡಲೇ ಗದಗ ರೈಲ್ವೇ ಪೊಲೀಸ್ ಠಾಣೆ ದೂ.ಸಂ: 08372–278744, ಮೊ.ಸಂ:9480802128, ಇ–ಮೇಲ್: gadagrly@ksp.gov.in ಅಥವಾ ರೈಲ್ವೇ ಪೊಲೀಸ್ ಕಂಟ್ರೋಲ್ ರೂಂ: 080–22871291 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಗದಗ ರೈಲ್ವೇ ಪೊಲೀಸ್ ಠಾಣೆ ಪ್ರಕಟಣೆ ಕೋರಿದೆ.

# ಮರೆಗುದ್ದಿ ಗ್ರಾಮದಲ್ಲಿ ಬೆಳ್ಳಿ ಮಹೋತ್ಸವ - ಜಾತ್ರಾ ಮಹೋತ್ಸ

ಜಮಖಂಡಿ : ತಾಲೂಕಿನ ಮರೆಗುದ್ದಿ ಗ್ರಾಮವು ಆದ್ಯತ್ಮಿಕ ತವರುರೆಂದರು ತಪ್ಪಾಗಲಿಕ್ಕಿಲ್ಲ ಯಾವುದೇ ಕಾರ್ಯಕ್ರಮಗಳನ್ನು ಜಾತ್ರಾ ಮಹೋತ್ಸವಗಳನ್ನು ಹಿರಿಯರು ಹಾಗೂ ಯುವಕರು ಸೇರಿ ಅಷ್ಟು ಅಚ್ಚು ಕಟ್ಟಾಗಿ ನಿರ್ವಹಿಸುತ್ತಾರೆ

ಮರೆಗುದ್ದಿ ಗ್ರಾಮದಲ್ಲಿ 25ನೇ ವರ್ಷಾಚರಣೆಯ ಬೆಳ್ಳಿ ಮಹೋತ್ಸವ ಹಾಗೂ ಶ್ರೀ ಅಡವಿ ಸಿದ್ದೇಶ್ವರ ಶತಮಾನದ ಜಾತ್ರಾ ಮಹೋತ್ಸವ

ಜಮಖಂಡಿ ತಾಲೂಕಿನ ಮರೆಗುದ್ದಿ ಗ್ರಾಮದ ಶ್ರೀ ಅಡವಿ ಸಿದ್ದೇಶ್ವರ ಮಠದ ದ್ವಿತೀಯ ಶತಮಾನೋತ್ಸವ ಶ್ರೀ ಅಡವಿ ಸಿದ್ದೇಶ್ವರ ಸಂಸ್ಕೃತಿಕ ಭವನ ಲೋಕಾರ್ಪಣೆ ಶ್ರೀಮಾನ್ಯ ಡಾಕ್ಟರ ನಿರುಪಾದೀಶ ಮಹಾಸ್ವಾಮಿ–ಜಿಯವರ ಮಹಾ ಕಾವ್ಯಗಳ ತುಲಾಭಾರ ದಿನಾಂಕ 30/12/2024 ರಿಂದ 5/1 /2025 ಶ್ರೀ ರವರೆಗೆ ಜರಗುವವು ದಿನಾಂಕ ಮ ನಿ ಪ್ರ ಶಿವಾನಂದ ಮಹಾಸ್ವಾಮಿಗಳು ಸಿದ್ದೇಶ್ವರ ಮಠ ಹಂದಿಗುಂದ ಆಡಿ ಇವರಿಂದ ಪ್ರವಚನ ಕಾರ್ಯಕ್ರಮ




ಸೋಮವಾರ 06/01/2025 ರಂದು ಅಡವಿ ಸಿದ್ದೇಶ್ವರ ಸಾಂಸ್ಕೃತಿಕ ಭವನ ಉದ್ಘಾಟನೆ ಮತ್ತು ಶ್ರೀಮಠದ ದ್ವಿತೀಯ ಶತಮಾನೋತ್ಸವ 07/01/2025 ರಂದು ಶ್ರೀ ಮ ನಿ ಪ್ರಾ ಗುರುಪಾದ ಮಹಾಸ್ವಾಮಿಗಳವರ ಪಟ್ಟಾಧಿಕಾರ ರಜತ ಮಹೋತ್ಸವ ಹಾಗೂ ಸ್ಮರಣ ಸಂಚಿಕೆ ಅರ್ಪಣೆ 08/01/2025 ರಂದು ಶ್ರೀ ಮ ನಿ ಪ್ರಾ ಡಾ ನಿರೂಪಾದೀಶ ಮಹಾಸ್ವಾಮಿಗಳವರ ಮಹಾಕಾವ್ಯಗಳ ತುಲಾಭಾರ ಮತ್ತು ಅಭಿನಂದನ ಗ್ರಂಥ ಅರ್ಪಣೆ 09/01/2025 ಪ್ರತಿ ವರ್ಷದ ಪದ್ಧತಿಯಂತೆ ಶ್ರೀ ಅಡವಿಸಿದ್ದೇಶ್ವರ ಮಠದ ಮಹಾ ರಥೋತ್ಸವ ಜರುಗುವುದು

ದಿನಾಂಕ 09/01/2025 ರಂದು ಶ್ರೀ ಅಡವಿ ಸಿದ್ದೇಶ್ವರ ಜಾತ್ರೆಯ ನಿಮಿತ್ಯವಾಗಿ ಶ್ರೀ ಅಡವಿ ಸಿದ್ದೇಶ್ವರ ನಾಟ್ಯ ಸಂಘ ಮರೇಗುದ್ದಿ ಇವರ ಬಸ್ ನಿಲ್ದಾಣದ ಆವರಣದಲ್ಲಿ ಹಾಕಿದ ಸುಂದರ ಭವಿರಂಗ ಸಂಚಿಕೆಯಲ್ಲಿ ಅರ್ಪಿಸುವ 7ನೇ ಕಲಾ ಕುಸುಮ ದನಿಕರ ದರ್ಪಕ್ಕೆ ಧರ್ಮದ ತೀರ್ಪು ಅರ್ದಾರ್ಥ ಗಂಡುಗಲಿ ಸಿಂಧೂರ ಹುಲಿ ಈ ಕಾರ್ಯಕ್ರಮಕ್ಕೆ ವಿಶೇಷವಾಗಿ 09/01/2025 ರಾತ್ರೀ 10 ಘಂಟೆಗೆ ಮಖ್ಯ ಪಾತ್ರದಾರಿಗಳು

ಸೌಂದರ್ಯಾ ಬದಾಮಿ ರತ್ನಾ ಬದಾಮಿ ಬಾನುಪ್ರೀಯಾ ಶಿರೋಳ ಲಕ್ಷ್ಮೀ ಯಾದಗಿರಿ ಹಾಗೂ ಸಂಗೀತ ಬಳಗ ಯಮನಕುಮಾರ ಕಪ್ಪಲಗುದ್ದಿ ಸಂಗಡಿಗರು

ಈ ಎಲ್ಲ ಕಾರ್ಯಕ್ರಮಕ್ಕೆ ಶುಭಾಶಯಕೋರುವವರು ದೋಸ್ತೀ ದರ್ಬಾರ ಗೆಳೆಯರ ಬಳಗ ಹಾಗೂ ಗುರು ಹಿರಿಯರು ಯುವ ಮಿತ್ರರು ಮರೇಗುದ್ದಿ

# ಪೂಜ್ಯಶ್ರೀ ಕಲ್ಲಯ್ಯಜ್ಜನವರ 2611 ನೇ ತುಲಾಬಾರ



ಗದಗ : ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಚನ್ನಬಸಪ್ಪ ಲಕ್ಷ್ಮೇಶ್ವರ ಹಾಗೂ ಕುಟುಂಬದವರಿಂದ ಪೂಜ್ಯಶ್ರೀ ಕಲ್ಲಯ್ಯಜ್ಜನವರ 2611 ನೇ ತುಲಾಬಾರ ಸೇವೆ ಜರುಗಿತು.

ನಂತರ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಆಶೀರ್ವಚನ ನೀಡಿ ತುಲಾಬಾರದಿಂದ ಸಂಗ್ರಹವಾಗುವ ಹಣವನ್ನು ಅಂಧ– ಅನಾಥರ ಕಲ್ಯಾಣಕ್ಕಾಗಿ ಮೀಸಲಾಗಿರಸಲಾಗುವುದು. ಶ್ರೀ ವೀರೇಶ್ವರ ಪುಣ್ಯಾಶ್ರಮ ಸೇವಾ ಕೈಂಕರ್ಯಕ್ಕೆ ತುಲಾಬಾರ ಸೇವೆ ಸಲ್ಲಿಸಿದ ಚನ್ನಬಸಪ್ಪ ಲಕ್ಷ್ಮೇಶ್ವರ ಹಾಗೂ ಅವರ ಕುಟುಂಬಕ್ಕೆ ಹಾನಗಲ್ ಕುಮಾರೇಶ್ವರ ಶ್ರೀಗಳು, ಶ್ರೀಗುರು ಪಂಚಾಕ್ಷರಿ ಗವಾಯಿಗಳು ಹಾಗೂ ಪಂ. ಪುಟ್ಟರಾಜ ಗವಾಯಿಗಳವರ ಆಶೀರ್ವಾದ ಸದಾ ಇರಲೆಂದು ಹಾರೈಸಿದರು.

# ಕರಾಟೆ : ಕಾಶಿಯಲ್ಲಿ ಕರ್ನಾಟಕ ತಂಡಕ್ಕೆ ಪದಕಗಳ ರಾಶಿ ಫೆಡರೇಷನ್ ಕಪ್ ಚಾಂಪಿಯನ್‌ಶೀಪ್‌ನಲ್ಲಿ "ಸೆಕೆಂಡ್ ರನ್ನರ್ ಅಪ್" ಪ್ರಶಸ್ತಿ ಬಾಚಿಕೊಂಡ ಕರ್ನಾಟಕ




ಬಾಗಲಕೋಟ: ಡಿಸೆಂಬರ್ 28 ಮತ್ತು 29 ರಂದು ಉತ್ತರ ಪ್ರದೇಶದ ವಾರಣಾಸಿಯ ಬನಾರಸ್ ಹಿಂದೂ ಯುನಿರ್ವಸಿಟಿ ಇಂ–ಡೋರ್ ಸ್ಟೇಡಿಯಂನಲ್ಲಿ ನಡೆದ 22ನೇ ಆಲ್ ಇಂಡಿಯಾ ಇಂಟರ್ ಸ್ಕೂಲ್ & ಸಿನಿಯರ್ ಕರಾಟೆ ಚಾಂಪಿಯನ್‌ಶೀಪ್ ಫೆಡೆರೇಷನ್ ಕಪ್ ಪಂದ್ಯಾವಳಿಯಲ್ಲಿ ಕರ್ನಾಟಕದಿಂದ 18 ವಿದ್ಯಾರ್ಥಿಗಳು ಭಾಗವಹಿಸಿ ಪದಕಗಳ ರಾಶಿಯನ್ನೇ ಬೇಟೆಯನ್ನಾಡಿದ್ದಾರೆ. ದೆಹಲಿ, ಪಶ್ಚಿಮ ಬಂಗಾಳ, ಹರ್ಯಾಣ, ಆಸ್ಸಾಂ, ಮಣಿಪುರ, ಜಾರ್ಖಂಡ್ ಬಿಹಾರ, ತಮಿಳುನಾಡು, ಪಂಜಾಬ್ ಸೇರಿದಂತೆ 17 ರಾಜ್ಯಗಳಿಂದ ಸುಮಾರು 2500 ಕ್ಕೂ ಹೆಚ್ಚು ಕರಾಟೆ ಪಟುಗಳ ಪಾಲ್ಗೊಂಡಿದ್ದು, ನಮ್ಮ ರಾಜ್ಯದ ಕರಾಟೆ ಪಟುಗಳು ಕಟಾ ಮತ್ತು ಕುಮಿಟೆ ವಿಭಾಗಗಳಲ್ಲಿ ಸ್ಪರ್ಧಿಸಿ 8 ಚಿನ್ನದ ಪದಕ, 12 ಬೆಳ್ಳಿ ಪದಕ ಹಾಗೂ 09 ಕಂಚು ಒಟ್ಟು 29 ಪದಕಗಳನ್ನು ಬಾಚಿಕೊಳ್ಳುವ ಮೂಲಕ ಚಾಂಪಿಯನ್‌ಶೀಪ್‌ನಲ್ಲಿ "ಸೆಕೆಂಡ್ ರನ್ನರ್ ಅಪ್" ಪ್ರಶಸ್ತಿಯನ್ನು ಕರ್ನಾಟಕ ತಂಡ ಪಡೆದುಕೊಂಡಿದೆ. ಕರ್ನಾಟಕದ ವಿದ್ಯಾರ್ಥಿಗಳ ಸಾಧನೆಗೆ ಭಾರತದ ಡಬ್ಲ್ಯುಕೆಎಫ್ ಮುಖ್ಯ ರೇಫ್ರೀ ಹಾನ್ಸಿ ಪ್ರೇಮಜಿತ್ ಸೇನ್, ನಾರ್ತ್ ಇಂಡಿಯಾ ಕರಾಟೆ ಅಸೋಸಿಯೇಷನ್ ಅಧ್ಯಕ್ಷ ಹಾನ್ಸಿ ರಜನಿಶ್ ಚೌಧರಿ, ಬಾಗಲಕೋಟೆ ಶಾಸಕ ಎಚ್.ವೈ ಮೇಟಿ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಪಂ ಸಿಇಓ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಜಿ.ಜಿ ಡೂಗನವರ, ಮೇಲ್ವಿಚಾರಕ ರಂಗಪ್ಪ ಕ್ಯಾಲಕೊಂಡ, ಕ್ರೀಡಾ ಇಲಾಖೆಯ ಸಿಬ್ಬಂದಿ ವರ್ಗ ಹಾಗೂ ಪಾಲಕರು ಮೆಚ್ಚುಗೆ ವ್ಯಕ್ತಪಡಿಸಿ ಸಾಧಕ–ರಿಗೆ ಅಭಿನಂದಿಸಿದ್ದಾರೆ. ಎಂದು ರಾಜ್ಯದ ಚೀಫ್ ಕೋಚ್ ಎಸ್.ಆರ್.ರಾಠೋಡ ತಿಳಿಸಿದ್ದಾರೆ. ಚಾಂಪಿಯನ್‌ಶಿಪ್‌ನಲ್ಲಿ ಪದಕಗಳನ್ನು ಜಯಿಸಿ ತಾಯ್ನಾಡಿಗೆ ಬಂದಿಳಿದ ವಿದ್ಯಾರ್ಥಿಗಳನ್ನು ಬಾಗಲಕೋಟೆ ರೈಲ್ವೆ ನಿಲ್ದಾಣದಲ್ಲಿ ಅದ್ದೂರಿಯಾಗಿ ಕರಾಟೆ ಅಭಿಮಾನಿಗಳು ಹಾಗೂ ಪಾಲಕರು ಸ್ವಾಗತಿಸಿದರು.

ಪದಕ ಪಡೆದ ಕ್ರೀಡಾಪಟುಗಳು : ಮಹಮ್ಮದ್ ಮಾಜ್ ಗಲಗಲಿ (2 ಚಿನ್ನ) ಆನಂದ ನಾಯ್ಕ್ (ಚಿನ್ನ ಮತ್ತು ಬೆಳ್ಳಿ) ಶ್ರೇಯಸ್ಸ್ ನಾಗರವಳ್ಳಿ (ಚಿನ್ನ ಮತ್ತು ಬೆಳ್ಳಿ) ಅರುಣ ಧನ್ನೂರ (ಚಿನ್ನ ಮತ್ತು ಬೆಳ್ಳಿ) ಪ್ರಭುಸ್ವಾಮಿ ಆರಾಧ್ಯಮಠ (ಚಿನ್ನ ಮತ್ತು ಕಂಚು) ಸಾಗರ ಚವ್ಹಾಣ (ಚಿನ್ನ) ಪ್ರಜ್ವಲ ರಾಠೋಡ (ಚಿನ್ನ) ಸಾತ್ವಿಕ ಶೇಬನ್ನವರ (2 ಬೆಳ್ಳಿ) ಸಾಗರಕುಮಾರ ಮರಕುಂಬಿ (ಬೆಳ್ಳಿ ಮತ್ತು ಕಂಚು) ರಾಮಕೃಷ್ಣ ದಾಸರ (ಬೆಳ್ಳಿ ಮತ್ತು ಕಂಚು) ಸಾಯಿಪ್ರಸಾದ ಪೂಜಾರಿ (ಬೆಳ್ಳಿ ಮತ್ತು ಕಂಚು) ಶರಣಗೌಡ ಪಾಟೀಲ (ಬೆಳ್ಳಿ) ಕರಣ ರಾಠೋಡ (ಬೆಳ್ಳಿ) ಅಕ್ಷಿತ ರಾಠೋಡ (ಬೆಳ್ಳಿ) ಜಯಂತ ಗೋರಗುಂಡಗಿ (ಬೆಳ್ಳಿ) ಈಶ್ವರಯ್ಯ ಗುರುಶಾಂತನವರ (2 ಕಂಚು) ತನ್ಮಯ ರಾವ್ (2 ಕಂಚು) ಯಶವಂತ ನಾಯಕ (2 ಕಂಚು) ಪಡೆದಿದ್ದಾರೆ. ಪಂದ್ಯಾವಳಿಯಲ್ಲಿ ಕರ್ನಾಟಕದಿಂದ ರೇಫ್ರೀಯಾಗಿ ಚೀಫ್ ಕೋಚ್ ಎಸ್.ಆರ್ ರಾಠೋಡ, ಶಾಂತು ಚವ್ಹಾಣ, ಸಾಗರಕುಮಾರ ಮರಕುಂಬಿ, ರಾಮಕೃಷ್ಣ ದಾಸರ ಮತ್ತು ಆನಂದ ನಾಯ್ಕ ಭಾಗವಹಿಸಿದ್ದರು.

# ಗುರುಕೃಪಾ ಇಂಗ್ಲೀಷ ಮಾದ್ಯಮ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನವು 3 ರಂದು ಶಾಲೆಯ ಆವರಣದಲ್ಲಿ



ಸಿಂದಗಿ – ಇಲ್ಲಿಯ ಉತ್ತಮ ಜ್ಞಾನಾರ್ಜನೆ ನೀಡುತ್ತಿರುವ ಶ್ರೀ ಗುರುಕೃಪಾ ಇಂಗ್ಲೀಷ ಮಾದ್ಯಮ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನವು ಜನೇವರಿ 3 ರಂದು ಶುಕ್ರವಾರ ಸಾಯಂಕಾಲ 5 ಗಂಟೆಗೆ ಸೋಂಪೂರ ರಸ್ತೆಯ ಶ್ರೀ ಗುರುಕೃಪಾ ಇಂಗ್ಲೀಷ ಮಾದ್ಯಮ ಶಾಲೆಯ ಆವರಣದಲ್ಲಿ ಜರುಗಲಿದೆ ಎಂದು ಶ್ರೀ ಗುರು ಕೃಪಾ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಎಚ್. ಜಿ. ಪೊದ್ದಾರ ತಿಳಿಸಿದ್ದಾರೆ.

ಶ್ರೀ ಗುರುಕೃಪಾ ಇಂಗ್ಲೀಷ್ ಮಾದ್ಯಮ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನಕ್ಕೆ ಮುಖ್ಯ ಅತಿಥಿಗಳಾಗಿ

ವಿಜಯಪುರ ರಾಣಿ ಚೆನ್ನಮ್ಮಾ ವಿಶ್ವವಿದ್ಯಾಲಯದ ಬಿ.ಇ.ಓ ಸದಸ್ಯ ಮಂಜುನಾಥ ಜುನಗೊಂಡ ಅವರು ಆಗಮಿಸಲಿದ್ದು, ಅತಿಥಿಗಳಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮಹಾಂತೇಶ ಯಡ್ರಾಮಿ, ಅಥರ್ಗಾದ ಜ್ಞಾನ ಭಾರತಿ ಶಾಲೆಯ ಆಡಳಿತಾಧಿಕಾರಿ ಆರ್.ಬಿ.ಪುರೋಹಿತ, ಬಸವ ಸಮಿತಿ ಅಧ್ಯಕ್ಷರಾದ ಎನ್.ಎಸ್. ಪಾಟೀಲ, ಹಾಗೂ ಪಾಲಕರ ಪ್ರತಿನಿಧಿಯಾಗಿ ಸಿಂದಗಿಯ ಪದ್ಮರಾಜ ಮಹಿಳಾ ಕಾಲೇಜಿನ ಉಪನ್ಯಾಸಕರಾದ ಮಹಾಂತೇಶ ನೂಲನವರ ಅವರುಗಳು ಆಗಮಿಸಲಿದ್ದಾರೆ. ಕಾರ್ಯಕ್ರಮದ

ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಎಸ್. ಟಿ. ಕುಲಕರ್ಣಿ ಅವರು ವಹಿಸಲಿದ್ದಾರೆ.

ವಿದ್ಯಾರ್ಥಿಗಳಿಂದ ಮನೆರಂಜನಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, "ವಿಶ್ವ ಶಾಂತಿ" ಎಂಬ ವಿಷಯದ ಆಧಾರದ ಮೇಲೆ ಮನರಂಜನಾ ಕಾರ್ಯಕ್ರಮ ನಡೆಯಲಿದೆ ಎಂದು ಈ ವರ್ಷದ ಶಾಲೆಯ ಪ್ರಧಾನ ಕಾರ್ಯದರ್ಶಿ ಕುಮಾರಿ ಅಪೂರ್ವಾ ಹೊಸಮನಿ ಹಾಗೂ ಶ್ರೀ ಗುರು ಕೃಪಾ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಎಚ್. ಜಿ. ಪೊದ್ದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ಸಿದ್ಧಲಿಂಗ ಅಪ್ಪನ ಜಾತ್ರೆ : 26ನೇ ಸತ್ಸಂಗ ಸಮ್ಮೇಳನ

ಘಟಪ್ರಭಾ : ಘಟದಿಂದ ಮಠ ಬೆಳೆಯಬೇಕು,ವಿನಃ ಮಠದಿಂದ ಘಟ ಬೆಳೆಯಬಾರದು ಎಂಬ ಉಕ್ತಿಯಂತೆ ಧರ್ಮದ ನೆಲೆವೀಡು, ಹಲವಾರು ಮಠಗಳಿಂದ ಕೂಡಿರುವ ಪುಣ್ಯಕ್ಷೇತ್ರ ಮೂಡಲಗಿ ನಾಡಿನಲ್ಲಿ ಹುಣಶ್ಯಾಳ ಪಿ.ಜಿ ಯ ಸಿದ್ದಲಿಂಗ ಕೈವಲ್ಯಾಶ್ರಮ ಒಂದು. ಅಧಿಪತಿ ನಿಜಗುಣ ದೇವ ಮಹಾಸ್ವಾಮಿಗಳು ನೆರೆಯ ಮಹಾರಾಷ್ಟ್ರ, ಆಂದ್ರ ಮತ್ತು ನಮ್ಮ ರಾಜ್ಯದಲ್ಲಿ ಹೆಸರಾಗಿರುವ ಖ್ಯಾತ ಪ್ರವಚನಕಾರರು, ನಿಜವರಿದ ಸಂತರು 2025 ನೇ ಇಸ್ವಿ ಜನೇವರಿ 1ರಿಂದ 3 ರವರೆಗೆ ಶ್ರೀ ಮಠದಲ್ಲಿ 26ನೇ ಸತ್ಸಂಗ ಸಂಭ್ರಮ ಹಾಗೂ ಸಿದ್ದಲಿಂಗೇಶ್ವರರ ತೊಟ್ಟಿಲೋತ್ಸವ, ಕುಂಭೋತ್ಸವ, ಮುತ್ತೈದೆಯರ ಉಡಿ ತುಂಬುವುದು, ತುಲಾಭಾರ, ಕಿರೀಟಪೂಜೆ, ತೂಗೂಯ್ಯಾಲೆ, ರಥೋತ್ಸವ ಶ್ರೀ ಸಿದ್ಧಲಿಂಗ ಅಪ್ಪನ ಜಾತ್ರೆ ನಿಮಿತ್ಯ ವಿಶೇಷ ವರದಿ.

ನಿಜಗುಣದೇವ ಮಹಾಸ್ವಾಮಿಗಳ ಪರಿಚಯ: ಅಥಣಿಯ ನಡೆದಾಡುವದೇವ 'ರೆಂದುಖ್ಯಾತರಾಗಿದ್ದ ಮುರುಘರಾಜೇಂದ್ರ ಸ್ವಾಮೀಜಿಅವರಕ್ಷೇತ್ರದ ನಂದೇಶ್ವರಗ್ರಾಮದ ಶರಣ ದಂಪತಿಗಳಾದ ಮಲ್ಲಿಕಾರ್ಜುನ ಮತ್ತುಗಂಗಮ್ಮನವರ ಪುಣ್ಯಗರ್ಭದಲ್ಲಿ ಸನ್ 1961 ರ ನವ್ಹೆಂಬರ ತಿಂಗಳ 18 ರಂದು ಜನಿಸಿದ ಶ್ರೀಗಳಿಗೆ ತಾಯಿಯ ಪರಮದೈವವಾಗಿದ್ದ ಮದುರಖಂಡಿ ಶಿವಾವತಾರಿ ಸಿದ್ಧಲಿಂಗೇಶ್ವರರ ಕೃಪಾಶೀರ್ವಾದದ ಫಲ ಕಿರಿಯ ವಯಸ್ಸಿನಿಂದ ಆಧ್ಯಾತ್ಮಿಕತೆಯತ್ತ ಒಲವು ಹೊಂದಿದವರು. ಬೈಲಹೊಂಗಲದ ಮಹಾದೇವಾನಂದ ಸರಸ್ವತಿ ಸ್ವಾಮೀಜಿಯವರಆಶ್ರಯದಲ್ಲಿ ಸಂಸ್ಕೃತ ಶಾಸ್ತ್ರಅಧ್ಯಯನ ಮಾಡಿದರು. ಇಂಚಲದಜಗದ್ಗುರು ಡಾ.ಶಿವಾನಂದ ಭಾರತಿ ಮಹಾಸ್ವಾಮೀಜಿ–ಅವರ ಮಾರ್ಗದರ್ಶನದಲ್ಲಿಆ–ತ್ಮ ಮಂಥನ,ತತ್ವಚಿಂತನ,ಸತ್ಯ ಶೋಧನ,ನಿತ್ಯ ಬೋಧನೆಯನ್ನು ರೂಢಿಸಿಕೊಂಡು ಸಂಗೀತ ಸಾಹಿತ್ಯದಜೊತೆಗೆ ಪ್ರವಚನ ಪಟುವಾದರು. ಕಿರಿಯ ವಯಸ್ಸಿನಲ್ಲಿಯೇ ಪ್ರವಚನದ ಮೂಲಕ ಅಪಾರ ಭಕ್ತರ ಮನಗೆದ್ದು ನಿಜಗುಣದೇವ ಮಹಾಸ್ವಾಮಿಗಳು ಸನ್ 1995 ರಲ್ಲಿ ಮೂಡಲಗಿ ತಾಲೂಕಿನ ಹುಣಶ್ಯಾಳ ಪಿ.ಜಿ ಗ್ರಾಮಕ್ಕೆ ಪ್ರವಚನಕ್ಕಾಗಮಿಸಿದ ಸಂದರ್ಭದಲ್ಲಿಅಲ್ಲಿಯ ಭಕ್ತರಅಪೇಕ್ಷೆ ಹಾಗೂ ಒತ್ತಾಸೆ ಮೇರೆಗೆ ಸಣ್ಣಕುಟೀರಕಟ್ಟಿಕೊಂಡುಆಧ್ಯಾತ್ಮಿಕ ಬದುಕು ಪ್ರಾರಂಭಿಸಿದರು.

ಕಲಿಯುಗದ ಕರ್ಣ ಖ್ಯಾತಿಯ ಅರಭಾಂವಿ ಕ್ಷೇತ್ರದ ಶಾಸಕ,ಮಾಜಿ ಸಚಿವ ಬಾಲಚಂದ್ರ



ಜಾರಕಿಹೊಳಿ ಹಾಗೂ ಬೈಲಹೊಂಗಲದ ಮಾಜಿ ಸಚಿವ ಶಿವಾನಂದ ಕೌಜಲಗಿ ಸೇ–ರಿದಂತೆ ನಾಡಿನ ಗಣ್ಯರ ಮಾನ್ಯರ ಸಹಕಾರ ಮತ್ತು ನೆರವಿನಿಂದ ರಂಗಮಂದಿರ,ಯಾತ್ರಾ ನಿವಾಸ,ಆಧ್ಯಾತ್ಮಿಕಚಿಂತನೆ ಸಲುವಾಗಿ ಸಮುದಾಯ ಭವನ, ಮತ್ತು ಶಾಲೆ ಪ್ರಾರಂಭಿಸಿದ್ದಾರೆ. ಪ್ರಸ್ತುತಹುಣಶ್ಯಾಳ ಪಿ.ಜಿ ಭೂ ಲೋಕದ ಆಧ್ಯಾತ್ಮಿಕ ಕೇಂದ್ರವೆಂದು ಹೆಸರಾಗಿದೆ. ಶೂನ್ಯದಿಂದ ಪ್ರಾರಂಭಿಸಿ ಅಪಾರ ಭಕ್ತ ಸಮೂಹದೊಂದಿಗೆ ಪ್ರತಿವರ್ಷ ವಿಶೇಷ ಆಧ್ಯಾತ್ಮಿಕ ಸಮಾರಂಭಗಳ ಮೂಲಕ ಜಿಲ್ಲೆಯಲ್ಲಿ ಹೆಸರಾಗಿದ್ದಾರೆ.

ನಿಜಗುಣದೇವ ಮಹಾಸ್ವಾಮಿಗಳು ಜಾತ್ಯಾತೀತವಾಗಿ ಸರ್ವಧರ್ಮೀಯರು ಪ್ರೀತಿಸುವ ಮನೋಭಾವದವರು, ಪಂಚಪೀಠ, ವಿರಕ್ತ, ಸಿದ್ದಾರೂಢ, ದ್ವೈತ, ಅದ್ವೈತ ಸಂಪ್ರದಾಯವೆನ್ನದೇ ಎಲ್ಲರನ್ನು ಗೌರವಿಸುವ ವಿಚಾರವಂತರು.

ಈ ಸಮಾರಂಭದಲ್ಲಿ ನಾಡಿನ ಸುಮಾರು 300 ಮಹಾತ್ಮರು ಹಾಗೂ ಗಣ್ಯರು, ಅಧಿಕಾ–ರಿಗಳು ಪಾಲ್ಗೊಳ್ಳುವರು.

ನಿಜಗುಣದೇವ ಮಹಾಸ್ವಾಮಿಗಳವ–ರಿಂದ ರಚಿತವಾಗಿರುವ ಸಾಹಿತ್ಯ ಸಂಗೀತ ಕುಸುಮಗಳು:ಖ್ಯಾತ ಪ್ರವಚನಕಾರರೆಂದು ಗುರುತಿಸಿಕೊಂಡ ಶ್ರೀಗಳು ಹಾಡಿರುವ ಹಲವಾರು ಧ್ವನಿಸುರುಳಿಗಳ ಸಿ.ಡಿ ಉತ್ತರಕರ್ನಾಟಕ ಸೇರಿದಂತೆ ನೆರೆಯ ರಾಜ್ಯಗಳ ಭಕ್ತರ ಮನೆಯಲ್ಲಿ ಪ್ರತಿನಿತ್ಯಆಧ್ಯಾತ್ಮಿಕ ಬೆಳಗಿನ ಗಾಯನವಾಗಿವೆ.ಸಾವಿರ ಹಾಡುಗಳ ಸರದಾರವೆಂಬ ಗೀತ ಸಾಹಿತ್ಯ ಪ್ರಸಿದ್ಧಿ ಹೊಂದಿರುವ ನಿಜಗುಣದೇವ ಮಹಾಸ್ವಾಮಿಗಳು ರಚಿಸಿದ ಕೈವಲ್ಯಕಿರಣ,ಗೀತ ಕುಸುಮ,ಭಾರತಕ್ಕೊಬ್ಬ ಭಾರತೀಶ,ಶಿವಾವತಾರಿ ಸಿದ್ದಲಿಂಗ,ಕೈವಲ್ಯ ಕನ್ನಡಿ ಪ್ರವಚನ ಕೃತಿಗಳು ಸೇರಿದಂತೆ ಅನೇಕ ಕೃತಿಗಳು ರಚಿಸಿದ ಸಾಹಿತಿಗಳು,

ಶ್ರೀಗಳನ್ನರಿಸಿ ಬಂದ ಪ್ರಶಸ್ತಿಗಳು:ಪಂಚಪೀಠದಕೇದಾರ ಜಗದ್ಗುರುಗಳಿಂದ ದೊರಕಿದ ಪ್ರವಚನ ಪ್ರಾಜ್ಞ,ಹುಕ್ಕೇರಿ ಹಿರೇಮಠದಖ್ಯಾತದಸರಾಪ್ರಶಸ್ತಿ "ರೇಣುಕ ಶ್ರೀ",ಕರ್ನಾಟಕ ಭೂಷಣ,ಸಾಹಿತ್ಯ ಸುಧಾಕರ ಸೇರಿದಂತೆ ಹತ್ತು ಹಲವು ಪ್ರಶಸ್ತಿಗಳು ಇವರಿಗೆ ಸಂದಿವೆ.

ನಿಜಗುಣದೇವ ಮಹಾಸ್ವಾಮಿಗಳ ನುಡಿಮುತ್ತು:

ನಾನು ನನ್ನದು ಎಂಬುದು ಎನಿಲ್ಲ,ಆ ದೇವ ಆಡಿಸಿದಂತೆ ಆಡುವಕಾಯಕ ನಮ್ಮದು. "ಎಲ್ಲರನ್ನೂ ಪ್ರೀತಿಸು. ಪ್ರೀತಿಯೇ ದೇವರು" ಎಂದು ಹೇಳುವ ನಿಜಗುಣದೇವ ಮಹಾಸ್ವಾಮಿಗಳು ಸುಕ್ಷೇತ್ರದ ಬೆಳಕಿಗೆ ಕಲಿಯುಗದಕರ್ಣಶಾಸಕ,ಮಾಜಿ ಸಚಿವ ಬಾಲಚಂದ್ರ ಜಾರಕಿಹೊಳಿ ಮತ್ತು ಮಾಜಿ ಸಚಿವ,ಕೆ.ಎಲ್.ಇಅಧ್ಯಕ್ಷ ಶಿವಾನಂದ ಕೌಜಲಗಿಯವರ ಸಹಕಾರವೇಕಾರಣ. ಆದ್ದರಿಂದ ಅವರು ಕ್ಷೇತ್ರದ ಎ–ರಡು ಕಣ್ಣುಗಳಿದ್ದಂತೆ,ಇವರ ಜೊತೆಗೆಜಿಲ್ಲಾಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹಾಗೂ ಮಾಜಿ ಸಚಿವ ರಮೇಶ ಜಾರಕಿಹೊಳಿ ಹಾಗೂ ಸಹೋದರರ ಸಹಾಯ ಸಹಕಾರಅನನ್ಯವಾಗಿದೆ.

ನಾಡಿನ ಹೆಸರಾಂತ ಸತ್ಪುರುಷರ ಆಶೀರ್ವಾದ,ಮಾರ್ಗದರ್ಶನದಿಂದ 'ನಾನು ಭಕ್ತರಇಚ್ಛೆಯಂತೆಆಧ್ಯಾತ್ಮಿಕ ಸೇವೆಗೈಯುತ್ತಿರುವೆಎಂದು ವಿನಮ್ರರಾಗಿ ನುಡಿಯುತ್ತಾರೆ.

ಕಾರ್ಯಕ್ರಮ: ದಿ.1ರಂದು ಶ್ರೀಮಠದಲ್ಲಿ ಮಹಾತ್ಮರ ಭವ್ಯ ಮೆರವಣಿಗೆ ಮೂಲಕ ಸ್ವಾಗತ, ಷಟಸ್ಥಲ ಧ್ವಜಾರೋಹಣ, ಕಳಸಾರೋಹಣ, ಕುಂಭಮೇಳ, ತತ್ವಾಮೃತ, ಗಣ್ಯರಿಗೆ ಸನ್ಮಾನ, ದಿ.2ರಂದು ಶ್ರೀ ನಿಜಗುಣ ದೇವ ಮಹಾಸ್ವಾಮಿಗಳಿಗೆ ಭಕ್ತರಿಂದ ತುಲಾಭಾರ, ಶೃಂಗಾರ ಕಿರೀಟ ಪೂಜೆ,ತತ್ವಾಮೃತ, ಶ್ರೀ ಸಿದ್ಧಲಿಂಗೇಶ್ವರ ತೊಟ್ಟಿಲೋತ್ಸವ, ಸನ್ಮಾನ, ಮಹಾಪ್ರಸಾದ,ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ.

ದಿ.3ರಂದು ಮಹಾತ್ಮರ ತತ್ವಾಮೃತ, ಮಹಾಪ್ರಸಾದ, ಶ್ರೀಗಳ ತುಲಾಭಾರ, ಶ್ರೀ ಸಿದ್ಧಲಿಂಗೇಶ್ವರ ರಥೋತ್ಸವ ಜರುಗಲಿದೆ

### ಡಾ.ಎಸ್. ಎಂ.ಗಾಂವಕರಗೆ ಬಿಳ್ಕೊಡುವ ಸಮಾರಂಭ

# ಉತ್ತಮ ಸೇವೆ ಸಲ್ಲಿಸಿದವರಿಗೆ ಗೌರವಿಸುವುದು ಆದ್ಯ ಕರ್ತವ್ಯ: ಗುರು ಬಸವ ಸೂಳಿಬಾವಿ




ಬಾಗಲಕೋಟೆ : ವೃತ್ತಿಯಲ್ಲಿ ಉತ್ತಮ ಸೇವೆ ಸಲ್ಲಿಸಿದವರನ್ನು ಗೌರವಿಸಿ ಸನ್ಮಾನಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಕಾಲೇಜುಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುಲುಬಸವ ಸೂಳಿಬಾವಿ ಹೇಳಿದರು.

ಅವರು ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ಎಸ್.ಎಂ.ಗಾಂವಕರವರು ಸೇವೆಯಿಂದ ನಿವೃತ್ತರಾಗಲಿರುವ ಹಿನ್ನೆಲೆಯಲ್ಲಿ ಮಹಾವಿದ್ಯಾಲಯದಿಂದ ಸನ್ಮಾನ ಹಾಗೂ ಬೀಳ್ಕೊಡುವ ಸಮಾರಂಭದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನುವಹಿಸಿ ಮಾತನಾಡಿದರು. ಗಾಂವಕರ ಅವರು ಉತ್ತಮ ಸೇವೆ ಸಲ್ಲಿಸಿದ ಪರಿಣಾಮ ಇಂದು ಮಹಾವಿದ್ಯಾಲಯಕ್ಕೆ ಹೇಸರು ಮತ್ತು ಕೀರ್ತಿ ತಂದಿದ್ದಾರೆ, ಇಂಥ ಪ್ರಾಮಾಣಿಕರ ಸೇವೆ ಸದಾಕಾಲ ಮಹಾವಿದ್ಯಾಲಯಕ್ಕೆ ಸಂಘಕ್ಕೆ ಸಿಗಲಿ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ.ಎಸ್. ಎಂ.ಗಾಂವಕರ ಮಾತನಾಡಿ ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಅವರ ಮಾರ್ಗದರ್ಶನದಲ್ಲಿ ಇಂಥ ಐತಿಹಾಸಿಕ ಸಂಸ್ಥೆಯಲ್ಲಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿರುವುದು ನನ್ನ ಪುಣ್ಯ, ಸೇವೆಯ ಸಾರ್ಥಕತೆಯ ಆತ್ಮ ವಿಶ್ವಾಸ ನನ್ನಲ್ಲಿ ತುಂಬಿದೆ, ನಾವು ಸೇವೆ ಸಲ್ಲಿಸುತ್ತಿರುವ ಸಂಸ್ಥೆಯ ಬಗ್ಗೆ ನಮಗೆ ಹೆಮ್ಮೆ ಇರಬೇಕು, ಸಹ ಶೀಕ್ಷಕ ವೃಂದ, ಕಾಲೇಜು ಆಡಳಿತ ಮಂಡಳಿಗಳು, ಸಂಘದ ದಿಂದ ದೊರೆತ ಪ್ರೋತ್ಸಾಹವೇ ನನಗೆ ಸ್ಫೂರ್ತಿಯಾಗಿದೆ ಎಂದರು. ಐಕ್ಯೂಎಸಿ ಸಂಂ–ಯೋಜಕರಾದ ಡಾ.ಡಿ.ಎಸ್.ಲಮಾಣಿ, ಪಿಯು ವಿಭಾಗದ ಪ್ರಾಚಾರ್ಯ ಡಾ.ಎನ್. ಎಚ್.ಬೇವಿನಹಳ್ಳಿ,ವಿದ್ಯಾಗಿರಿಯ ಬಸವೇಶ್ವರ ಕಲಾ. ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ ಪ್ರಾಚಾರ್ಯ ಟಿ.ಬಿ.ಕೋರಿಶೆಟ್ಟಿ, ವಿ.ಎನ್. ವನಕುದರಿ ಸೇರಿದಂತೆ ಅನೇಕರು ವೇದಿಕೆಯ ಮೇಲೆ ಇದ್ದರು.

ಇದೇ ಸಂದರ್ಭದಲ್ಲಿ ಡಾ. ಎಸ್. ಎಂ.ಗಾಂವಕರ ಅವರ ದಂಪತಿಗಳನ್ನು ವಿಜ್ಞಾನ ಮಹಾವಿದ್ಯಾಲಯ ಸೇರಿದಂತೆ ವಿವಿಧ ಮಹಾವಿದ್ಯಾಲಯಗಳಿಂದ ಸನ್ಮಾನಿಸಿ ಗೌರವಿಸಿ ಅವರನ್ನು ಬೀಳ್ಕೊಡಲಾಯಿತು.

# ರಾಷ್ಟ್ರೀಯ ಟಿ-10 ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಿಗೆ ಬೀಳ್ಕೋಡುವ ಸಮಾರಂಭ

ವಿಜಯಪುರ : ರಾಷ್ಟ್ರೀಯ ಟಿ–10 ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಿಗೆ ಉತ್ತರ ಕರ್ನಾಟಕ ಹಾಗೂ ಕರ್ನಾಟಕ ರಾಜ್ಯದ ಮಹಿಳಾ ಹಾಗೂ ಪುರುಷ ತಂಡಗಳಿಗೆ ಬೀಳ್ಕೋಡುವ ಸಮಾರಂಭ ಜರುಗಿತು.

ಜನೇವರಿ 3 ರಿಂದ 7 ರವರೆಗೆ ಉತ್ತರ ಪ್ರದೇಶದ ವಾರಣಾಸಿಯಲ್ಲಿ ಜರುಗಲಿರುವ ರಾಷ್ಟ್ರೀಯ ಟಿ–10 ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಿಗೆ ಉತ್ತರ ಕರ್ನಾಟಕ ಹಾಗೂ ಕರ್ನಾಟಕ ರಾಜ್ಯದಲ್ಲಿ ಎರಡು ಮಹಿಳಾ ಹಾಗೂ ಎರಡು ಪುರುಷ ತಂಡಗಳು ಭಾಗವಹಿಸಲು ಹೊರಡುತ್ತಿದ್ದು ಈ ತಂಡಗಳಿಗೆ ಇಂದು ವಿಜಯಪುರ ನಗರದ ಡಾ. ಬಿ.ಆರ್. ಅಂಬೇಡ್ಕರ ಕ್ರೀಡಾಂಗಣದಲ್ಲಿ ಸಮವಸ್ತ್ರ ವಿತರಣೆ ಮಾಡಿ ಬೀಳ್ಕೋಡಲಾಯಿತು.

ಸಮಾರಂಭ ಮುಖ್ಯ ಅತಿಥಿಥಳಾಗಿ ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತರಾದ ಡಾ. ಜಾವಿದ ಜಮಾದಾರವರು ಮಾತನಾಡುತ್ತಾ ನಮ್ಮ ವಿಜಯಪುರ ಜಿಲ್ಲೆಯಿಂದ ಈಗಾಗಲೇ ಅಂತರಾಷ್ಟ್ರೀಯ ಮಟ್ಟದಲ್ಲಿ ಕ್ರಿಕೆಟ್ ನಲ್ಲಿ ಆಡುತ್ತಿರುವದು ನಮ್ಮೆಲ್ಲರ ಹೆಮ್ಮೆಯ ಸಂಗತಿ ಶ್ರದ್ಧೆ, ನಿಷ್ಠೆ ಹಾಗೂ ಪರಿಶ್ರಮದಿಂದ ಪ್ರತಿನಿತ್ಯ ತರಬೇತಿ ಪಡೆದಿದೆಯಾದರೆ ಗೆಲವು ಖಚಿತ ನಾವು ಮಹಿಳಾ ಕ್ರಿಕೆಟ್ ಸಂಘಟನೆಯನ್ನು ಹುಟ್ಟು ಹಾಕಿ ಸತತ ಪ್ರಯತ್ನದ ಮೂಲಕ ಕ್ರಿಕೆಟ್ ಜೀವಂತವಾಗಿರಿಸಲು ಹಿರಿಯರು ಸೇರಿದಂತೆ ಎಲ್ಲ ವರ್ಗದ ಪ್ರಮುಖರು ಶ್ರಮಿಸುತ್ತಿದ್ದಾರೆ ಇದರ ಸದುಪಯೋಗವನ್ನು ವಾರಾಣಿಸಿಗೆ ಹೋಗುತ್ತಿರುವ ತಂಡಗಳು ಹಾಗೂ ಕ್ರೀಡಾಪಟುಗಳು ಪಡೆದುಕೊಳ್ಳಬೇಕೆಂದು ನುಡಿದರು.



ಈ ಸಂದರ್ಭದಲ್ಲಿ ಎನ್.ಎಂ.ಹೊಟಗಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವೇದಿಕೆಯ ಮೇಲೆ ಫಯಾಜ ಕಲಾದಗಿ, ಸಿ.ಎಸ್. ನಿಂಬಾಳ, ನಾಗರಾಜ ಲಂಬು, ಶ್ರೀಮತಿ ಶಶಿಕಲಾ ಇಜೇರಿ, ಶ್ರೀಮತಿ ಲಲಿತಾ ದೊಡಮನಿ, ಶ್ರೀಮತಿ ಪುಷ್ಪಾ ಮಹಾಂತಮಠ, ಶ್ರೀಮತಿ ವಿದ್ಯಾ ಕೊಟ್ಟೆಣ್ಣವರ, ಶ್ರೀಮತಿ ಇಂದುಮತಿ ಕನ್ನೂರ, ರಾಜೇಶ ತೊರವಿ, ರಾಜಶೇಖರ ಕುಚಬಾಳ, ಕುಮಾರಿ ಶಿಫಾ ಜಮಾದಾರ, ಸೋಮಶೇಖರ ರಾಠೋಡ, ಸಂಕೇತ ನಾಯಕ, ಶ್ರೀಕಾಂತ ಕಾಖಂಡಕಿ, ಪ್ರಕಾಶ ರಾಠೋಡ, ಚಾಂದವಸೀಮ ಮುಕಾದಮ, ಸಲೀಮ ಬೇಪಾರಿ, ಗಣೇಶ ಬೊಸ್ಲೆ, ರಾಬರ್ಟ ಹೊಸಳ್ಳಿ, ಜಗದೀಶ ದೊಡಮನಿ ಉಪಸ್ಥಿತ–ರಿದ್ದರು.

# ಚಾಂದ್ ಪೌಂಡೇಶನ ಸಾಮಾಜಿಕ ಕಾರ್ಯದ ಮೂಲಕ ಹುಟ್ಟು ಹಬ್ಬ ಆಚರಣೆ



ಬಾಗಲಕೋಟೆ : ಬಾಗಲಕೋಟೆ ನಗರದ ಚಾಂದ್ ಪೌಂಡೇಶನ ವತಿಯಿಂದ ಪ್ರತಿವರ್ಷ ಸಾಮಾಜಿಕ ಕಾರ್ಯಗಳನ್ನು ಮಾಡುತ್ತಾ ಬಂದಿದ್ದು, ಈ ಬಾರಿ 48ನೇ ಹುಟ್ಟು ಹಬ್ಬದ ಪ್ರಯುಕ್ತ ನವನಗರದ 12ನೇ ಸೆಕ್ಟರ, ಜಿಲ್ಲಾ ಆಸ್ಪತ್ರೆ ಸಮೀಪದ ಪಾನಿದುರ್ಗಮ್ಮ ದೇವಸ್ಥಾನಕ್ಕೆ ಕಾಣಿಕೆ ಪೆಟ್ಟಿಗೆ ಮತ್ತು ಸೆಕ್ಟರ ನಂ.2ರಲ್ಲಿಯ ಉರ್ದು ಸರಕಾರಿ ಶಾಲೆಗೆ ಅಲಮಾರ (ತಿಜೋರಿ), ಸೆಕ್ಟರ ನಂ.3 ರಲ್ಲಿರುವ 5 ನಂಬರ ಸರಕಾರಿ ಶಾಲೆಗೆ ಅಲಮಾರ ನೀಡುವ ಮೂಲಕ ಸಮಾಜಮುಖಿ ಕಾರ್ಯ ಮಾಡಿದ್ದಾರೆ.

ಕಳೆದ ಅನೇಕ ವರ್ಷಗಳಿಂದ ಜಾತಿ, ಮತ, ಬೇದ ಹಾಗೂ ಪಂಥವೆನ್ನದೇ ನೊಂದವ–ರಿಗೆ ಸಹಾಯ ಮಾಡುತ್ತಾ ಅದರಲ್ಲೂ ಹಿರಿಯ ಜೀವಿಗಳಿಗೆ ಗೌರವಿಸುವುದು ಇವರ ವಿಶೇಷ ಗುಣವಾಗಿದೆ.

ತಮ್ಮ ತಾಯಿಯ ಹುಟ್ಟು ಹಬ್ಬ ದಿನಾಚರಣೆ ಆಚ–ರಿಸುತ್ತಿರುವಾಗ ತಾಯಿ ಸಮಾನ ವಯಸ್ಕರನ್ನು ಮತ್ತು ಮಕ್ಕಳನ್ನು ಕಳೆದುಕೊಂಡ ವಯೋವೃದ್ದರನ್ನು ಅಂದು ಗೌರವಿಸುವ ಕಾರ್ಯ ಮಾಡುತ್ತಾ ಬಂದಿದ್ದಾರೆ.

ಚಾಂದ್ ನದಾಪ್‌ರ ಈ ಸಾಮಾಜಿ–ಕ ಸೇವೆ ಕಂಡು ಅನೇಕ ಪ್ರಶಸ್ತಿಗಳು ಹುಡುಕಿಕೊಂಡು ಬಂದಿವೆ. ಅದರಲ್ಲಿ ಸೇವಾ ರತ್ನ ಪ್ರಶಸ್ತಿ, ಪಿಂಜಾರ ನದಾಫ್ ಸಮಾಜ ಪ್ರಶಸ್ತಿ, ಜಿಲ್ಲಾಡಳಿತ ನೀಡುವ ಜಿಲ್ಲಾ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ, ರಾಜ್ಯ ವಿಭೂಷಣ ಪ್ರಶಸ್ತಿ ಸೇರಿ ಅನೇಕ ಗೌರವಗಳು ಸಂದಿವೆ.

ಚಾಂದ್ ತಮ್ಮ ವಿಶಿಷ್ಟ ಸೇವೆಯಲ್ಲಿ ಪಕ್ಷಾತೀತವಾಗಿ ಎಲ್ಲ ರಾಜಕೀಯ ನಾಯಕರ ಜೊತೆ ಒಡನಾಟ ಹೊಂದಿದ್ದು, ಭಾವೈಕ್ಯತೆ ಪ್ರತೀಕದಂತೆ ಹಿಂದೂ ಮುಸ್ಲಿಂ ಜನರ ಹಾಗೂ ದೇವಾಲಯ, ಮಸೀದಿಗಳಿಗೆ ದೇಣಿಗೆ ಹಾಗೂ ಉಪಯುಕ್ತ ಪರಿಕರಗಳನ್ನು ನೀಡುವ ಕಾರ್ಯ ಮಾಡುತ್ತಿದ್ದು, ರಾಷ್ಟ್ರೀಯ ಹಬ್ಬಗಳಾದ ಆಗಸ್ಟ 15 ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ, ಜನವರಿ 26 ಗಣರಾಜ್ಯೋತ್ಸವ ಅಂಗವಾಗಿ ಮತ್ತು ಕನ್ನಡ ರಾಜ್ಯೋತ್ಸವದ ಅಂಗವಾಗಿ ಸರಕಾರಿ ಆಸ್ಪತ್ರೆಯಲ್ಲಿ ದಾಖಲಾಗಿರುವ ರೋಗಿಗಳಿಗೆ ಹಾಲು, ಹಣ್ಣು ಬ್ರೆಡ್ ವಿತರಿಸುವ ಮೂಲಕ ವಿಶೇಷವಾಗಿ ಆಚರಿಸುತ್ತಾರೆ.

ಚಾಂದ್ ಬಡತನದಲ್ಲಿ ಬೆಳೆದ ತನ್ನ ಜೀವನದಂತೆ ಬೇರೆ ಅವರ ಜೀವನ ಆಗಬಾರದು ಎಂಬ ಉದ್ದೇಶದಿಂದ ವಸುದೈವ ಕುಟುಂಬಕಂ ಎಂಬಂತೆ ಜೀವನ ನಡೆಸುತ್ತಿದ್ದಾರೆ. ಅವರ ಈ ಸಾಮಾಜಿಕ ಸೇವೆ ಇನ್ನು ಹೀಗೆ ಮುಂದುವರಿಯಲಿ ಎಂಬುದು ಅವರಿಂದ ಸತ್ಕರಿಸಿಕೊಂಡ ಹಿರಿಯ ಜೀವಿಗಳ ಆಶಯವಾಗಿದೆ.

# ಜೀವ ವಿಮಾ ಪಾಲಸಿ ಪರಿಹಾರ ಪಾವತಿಸಲು ಇನ್ಸೂರೆನ್ಸ್ ಕಂಪನಿಗೆ ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶ

ಕೊಪ್ಪಳ : ಫಿರ್ಯಾದುದಾರರಿಗೆ ಜೀವ ವಿಮಾ ಪಾಲಸಿ ಪರಿಹಾರ ಪಾವತಿಸಲು ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಇನ್ಸೂರೆನ್ಸ್ ಕಂಪನಿಗೆ ಆದೇಶ ನೀಡಿದೆ.

ಗ್ರಾಹಕ ಫಿರ್ಯಾದು ಸಂಖ್ಯೆ: 34/2024 ರಲ್ಲಿ 2024ರ ಡಿಸೆಂಬರ್ 30 ರಂದು ನೀಡಿದ ಅಂತಿಮ ತೀರ್ಪಿನ ಸಾರಾಂಶದ ಅನ್ವಯ ಫಿರ್ಯಾದುದಾರರಾದ ಸುನಿತಾ ಗಂಡ ದಿ: ಪಂಪಾಪತಿ ಸಾ:ಬಸಾಪಟ್ಟಣ, ತಾ:ಗಂಗಾವತಿ ಇವರ ಗಂಡನಾದ ದಿ.ಪಂಪಾಪತಿ ಹರಿಜನ ಇವರು ತಮ್ಮ ಜೀವಿತ ಕಾಲದಲ್ಲಿ 2023ರ ಜೂನ್ 14 ರಂದು ಎದುರುದಾರರಾದ ಹೆಚ್.ಡಿ. ಎಫ್.ಸಿ ಸ್ಟ್ಯಾಂಡರ್ಡ್ ಲೈಫ್ ಇನ್ಸೂರೆನ್ಸ್ ಕಂಪನಿ ಲಿಂ. ಮುಂಬೈ (HDFC Standad Life Insurance Company Ltd., Mumbai) ಇವರಲ್ಲಿ ಅರ್ಧ ವಾರ್ಷಿಕ ಪ್ರಿಮಿಯಂ ರೂ. 50,000 ನ್ನು ಪಾವತಿಸಿ ಜೀವ ವಿಮಾ ಪಾಲಸಿಯನ್ನು ಪಡೆದುಕೊಂಡಿದ್ದರು. ಆದರೆ ಪಾಲಸಿದಾರರಾದ ಪಂಪಾಪತಿ ಇವರು 2023ರ ಸೆಪ್ಟೆಂಬರ್ 11 ರಂದು ಹೃದಯಘಾತದಿಂದ ನಿಧನ ಹೊಂದಿರುತ್ತಾರೆ. ನಾಮಿನಿಯಾದ ಪಾಲಸಿದಾರರ ಪತ್ನಿ ಸುನಿತಾ ಎದುರುದಾರ ಜೀವ ವಿಮಾ ಕಂಪನಿಯಲ್ಲಿ ಜೀವ ವಿಮಾ ಪಾಲಸಿಯನ್ನು ಪಡೆದ ವಿಷಯ ತಿಳಿದು ಕ್ಲೇಮ್ ಫಾರ್ಂ ಭರ್ತಿ ಮಾಡಿ, ಎಲ್ಲಾ ದಾಖಲಾತಿಗಳನ್ನು ಎದುರುದಾರರ ಕಂಪನಿಗೆ ನೀಡಿ ವಿಮಾ ಪರಿಹಾರ ಮೊತ್ತವನ್ನು ಪಾವತಿಸುವಂತೆ ವಿನಂತಿಸಿಕೊಂಡಿರುತ್ತಾರೆ.

ಎದುರುದಾರ ವಿಮಾ ಕಂಪನಿಯವರು ಈ ಕ್ಲೇಮ್‌ನ್ನು ಸ್ವೀಕರಿಸಿ ದೂರುದಾರರ ಪಾಲಸಿಯನ್ನು ಪಡೆಯುವ ಸಂದರ್ಭದಲ್ಲಿ ಉದ್ಯೋಗ ಮತ್ತು ಆದ–ಾಯವನ್ನು ತಪ್ಪಾಗಿ ನಮೂದಿಸಿರುತ್ತಾರೆ ಎನ್ನುವ ಕಾರಣಕ್ಕೆ ಪಾಲಸಿಯ ಕ್ಲೇಮ್‌ನ್ನು ತಿರಸ್ಕಾರ ಮಾಡಿರುತ್ತಾರೆ.

ದೂರುದಾರರಿಗೆ ಎದುರುದಾರರು ವಿಮಾ ಪಾಲಸಿಯ ಪರಿಹಾರದ ಮೊತ್ತವನ್ನು ನೀಡದೇ ನಿರ್ಲಕ್ಷ ತೋರಿ ಸೇವಾ ನ್ಯೂನತೆ ಎಸಗಿದ್ದರಿಂದ ದೂರುದಾರರು ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಅಯೋಗಕ್ಕೆ ವಿಮಾ ಕಂಪನಿ ವಿರುದ್ದ ಪರಿಹಾರವನ್ನು ಕೋರಿ ದೂರನ್ನು ಸಲ್ಲಿಸಿರುತ್ತಾರೆ.

ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ದೂರನ್ನು ದಾಖಲಿಸಿಕೊಂಡ ನಂತರ ಜಿಲ್ಲಾ ಆಯೋಗದ ಅಧ್ಯಕ್ಷರಾದ ಜಿ.ಇ.ಸೌಭಾಗ್ಯಲಕ್ಷ್ಮೀ ಹಾಗೂ ಸದಸ್ಯರಾದ ರಾಜು.ಎನ್.ಮೇತ್ರಿ ರವರು ವಾದ ಪ್ರತಿವಾದಗಳನ್ನು ಆಲಿಸಿ, ಎದುರುದಾರರಿಂದ ಉಂಟಾದ ಸೇವಾ ನ್ಯೂನತೆಗಾಗಿ ದೂರುದಾರರಿಗೆ ಜೀವ ವಿಮಾ ಪಾಲಸಿ ಒಟ್ಟು ಮೊತ್ತ ರೂ 20,16,589 ಪರಿಹಾರಗಳಿಗೆ ವಾರ್ಷಿಕ ಶೇ.6ರ ಬಡ್ಡಿ ಸಮೇತ ದೂರಿನ ದಿನಾಂಕದಿಂದ ಪಾವತಿಯಾಗುವವರೆಗೆ ದೂರುದಾರರಿಗೆ ಪಾವತಿಸುವಂತೆ ಆದೇಶಿಸಿರುತ್ತಾರೆ.

ಹಾಗೂ ದೂರುದಾರರಿಗೆ ಉಂಟಾದ ಮಾನಸಿಕ ಯಾತನೆಗಾಗಿ ರೂ. 5,000 ಗಳನ್ನು ಹಾಗೂ ದೂರಿನ ಖರ್ಚು ರೂ. 5000 ಗಳನ್ನು 45 ದಿನಗಳ ಒಳಗಾಗಿ ಎದುರುದಾರು ದೂರುದಾರರಿಗೆ ಪಾವತಿಸುವಂತೆ ಆದ–ೇಶವನ್ನು ನೀಡಿರುತ್ತದೆ ಎಂದು ಕೊಪ್ಪಳ ಜಿಲ್ಲಾ ಗ್ರಾಹಕರ ಆಯೋಗದ ಸಹಾಯಕ ರಿಜಿಸ್ಟ್ರಾರ ಹಾಗೂ ಸಹಾಯಕ ಆಡಳಿತಾಧಿಕಾರಿ ಪಿ.ಎಸ್ ಅಮರದೀಪ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕಾರಣಾ ದಿನಾಚರಣೆ: ಜಿಲ್ಲಾಡಳಿತದಿಂದ ಪುಷ್ಪ ನಮನ ಸಲ್ಲಿಕೆ




ಕೊಪ್ಪಳ : ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕಾರಣಾ ದಿನಾಚರಣೆ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತದ ವತಿಯಿಂದ ವಿಶ್ವ ವಿಖ್ಯಾತ ಅಮರ ಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಜನವರಿ 1 ರಂದು ಪುಷ್ಪ ನಮನ ಸಲ್ಲಿಸಲಾಯಿತು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಬುಧವಾರ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕಾರಣಾ ದಿನಾಚರಣೆಯನ್ನು ಜಿಲ್ಲಾಡಳಿತ ಕಛೇರಿ ಸಭಾಂಗಣದಲ್ಲಿ ಸರಳವಾಗಿ ಆಚರಿಸಲಾಯಿತು. ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ವಿಶ್ವ ವಿಖ್ಯಾತ ಅಮರ ಶಿಲ್ಪಿ ಜಕಣಾಚಾರಿಯವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ, ಚುನಾವಣಾ ಶಾಖೆಯ ತಹಶೀಲ್ದಾರ ರವಿ ವಸ್ತ್ರದ್, ವಿಶ್ವಕರ್ಮ ಸಮಾಜದ ಮುಖಂಡರಾದ ದೇವೆಂದ್ರಪ್ಪ ಬಡಿಗೇರ, ಈಶಪ್ಪ ಬಡಿಗೇರ, ರುದ್ರಪ್ಪ ಬಡಿಗೇರ, ದೇವಪ್ಪ ಬಡಿಗೇರ, ಕಲ್ಲಪ್ಪ ಬಡಿಗೇರ, ನಿಂಗಪ್ಪ ಬಡಿಗೇರ, ನಿಂಗಪ್ಪ ಬಡಿಗೇರ ಹಾಗೂ ಮತ್ತಿತರರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಜಿಲ್ಲಾಡಳಿತದಿಂದ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

ಗದಗ : ಜಿಲ್ಲಾಡಳಿತ, ಜಿಲ್ಲಾ ಪಂಚಾ0ಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ0ಯ ವತಿಯಿಂದ ಗದಗ ನಗರದ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಬುಧವಾರ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಅವರ ಸಂಸ್ಮರಣಾ ದಿನಾಚರಣೆ ನಿಮಿತ್ತ ವಿಧಾನ ಪರಿಷತ್ ಶಾಸಕ ಎಸ್ ವಿ ಸಂಕನೂರ ಅವರು ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ಸಮರ್ಪಿಸಿದರು.

ದೇಶದ ಮಾಜಿ ಪ್ರಧಾನಮಂತ್ರಿಗಳಾದ ಡಾ. ಮನಮೋಹನ ಸಿಂಗ್ ಅವರ ನಿಧನದಿಂದಾಗಿ ಶೋಕಾಚರಣೆ ಜಾರಿ ಇರುವ ಹಿನ್ನೆಲೆ0ಯಲ್ಲಿ, ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಲ್ಲಿಸಿ, ಸಂಸ್ಮರಣಾ ದಿನಾಚರಣೆ0ಯನ್ನು ಸರಳವಾಗಿ ಆಚರಣೆ ಮಾಡಲಾಯಿತು.



ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾ0ಯತ ಮುಖ್ಯ ಕಾ0ರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಗದಗ ಬೆಟಗೇರಿ ನಗರ ಸಭೆ0ಯ ಪೌರಾ0ಯುಕ್ತ ಮಹೇಶ್ ಪೋತದಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾ0ಯಕ ನಿರ್ದೇಶಕ ವೀರ0ಯ್ಯಸ್ವಾಮಿ ಬಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆ0ಯ ಅಧಿಕಾರಿ, ಸಿಬ್ಬಂದಿಗಳು ಹಾಗೂ ಸಮಾಜದ ಮುಖಂಡರು ಜಕಣಾಚಾರಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಹಾಗೂ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು.

# ಜ. 3- 4 ರಂದು ಕೊಪ್ಪಳದಲ್ಲಿ ಕ್ರೀಡಾ ವಸತಿ ನಿಲಯಗಳಿಗೆ ಆಯ್ಕೆ ಪ್ರಕ್ರಿಯೆ

ಕೊಪ್ಪಳ : ರಾಜ್ಯದ ವಿವಿಧ ಕ್ರೀಡಾ ವಸತಿ ನಿಲಯಗಳಿಗೆ ಹಾಗೂ ಕೊಪ್ಪಳ ಜಿಲ್ಲಾ ಕ್ರೀಡಾ ವಸತಿ ನಿಲಯಗಳಿಗೆ ಆಯ್ಕೆ ಪ್ರಕ್ರಿಯೆಯು ಜನವರಿ 3 ಮತ್ತು 4 ರಂದು ಬೆಳಿಗ್ಗೆ 10.30 ರಿಂದ ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದೆ.

2025–26ನೇ ಸಾಲಿಗೆ ಕರ್ನಾಟಕ ರಾಜ್ಯದ ವಿವಿಧ ಸ್ಥಳಗಳಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ಶಾಲೆ, ವಸತಿ ನಿಲಯಕ್ಕೆ ಕ್ರೀಡಾಪಟುಗಳನ್ನು ಆಯ್ಕೆ ಮಾಡುವ ಸಂಬಂದ ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿರುವ ಈ ಆಯ್ಕೆ ಪ್ರಕ್ರಿಯೆಯಲ್ಲಿ ಪ್ರಸ್ತುತ 4, 7 ಮತ್ತು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಈ ಭಾಗವಹಿಸಬಹುದಾಗಿದೆ. ಆಸಕ್ತಿ ಇರುವ ಕ್ರೀಡಾಪಟುಗಳು, ಪಾಲಕರು, ಪೋಷಕರು ತಮ್ಮ ಮಗು ಉತ್ತಮ ಕ್ರೀಡಾಪಟುವಾಗಲು ಸುವರ್ಣಾವಕಾಶವಿದ್ದು, ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಖೋಖೋ ತರಬೇತುದಾರರಾದ ಎ.ಎನ್ ಯತಿರಾಜು ಮೊ.ಸಂ: 9448633146 ಹಾಗೂ ರೋಹಿಣಿ ಪರ್ವತೀಕರ ಮೊ.ಸಂ: 8217324522, ವಾಲಿಬಾಲ್ ತರಬೇತಿದಾರರಾದ ಕಮಲ್ ಸಿಂಗ್ ಬಿಸ್ಟ್ ಮೊ.ಸಂ: 6360146300, ಸುರೇಶ ಮೊ.ಸಂ: 9901527333, ಅಥ್ಲೆಟಿಕ್ಸ್ ತರಬೇತುದಾರ ವಿಶ್ವನಾಥ ಕರ್ಲಿ ಮೊ.ಸಂ: 8660455969, ಕೊಪ್ಪಳ ಸಣ್ಣ ವಾಲಿಬಾಲ್ ತರಬೇತಿ ಕೇಂದ್ರದ ವಾಲಿಬಾಲ್ ತರಬೇತುದಾರರಾದ ದೀಪಾ ಮೊ.ಸಂ: 8088143003, ಇವರಿಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದ ವರ್ಗದವರಿಗೆ ಪಿ.ಎಚ್.ಡಿ ಅಧ್ಯಯನಕ್ಕೆ ಫೆಲೋಶಿಪ್: ಅರ್ಜಿ ಆಹ್ವಾನ

ಕೊಪ್ಪಳ : ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ 2024–25ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿ.ಎಚ್.ಡಿ ಅಧ್ಯಯನ ಪ್ರಾರಂಭಿಸಿರುವ (ದಿನಾಂಕ:10.01.2024 ಮತ್ತು ಅದರ ನಂತರ ಪ್ರಥಮ ವರ್ಷದ ಪಿ.ಎಚ್.ಡಿ ಪ್ರಾರಂಭಿಸಿರಬೇಕು) ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ, ಹಾಗೂ 3ಬಿ ಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ವ್ಯಾಸಂಗ ವೇತನ, ಫೆಲೋಶಿಪ್‌ಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2024–25 ನೇ ಸಾಲಿನಲ್ಲಿ ಕರ್ನಾಟಕದ ಶಾಸನಬದ್ದ ವಿಶ್ವವಿದ್ಯಾಲಯಗಳಲ್ಲಿ ಅಥ–ವಾ ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿ.ಎಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ವಿದ್ಯಾರ್ಥಿಗಳು ಮಾತ್ರ ಆಫ್–ಲೈನ್ ಮೂಲಕ ಜನವರಿ 20ರ ಸಂಜೆ 5.30 ಗಂಟೆಯೊಳಗೆ ಅರ್ಜಿ ಸಲ್ಲಿಸಬೇಕು. ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ https://bcwd.karnataka.gov.in ತಿಳಿದುಕೊಂಡು ನಂತರ ಅರ್ಜಿ ಸಲ್ಲಿಸುವುದು.

ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಅಥವಾ 3ಬಿ ಸೇರಿರಬೇಕು. ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ ಪ್ರವರ್ಗ–1ಕ್ಕೆ ರೂ.4.50 ಲಕ್ಷ

ಪ್ರವರ್ಗ–2ಎ, 3ಎ, 3ಬಿ ಇತರೆ ಹಿಂದುಳಿದ ವರ್ಗ ಹಾಗೂ ಇತರೆ ರೂ.3.50 ಲಕ್ಷಕ್ಕೆ ಮೀ–ರಿರಬಾರದು. ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರಬೇಕು. ಅಭ್ಯರ್ಥಿಗಳು ಪೂರ್ಣಾವಧಿ ಪಿ.ಎಚ್.ಡಿ ಅಧ್ಯಯನಕ್ಕಾಗಿ ಮಾಡಿಸುವ ನೋಂದಣಿ ದಿನಾಂಕವು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ವ್ಯಾಸಂಗ ವೇತನ/ ಫೆಲೋಶಿಫ್‌ಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸುವ ಕೊನೆಯ ದಿನಾಂಕಕ್ಕೆ ಹಿಂದಿನ 2 ವರ್ಷದೊಳಗಿದ್ದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿ.ಎಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8050770004 ಗೆ ಸಾರ್ವಜನಿಕ ರಜಾ ದಿನಗಳನ್ನು ಹೊರೆತು ಪಡಿಸಿ ಕಛೇರಿ ಸಮಯದಲ್ಲಿ (ಬೆಳಿಗ್ಗೆ 10 ರಿಂದ ಸಂಜೆ 5.30 ರವರೆಗೆ) ಸಂಪರ್ಕಿಸುವಂತೆ ಕೊಪ್ಪಳ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವಸ್ಥಾನಗಳಿಗೆ ವ್ಯವಸ್ಥಾಪನಾ ಸಮಿತಿ ರಚನೆ : ಅರ್ಜಿ ಆಹ್ವಾನ

ಕಾರವಾರ – ಜಿಲ್ಲೆಯಲ್ಲಿರುವ "ಬಿ" ಪ್ರವರ್ಗದ 4 ಹಾಗೂ "ಸಿ" ಪ್ರವರ್ಗದ 22 ಅಧಿಸೂಚಿತ ಸಂಸ್ಥೆ / ದೇವಾಲಯಕ್ಕೆ 9 ಸದಸ್ಯರಿರುವ ( ದೇವಸ್ಥಾನದ ಪ್ರಧಾನ ಅರ್ಚಕ/ ಅರ್ಚಕ ಒಬ್ಬರು, ಪ.ಜಾತಿ/ಪಂಗಡ ಒಬ್ಬರು, ಮಹಿಳೆಯರು ಇಬ್ಬರು, ದೇವಸ್ಥಾನ/ಸಂಸ್ಥೆ ಇರುವ ಪ್ರದೇಶದ ಸ್ಥಳೀಯರು ಒಬ್ಬರು, ಇತರೆ 4 ಜನ ) ವ್ಯವಸ್ಥಾಪನಾ ಸಮಿತಿಯನ್ನು 3 ವರ್ಷಗಳ ಅವಧಿಗೆ ರಚಿಸಲು ಆಸಕ್ತ ಭಕ್ತಾಧಿಗಳು/ ಸಾರ್ವಜನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಿ ಪ್ರವರ್ಗದ ದೇವಸ್ಥಾನ: ಕಾರವಾರ ತಾಲೂಕಿನ ಬಾಡ ನಂದನಗದ್ದಾದ ಶ್ರೀ.ಮಹಾದೇವ ವಿನಾಯಕ ದೇವಸ್ಥಾನ, ಕುಮಟಾ ತಾಲೂಕಿನ ಗೋಕರ್ಣದ ಶ್ರೀ. ತಾಮ್ರಗೌರಿ (ಪಾರ್ವತಿ ದೇವಿ) ದೇವಸ್ಥಾನ, ಶಿರಸಿ ತಾಲೂಕಿನ ಬನವಾಸಿಯ ಮಧುಕೇಶ್ವರ ದೇವಸ್ಥಾನ, ಭಟ್ಕಳ ತಾಲೂಕಿನ ಸೋಡಿಗದ್ದೆ ಶ್ರೀ.ಮಹಾಸತಿ ದೇವಸ್ಥಾನ.

ಸಿ ಪ್ರವರ್ಗದ ದೇವಸ್ಥಾನ: ಕಾರವಾರ ತಾಲೂಕಿನ ಅಸ್ನೋಟಿಯ ಶ್ರೀ.ಕಾಮಾಕ್ಷೀ ರಾಜೇಶ್ವರಿ, ಮಹಾಗಣಪತಿ ಮಹಾಪುರುಷ ದೇವಸ್ಥಾನ, ನಂದನಗದ್ದಾದ ಶ್ರೀ ನಾಗನಾಥ ದೇವಾಸ್ಥಾನ, ತೋಡೂ–ರಿನ ಶ್ರೀ ಮಹಾದೇವ ಮತ್ತು ಗೋವಿಂದ ದೇವಸ್ಥಾನ, ಚೆಂಡಿಂ–ಯಾದ ಶ್ರೀ ಮಹಾದೇವ ಶ್ರೀ ಕೇಶವ ನಾರಾಯಣ, ಭೂದೇವಿ ದೇವಸ್ಥಾನ, ಅಂಕೋಲಾ ತಾಲೂಕಿನ ಮಂಜುಗುಣಿ ಶ್ರೀ ವಿನಾಯಕ ದೇವಸ್ಥಾನ, ಶ್ರೀ ಗಣಪತಿ ದೇವಸ್ಥಾನ, ಶ್ರೀ ಕೊಗ್ರೆ ಗ್ರಾಮ ದೇವ (ಬೊಮ್ಮಯ್ಯ) ದೇವಸ್ಥಾನ, ಬೆಳೆಸೆಯ ಶ್ರೀ ದುರ್ಗಾದೇವಿ ದೇವಸ್ಥಾನ, ಕುಮಟಾ ತಾಲೂಕಿನ ಹನೇಹಳ್ಳಿ ಶ್ರೀ ಗ್ರಾಮದೇವಿ ದೇವಸ್ಥಾನ, ಮಿರ್ಜಾನದ ಶ್ರೀ ಶಾಂತಿಕಾ ಪರಮೇಶ್ವರಿ ದೇವಸ್ಥಾನ, ಹೊನ್ನಾವರ ತಾಲೂಕಿನ ಶ್ರೀ ವಿಠ್ಠಲ ರುಕ್ಮಾಯಿ ದೇವಸ್ಥಾನ, ಶ್ರೀ ಅರಸಿ ಶಂಭುಲಿಂಗ ದೇವಸ್ಥಾನ, ಭಟ್ಕಳ ತಾಲೂಕಿನ ಮಾರುಕೇರಿಯ ಶ್ರೀ ಶಂಭುಲಿಂಗ ದೇವಸ್ಥಾನ, ಬೆಳಕೆಯ ಶ್ರೀ ವಿನಾಯಕ ದೇವಸ್ಥಾನ, ಬೈಲೂರಿನ ಶ್ರೀ ಚಿದಾನಂದೇಶ್ವರ ಗೋಪಾಲಕೃಷ್ಣ ಕನ್ನಮ್ಮ (ಮಾರ್ಕಾಂಡೇಯ) ದೇವಸ್ಥಾನ, ಶಿರಸಿ ತಾಲೂಕಿನ ಗೋಣುರು ಶ್ರೀ ಮಾಸ್ತಮ್ಮ ದೇವಸ್ಥಾನ, ಗಣೇಶನಗರ ಶ್ರೀ ಮಾರುತಿ ದೇವಸ್ಥಾನ, ಸಿದ್ದಾಪುರ ತಾಲೂಕಿನ ಬೇಡ್ಕಣಿ ಶ್ರೀ ಕೋಟಿ ಹನುಮಂತ ದೇವಸ್ಥಾನ, ಮಲೇನಳ್ಳಿ ಕಾನಸೂರು ಶ್ರೀ ಕೇಶವ ದೇವಸ್ಥಾನ, ಹಳಿಯಾಳ ತಾಲೂಕಿನ ಹವಗಿ ಶ್ರೀ ಕಲ್ಮೇಶ್ವರ ದೇವಸ್ಥಾನ, ಜೋಯಿಡಾ ತಾಲೂಕಿನ ಅಂಬೋಲಿಯ (ರಾಮನಗರ) ಶ್ರೀ ರಾಮಲಿಂಗೇಶ್ವರ ದೇವಸ್ಥಾನ, ದಾಂಡೇಲಿ ತಾಲೂಕಿನ ಶ್ರೀ ಮಾರುತಿ ಮಂದಿರ ದೇವಸ್ಥಾನಗಳು.

ಕನಿಷ್ಠ 25 ವರ್ಷ ವಯಸ್ಸಾಗಿರವ ಆಸಕ್ತ ಭಕ್ತಾಧಿಗಳು/ಸಾರ್ವಜನಿಕರು ಯಾವುದೇ ಒಂದು ಅಧಿಸೂಚಿತ ಸ ಂ ಸ್ಥೆ ಂ ು ಿ / ದೇ ವಾ ಲ ಂ ು ಿ ದ ವ್ಯವಸ್ಥಾಪನಾ ಸಮಿತಿಗೆ ಮಾತ್ರ ಸದಸ್ಯತ್ವ ಕೋರಿ ಅರ್ಜಿಯನ್ನು ನಿಗದಿತ ನಮೂನೆ –1 (ಬಿ)ರಲ್ಲಿ ಭರ್ತಿ ಮಾಡಿ ಅರ್ಜಿಯನ್ನು ಜ.27 ರೊಳಗಾಗಿ ನೇರವಾಗಿ ಪದನಿಮಿತ್ತ ಕಾರ್ಯದರ್ಶಿ ಜಿಲ್ಲಾ ಧಾರ್ಮಿಕ ಪರಿಷತ್ ಮತ್ತು ಸಹಾಯಕ ಆಯುಕ್ತರು ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ, ಜಿಲ್ಲಾಧಿಕಾ–ರಿಗಳ ಕಾರ್ಯಾಲಯ ಕಚೇರಿಗೆ ನಿಗದಿತ ಸಮಯದಲ್ಲಿ ಅರ್ಜಿಯನ್ನು ಸಲ್ಲಿಸಬಹುದು ತದನಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. (ನಿಗದಿತ ಅರ್ಜಿ ನಮೂನೆ ಹಾಗೂ ಸದಸ್ಯರಾಗಲು ಇರುವ ಅರ್ಹತೆ, ಅನರ್ಹತೆ ವಿವರಗಳು ಕಾರವಾರ, ಅಂಕೋಲಾ, ಕುಮಟಾ, ಹೋನ್ನವರ, ಭಟ್ಕಳ, ಶಿರಸಿ, ಸಿದ್ದಾಪುರ, ಹಳಿಯಾಳ, ಜೋಯಿಡಾ ಹಾಗೂ ದಾಂಡೇಲಿ ತಹಶೀಲ್ದಾರ ಕಾರ್ಯಾಲಯ ಹಾಗೂ ಜಿಲ್ಲಾಧಿಕಾ–ರಿಗಳ ಕಾರ್ಯಾಲಯ ಮುಜರಾಯಿ ಶಾಖೆಯಲ್ಲಿ ಪಡೆಯಬಹುದೆಂದು ಜಿಲ್ಲಾ ಧಾರ್ಮಿಕ ಪರಿಷತ್‌ನ ಪದನಿಮಿತ್ತ ಕಾರ್ಯದರ್ಶಿ ಹಾಗೂ ಮುಜರಾಯಿ ಇಲಾಖೆಯ ಸಹಾಯಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಮರ ಶಿಲ್ಪಿ ಜಕಣಾಚಾರಿ ಜಯಂತಿ ಆಚರಣೆ



ಕಾರವಾರ – ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಬುಧವಾರ ನಡೆದ ಅಮರ ಶಿಲ್ಪಿ ಜಕಣಾಚಾರಿ ಜಯಂತಿಯನ್ನು , ಜಿಲ್ಲಾಧಿಕಾರಿ ಕಚೇ–ರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಅವರು ಅಮರ ಶಿಲ್ಪಿ ಜಕಣಾಚಾರಿ ಭಾವ ಚಿತ್ರಕ್ಕೆ ಪುಷ್ಪನಮನ ಸಲ್ಲಿಸುವುದರೊಂದಿಗೆ ಸರಳವಾಗಿ ಆಚ–ರಿಸಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಮಂಗಲಾ ಎಂ ನಾಯ್ಕ, ವಿಶ್ವಕರ್ಮ ಮಹಾ ಒಕ್ಕೂಟದ ಜಿಲ್ಲಾಧ್ಯಕ್ಷ ರಾಘವೇಂದ್ರ ಆಚ–ಾರ್ಯ ಮತ್ತಿತರರು ಉಪಸ್ಥಿತರಿದ್ದರು.

# ಕಣ್ಣಿನ ದೃಷ್ಟಿ ಸಾಮರ್ಥ್ಯ ಹೆಚ್ಚಿಸಲು ಸುಲಭ ಮತ್ತು ಪರಿಣಾಮಕಾರಿ ಮಾರ್ಗಗಳು

ದೈನಂದಿನ ಚಟುವಟಿಕೆಗಳಿಗೆ ಉತ್ತಮ ದೃಷ್ಟಿ ಅತ್ಯಗತ್ಯ, ಆದರೂ ಅನೇಕ ಜನರು ಆರೋಗ್ಯಕರ ದೃಷ್ಟಿಯನ್ನು ಕಾಪಾಡಿಕೊಳ್ಳಲು ಕಷ್ಟಪಡುತ್ತಾರೆ. ದೃಷ್ಟಿ ದೋಷ ಸರಿಪಡಿಸುವ ಮಸೂರಗಳು ಮತ್ತು ಶಸ್ತ್ರಚಿಕಿತ್ಸೆಗಳು ಲಭ್ಯವಿರುವ ಆಯ್ಕೆಗಳಿದ್ದರೂ, ಉತ್ತಮ ಆಯ್ಕೆ ಎಂದರೆ ಅದು ನೈಸರ್ಗಿಕ ಪ್ರಕ್ರಿಯೆಗಳು ಮಾತ್ರವೇ..



ನಿಮ್ಮ ಕಣ್ಣಿನ ಆರೋಗ್ಯ ಹೆಚ್ಚಿಸುವ ಕೆಲ ಆರೋಗ್ಯಕರ ಸಲಹೆಗಳು ಇಂತಿವೆ.

ಆರೋಗ್ಯಕರ ಆಹಾರ

ದೃಷ್ಟಿ ಸುಧಾರಣೆಗಾಗಿ ವ್ಯಾಪಕ ಪೋಷಕಾಂಶ-ಭರಿತ ಆಹಾರಗಳನ್ನು ತಿನ್ನುವುದು ಅತ್ಯುತ್ತಮ. ಉತ್ತಮ ಆಹಾರ ಕಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ವಿಟಮಿನ್ ಎ, ಸಿ, ಮತ್ತು ಇ, ಸತು ಮತ್ತು ಸೆಲೆನಿಯಮ್‌ನಂತಹ ಅಗತ್ಯ ಪೋಷಕಾಂಶಗಳು, ಕ್ಯಾರೊಟಿನಾಯ್ಡ್‌ಗಳಾದ ಲುಟೀನ್ ಮತ್ತು ಜಿಯಾಕ್ಸಾಂಥಿನ್ ಜೊತೆಗೆ ವಯಸ್ಸಿಗೆ ಸಂಬಂಧಿಸಿದ ಕಣ್ಣಿನ ಅಸ್ವಸ್ಥತೆಗಳಿಂದ ರಕ್ಷಿಸುತ್ತದೆ. ಮುಖ್ಯವಾಗಿ ಸೊಪ್ಪು, ಬೀಜಗಳು, ಸಮುದ್ರಾಹಾರ ಅಂದರೆ ಮೀನು, ಏಡಿ ಮತ್ತು ಹಣ್ಣು ಮತ್ತು ತರಕಾರಿಗಳನ್ನು ತಿನ್ನುವ ಮೂಲಕ ನೀವು ಮೇಲೆ ತಿಳಿಸಿದ ಎಲ್ಲಾ ಪೋಷಕಾಂಶಗಳನ್ನು ಪಡೆಯಬಹುದು.

ಧೂಮಪಾನ ತ್ಯಜಿಸಿ

ಧೂಮಪಾನವು ಕಣ್ಣಿನ ಆರೋಗ್ಯದ ಮೇಲೆ ಬಹಳ ಋಣಾತ್ಮಕ ಪರಿಣಾಮವನ್ನು ಬೀರುತ್ತದೆ ಮತ್ತು ವಯಸ್ಸಿಗೆ ಸಂಬಂಧಿಸಿದ ಸಮಸ್ಯೆಗಳಾದ ಮ್ಯಾಕ್ಯುಲರ್ ಡಿಜೆನರೇಶನ್, ಕಣ್ಣಿನ ಪೊರೆ, ಗ್ಲುಕೋಮಾ, ಡಯಾಬಿಟಿಕ್ ರೆಟಿನೋಪತಿ ಮತ್ತು ಡ್ರೈ ಐ ಸಿಂಡ್ರೋಮ್‌ಗಳ ಅಪಾಯವನ್ನು ಹೆಚ್ಚಿಸುತ್ತದೆ. ಸಿಗರೇಟ್ ಹೊಗೆಯಲ್ಲಿರುವ ವಿಷಕಾರಿ ವಸ್ತುಗಳು ಉರಿಯೂತವನ್ನು ಉಂಟುಮಾಡಬಹುದು ಮತ್ತು ಕಣ್ಣುಗಳಿಗೆ ರಕ್ತದ ಹರಿವನ್ನು ನಿರ್ಬಂಧಿಸಬಹುದು. ಧೂಮಪಾನದ ದೀರ್ಘಕಾಲೀನ ಪರಿಣಾಮಗಳು ಕಣ್ಣಿನ ಪೊರೆಗಳು ಮತ್ತು ವಯಸ್ಸಿಗೆ ಸಂಬಂಧಿಸಿದ ಮ್ಯಾಕ್ಯುಲರ್ ಡಿಜೆನರೇಶನ್ ಅನ್ನು ಒಳಗೊಂಡಿರುತ್ತವೆ.

ಡಿಜಿಟಲ್ ಸ್ಕ್ರೀನ್ ನೋಡುವ ಸಮಯ ಕಡಿಮೆ ಮಾಡಿ

ದೀರ್ಘಾವಧಿಯ ಪರದೆ ನೋಡುವ ಸಮಯ ಅಂದರೆ ಮೊಬೈಲ್, ಲ್ಯಾಪ್ ಟಾಪ್, ಕಂಪ್ಯೂಟರ್ ಡಿಜಿಟಲ್ ಸ್ಕ್ರೀನ್ ನೋಡುವಿಕೆಯು ಕಣ್ಣಿನ ರೆಟಿನಾ ಮತ್ತು ನಿದ್ರೆಯ ಚಕ್ರದ ಮೇಲೆ ಹಾನಿ ಮಾಡುತ್ತದೆ. ಅಲ್ಲದೆ ನೀಲಿ ಬೆಳಕಿನ ಹಾನಿಯಿಂದಾಗಿ ಶುಷ್ಕತೆ, ಆಯಾಸ ಮತ್ತು ಆಯಾಸದಂತಹ ಕಣ್ಣಿನ ಸಮಸ್ಯೆಗಳನ್ನು ಉಂಟುಮಾಡಬಹುದು. ನಿಮ್ಮ ಪರದೆಯ ಸಮಯವನ್ನು ಮಿತಿಗೊಳಿಸಿ ಮತ್ತು ಕಣ್ಣಿನ ಆಯಾಸವನ್ನು ಕಡಿಮೆ ಮಾಡಲು ಆಗಾಗ್ಗೆ ವಿರಾಮಗಳನ್ನು ತೆಗೆದುಕೊಳ್ಳಿ.



ಅನುವಂಶಿಕ ಸ್ಥಿತಿಗಳ ಬಗ್ಗೆ ತಿಳಿಯಿರಿ

ಕೆಲವು ಕಣ್ಣಿನ ಕಾಯಿಲೆಗಳು ಆನುವಂಶಿಕವಾಗಿರುತ್ತವೆ, ಅಂದರೆ ಒಬ್ಬರ ಪೋಷಕರು ತಮಗೆ ಅನುವಂಶಿಕ ಕಣ್ಣಿನ ಸಮಸ್ಯೆ ಇದ್ದರೆ ಅದನ್ನು ತಮ್ಮ ಮಕ್ಕಳಿಗೆ ಅವುಗಳನ್ನು ರವಾನಿಸಬಹುದು. ಹೀಗಾಗಿ ನಿಮ್ಮ ಕುಟುಂಬದ ವೈದ್ಯಕೀಯ ಇತಿಹಾಸವನ್ನು ತಿಳಿದುಕೊಳ್ಳುವುದು ಕಣ್ಣಿನ ಅಸ್ವಸ್ಥತೆಗಳನ್ನು ಮೊದಲೇ ಪತ್ತೆಹಚ್ಚಲು ಮತ್ತು ಚಿಕಿತ್ಸೆ ನೀಡಲು ಸಹಾಯ ಮಾಡುತ್ತದೆ. ಕಣ್ಣಿನ ಕಾಯಿಲೆಗಳ ಯಾವುದೇ ಕುಟುಂಬದ ಇತಿಹಾಸವಿದ್ದರೆ, ಉತ್ತಮ ಸ್ಕ್ರೀನಿಂಗ್ ಮತ್ತು ತಡೆಗಟ್ಟುವ ಕ್ರಮಗಳನ್ನು ನಿರ್ಧರಿಸಲು ಕಣ್ಣಿನ ತಜ್ಞರೊಂದಿಗೆ ಚರ್ಚಿಸುವುದು ಅತ್ಯಗತ್ಯ.

ಹೆಚ್ಚು ನೀರು ಕುಡಿಯಿರಿ

ನಿರ್ಜಲೀಕರಣವು ಒಣ ಕಣ್ಣುಗಳು, ಕಿರಿಕಿರಿ ಮತ್ತು ದೇಹದಲ್ಲಿ ಬಳಲಿಕೆಗೆ ಕಾರಣವಾಗಬಹುದು. ಕಣ್ಣುಗಳನ್ನು ನಿರ್ಜಲೀಕರಣದಿಂದ ತಪ್ಪಿಸಲು ದಿನವಿಡೀ ಸಾಕಷ್ಟು ನೀರು ಮತ್ತು ಇತರ ದ್ರವಾಹಾರಗಳನ್ನು ಸೇವಿಸಬೇಕು. ಕುಡಿಯುವ ನೀರಿನ ಜೊತೆಗೆ, ಸೌತೆಕಾಯಿ, ಕಲ್ಲಂಗಡಿಗಳಂತಹ ಆಹಾರ ಪದಾರ್ಥಗಳು ನಿಮ್ಮ ಕಣ್ಣುಗಳನ್ನು ನಿರ್ಜಲೀಕರಣ ಸಮಸ್ಯೆಯನ್ನು ದೂರ ಮಾಡುತ್ತವೆ.



ರಕ್ಷಣಾತ್ಮಕ ಕನ್ನಡಕ ಧರಿಸಿ

ರಕ್ಷಣಾತ್ಮಕ ಕನ್ನಡಕಗಳನ್ನು ಬಳಸುವುದು ಕಣ್ಣಿನ ಗಾಯವನ್ನು ತಪ್ಪಿಸಲು ನಿಮಗೆ ಸಹಾಯ ಮಾಡುತ್ತದೆ. ಕ್ರೀಡೆಗಳು ಅಥವಾ ಅಪಾಯಕಾರಿ ಕೆಲಸದ ಸಂದರ್ಭಗಳಂತಹ ಅಪಾಯಕಾರಿ ಚಟುವಟಿಕೆಗಳಲ್ಲಿ ಕನ್ನಡಕಗಳನ್ನು ಬಳಸುವುದು ಕಣ್ಣಿನ ಹಾನಿಯನ್ನು ತಪ್ಪಿಸಲು ಸಹಾಯ ಮಾಡುತ್ತದೆ. ಪ್ರಮುಖವಾಗಿ ಹೊರಾಂಗಣದಲ್ಲಿ, ಗಗಿ ರಕ್ಷಣೆಯೊಂದಿಗೆ ಸನ್ ಗ್ಲಾಸ್ ಗಳು ಹಾನಿಕಾರಕ ಗಗಿ ಕಿರಣಗಳಿಂದ ಕಣ್ಣುಗಳನ್ನು ರಕ್ಷಿಸಲು ಸಹಾಯ ಮಾಡುತ್ತದೆ.

ನಿಯಮಿತ ಕಣ್ಣಿನ ತಪಾಸಣೆ

ಸಂಪೂರ್ಣ ಕಣ್ಣಿನ ಪರೀಕ್ಷೆಯು ಯಾವುದೇ ರೋಗನಿರ್ಣಯ ಮಾಡದ ಕಣ್ಣಿನ ಸ್ಥಿತಿಯನ್ನು ಮೊದಲೇ ಪತ್ತೆ ಮಾಡುತ್ತದೆ, ನಿಯಮಿತ ಕಣ್ಣಿನ ಪರೀಕ್ಷೆಗಳು ನಿಮಗೆ ಕನ್ನಡಕ ಅಥವಾ ಕಾಂಟ್ಯಾಕ್ಟ್ ಲೆನ್ಸ್‌ಗಳಿಗೆ ಹೊಸ ಪ್ರಿಸ್ಕ್ರಿಪ್ಷನ್ ಅಗತ್ಯವಿದೆಯೇ ಎಂದು ನಿರ್ಧರಿಸಲು ಸಹಾಯ ಮಾಡುತ್ತದೆ, ನಿಮಗೆ ಸಾಧ್ಯವಾದಷ್ಟು ಆಗಾಗ್ಗೆ ಕಣ್ಣಿನ ಪರೀಕ್ಷೆ ಮಾಡಿಸಿಕೊಳ್ಳುವ ಮೂಲಕ ಉತ್ತಮ ದೃಷ್ಟಿ ಇದೆ ಎಂದು ಖಚಿತಪಡಿಸುತ್ತದೆ.

ಕಣ್ಣಿನ ನೈರ್ಮಲ್ಯ ಅಭ್ಯಾಸ



ನಿಮ್ಮ ಕಣ್ಣುಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಕಣ್ಣಿನ ಸೋಂಕನ್ನು ತಡೆಗಟ್ಟಲು ಸಹಾಯ ಮಾಡುತ್ತದೆ. ಕಣ್ಣಿನ ಸಂಬಂಧಿತ ಸಮಸ್ಯೆಗಳನ್ನು ಅಭಿವೃದ್ಧಿಪಡಿಸುವ ಅಪಾಯವನ್ನು ಕಡಿಮೆ ಮಾಡುತ್ತದೆ. ನಿಮ್ಮ ಕೈಗಳನ್ನು ಆಗಾಗ್ಗೆ ತೊಳೆಯುವ ಮೂಲಕ ಮತ್ತು ಕಣ್ಣುಗಳನ್ನು ಸ್ಪರ್ಶಿಸುವುದನ್ನು ತಪ್ಪಿಸುವ ಮೂಲಕ ಅಪಾಯಕಾರಿ ಬ್ಯಾಕ್ಟೀರಿಯಾದ ಹರಡುವಿಕೆಯನ್ನು ನೀವು ನಿಲ್ಲಿಸಬಹುದು. ಅಲ್ಲದೆ, ಕಾಂಟ್ಯಾಕ್ಟ್ ಲೆನ್ಸ್‌ಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಮತ್ತು ಅವುಗಳನ್ನು ಕ್ಲೀನ್ ಕೇಸ್‌ನಲ್ಲಿ ಸಂಗ್ರಹಿಸುವುದು ಕಿರಿಕಿರಿ ಮತ್ತು ಸೋಂಕುಗಳನ್ನು ತಪ್ಪಿಸಲು ಸಹಾಯ ಮಾಡುತ್ತದೆ.

ಸಾಕಷ್ಟು ನಿದ್ರೆ ಮಾಡಿ

ಕಣ್ಣಿನ ಆರೋಗ್ಯಕ್ಕೆ ಸಾಕಷ್ಟು ನಿದ್ರೆ ಮುಖ್ಯವಾಗಿದೆ. ಏಕೆಂದರೆ ಇದು ಕಣ್ಣುಗಳಿಗೆ ವಿಶ್ರಾಂತಿ ಮತ್ತು ದೇಹದ ಪುನರ್ಯೌವನಗೊಳಿಸುವಿಕೆಗೆ ಇದು ಅನುವು ಮಾಡಿಕೊಡುತ್ತದೆ. ನಿದ್ರಾಹೀನತೆಯು ಕಣ್ಣಿನ ಆಯಾಸ, ದಣಿವು ಮತ್ತು ಒಣ ಕಣ್ಣುಗಳಿಗೆ




ಕಾರಣವಾಗಬಹುದು. ಅತ್ಯುತ್ತಮ ಕಣ್ಣಿನ ಆರೋಗ್ಯಕ್ಕಾಗಿ ನೀವು ಪ್ರತಿ ರಾತ್ರಿ 7-8 ಗಂಟೆಗಳ ನಿದ್ದೆ ಮಾಡಬೇಕಾಗುತ್ತದೆ.

ಕಣ್ಣುಗಳ ವ್ಯಾಯಾಮ

ಕ ಣ್ಣಿ ನ ವ್ಯಾ ಯಾ ಮ ಗ ಳು ಕಣ್ಣಿನ ಸ್ನಾಯುಗಳನ್ನು ಬಲಪಡಿಸುತ್ತದೆ. ಕಣ್ಣಿನ ಆಯಾಸವನ್ನು ನಿರ್ಬಂದಿಸಿ ಕಣ್ಣಿಗೆ ರಕ್ತ ಸಂಚಾರ ಸರಾಗಗೊಳಿಸುತ್ತದೆ. ದೀರ್ಘಾವಧಿಯಲ್ಲಿ ದೃಷ್ಟಿ ಸುಧಾರಿಸುತ್ತದೆ. ದೂರದ ವಸ್ತುಗಳ ಮೇಲೆ ಕೇಂದ್ರೀಕರಿಸುವುದು ಅಥವಾ ಕಣ್ಣಿನ ಯೋಗ ಮಾಡುವುದು ಕಣ್ಣಿನ ವ್ಯಾಯಾಮಗಳ ಉದಾಹರಣೆಗಳಾಗಿವೆ, ಅದು ಕಣ್ಣಿನ ಸಮನ್ವಯವನ್ನು ಸುಧಾರಿಸಲು, ಆಯಾಸವನ್ನು ಕಡಿಮೆ ಮಾಡಲು ಮತ್ತು ವಿಶ್ರಾಂತಿಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ.

********

# ಮಕ್ಕಳ ಬೆಳವಣಿಗೆಗೆ ಆಹಾರ ಕ್ರಮ ಅತಿಮುಖ್ಯ ಜೀವನಶೈಲಿ ಹೇಗಿರಬೇಕು? ಇಲ್ಲಿದೆ ಮಾಹಿತಿ

ಮಕ್ಕಳ ಬೆಳವಣಿಗೆಯಲ್ಲಿ 13-18 ವರ್ಷ ಅತ್ಯಂತ ಮುಖ್ಯವಾದ ಘಟ್ಟವಾಗಿದೆ. ಇದು ಹದಿಹರೆಯದ ವಯಸ್ಸಾಗಿದ್ದು, ಈ ಘಟ್ಟದಲ್ಲಿ ದೈಹಿಕ ಬದಲಾವಣೆ, ಹಾರ್ಮೋನುಗಳ ಏರಿಳಿತಗಳು ಕಂಡು ಬರುತ್ತವೆ.

ಈ ಘಟ್ಟದಲ್ಲಿ ಮಕ್ಕಳ ದೇಹ ಆರೋಗ್ಯವಾಗಿರುವುದು ಬಹಳ ಮುಖ್ಯ. ಏಕೆಂದರೆ ಮಕ್ಕಳು ಆರೋಗ್ಯವಾಗಿದ್ದರೆ ಮಾತ್ರ ದೇಹದ ಬೆಳವಣಿಗೆ ಕೂಡ ಉತ್ತಮವಾಗಿರುತ್ತದೆ.

ಅರೋಗ್ಯಕರ ದೇಹಕ್ಕಾಗಿ ಆರೋಗ್ಯಕರ ಆಹಾರ ಸೇವನೆ, ಉತ್ತಮ ರೀತಿಯ ಜೀವನಶೈಲಿ ಪಾಲಿಸುವುದು ಅತ್ಯಗತ್ಯವಾಗಿದೆ.

ಸಮತೋಲನ ಆಹಾರ, ವ್ಯಾಯಾಮ ದೇಹದ ಆಂತರಿಕ ಅಗತ್ಯವನ್ನು ಪೂರೈಸುತ್ತದೆ.

ದೇಹದ ಹೊರ ಭಾಗಗಳಿಗೆ ಪ್ರಯೋಜನ ನೀಡುತ್ತದೆ.

ಆದರೆ, ಇತ್ತೀಚಿನ ದಿನಗಳಲ್ಲಿ ಮಕ್ಕಳ ಆಹಾರ ಕ್ರಮ ಹಾಗೂ ಜೀವನ ಶೈಲಿ ತದ್ವಿರುದ್ಧವಾಗಿ ಹೋಗಿದೆ.

ಆಹಾರ ಕ್ರಮ ಹಾಗೂ ದೈಹಿಕ ಚಟುವಟಿಕೆಗಳು ಬದಲಾಗುತ್ತಿರುವ ಹಿನ್ನೆಲೆಯಲ್ಲಿ ಮಕ್ಕಳಲ್ಲಿ ಸ್ಥೂಲಕಾಯ ಸಮಸ್ಯೆ ಕಂಡು ಬರುತ್ತಿದೆ.

ಅಲ್ಲದೆ, ಹದಿಹರೆಯದ ವಯಸ್ಸಿನಲ್ಲೇ ಮಧುಮೇಹ, ಅಧಿಕ ರಕ್ತದೊತ್ತಡ ಸಮಸ್ಯೆಗಳನ್ನೂ ಎದುರಿಸುತ್ತಿದ್ದಾರೆ.

ಹೀಗಾಗಿ ಮಕ್ಕಳು ಚಿಕ್ಕವರಿದ್ದಾಗಲೇ ಆರೋಗ್ಯಕರ ಜೀವನಶೈಲಿ ಅನುಸರಿಸುವಂತೆ ಮಾಡುವುದು ಅತ್ಯಗತ್ಯವಾಗಿರುತ್ತದೆ.

ಆರೋಗ್ಯಕರ ಜೀವನಶೈಲಿ ನಡೆಸುವುದು ಹೇಗೆ?

ಪೌಷ್ಟಿಕಾಂಶಯುಕ್ತ ಆಹಾರ ನೀಡಬೇಕು...

ಹಣ್ಣು ಮತ್ತು ತರಕಾರಿಗಳು: ತರಕಾರಿ ಎಂದರೆ ಮಕ್ಕಳು ಸ್ವಲ್ಪ ದೂರ ಹೋಗುವುಂಟು. ಆದರೆ ಹಣ್ಣು ಮತ್ತು ತರಕಾರಿಗಳು ಮಕ್ಕಳ ಬೆಳವಣಿಗೆಗೆ ಪೂರಕ.

ಹಣ್ಣು ಮತ್ತು ತರಕಾರಿಗಳಲ್ಲಿ ಮಕ್ಕಳಿಗೆ ಶಕ್ತಿ, ವಿಟಮಿನ್, ಆಂಟಿಆಕ್ಸಿಡೆಂಟ್, ನಾರಿನಾಂಶ ಮತ್ತು ನೀರಿನಾಂಶವು ಲಭ್ಯವಾಗುವುದು.

ವಯಸ್ಸಾದ ವೇಳೆ ಕಾಡುವಂತಹ ಹೃದಯದ ಕಾಯಿಲೆ,

ಪಾರ್ಶ್ವವಾಯು ಮತ್ತು ಕೆಲವು ರೀತಿಯ ಕ್ಯಾನ್ಸರ್ ನ್ನು ಇದು ತಡೆಯುವುದು.

ಮಕ್ಕಳಿಗೆ ನೀವು ವಿವಿಧ ರೀತಿಯ ಹಣ್ಣು ಹಾಗೂ ತರಕಾರಿಗಳನ್ನು ಸೇವಿಸಲು ಪ್ರೋತ್ಸಾಹಿಸಿ.

ನೀವು ತರಕಾರಿಗಳಿಂದ ವಿವಿಧ ಖಾದ್ಯಗಳನ್ನು ಮಾಡಿಕೊಳ್ಳಬಹುದು. ಬಣ್ಣ ಬಣ್ಣದ ತರಕಾರಿ ಹಾಗೂ ಹಣ್ಣುಗಳನ್ನು ಬಳಸಿ ಸಲಾಡ್ ತಯಾರಿಸಬಹುದು,

ಇದು ತುಂಬಾ ರುಚಿಕರ.

ತರಕಾರಿ ಹಾಗೂ ಹಣ್ಣುಗಳನ್ನು ಸರಿಯಾಗಿ ತೊಳೆಯಿರಿ.

ಅದರಲ್ಲಿ ಇರುವಂತಹ ಧೂಳು ಮತ್ತು ರಾಸಾಯನಿಕವು ಇದರಿಂದ ದೂರವಾಗುವುದು.

ತರಕಾರಿ ಸಿಪ್ಪೆ ಹಾಗೆ ಬಿಡಿ.



ಯಾಕೆಂದರೆ ಇದರಲ್ಲಿ ಕೂಡ ಕೆಲವು ಪೋಷಕಾಂಶಗಳು ಇವೆ.

ಧಾನ್ಯಗಳ ಆಹಾರ

ಇಡೀ ಧಾನ್ಯಗಳ ಸೇವನೆಯು ಆರೋಗ್ಯಕ್ಕೆ ತುಂಬಾ ಒಳ್ಳೆಯದು. ಹಾಗೆ ಧಾನ್ಯಗಳಿಂದ ಮಾಡಿರುವಂತಹ ಬ್ರೆಡ್, ಪಾಸ್ತಾ, ಸೀರಲ್, ಅಕ್ಕಿ, ಜೋಳ, ಕ್ವಿನೋವಾ,

ಓಟ್ಸ್ ಮತ್ತು ಬಾರ್ಲಿ ಒಳ್ಳೆಯದು.

ಈ ಆಹಾರಗಳು ಮಕ್ಕಳ ಬೆಳವಣಿಗೆಯಲ್ಲಿ ನೆರವಾಗುವುದು ಮತ್ತು ಶಕ್ತಿ ನೀಡುವುದು.

ಧಾನ್ಯಗಳಿಂದ ತಯಾರಿಸಿದ ಆಹಾರದಲ್ಲಿ ಗ್ಲೈಸೆಮಿಕ್ ಇಂಡೆಕ್ಸ್ ತುಂಬಾ ಕಡಿಮೆ ಇದೆ.

ಅದೇ ಇಡೀ ಧಾನ್ಯಗಳಿಂದ ಮಾಡಿರುವಂತಹ ಆಹಾರಗಳಾಗಿರುವಂತ ಪಾಸ್ತಾ ಮತ್ತು ಬ್ರೆಡ್ ಮಕ್ಕಳಿಗೆ ದೀರ್ಘಕಾಲ ತನಕ ಶಕ್ತಿ ನೀಡುವುದು ಮತ್ತು ದೀರ್ಘಾವಧಿಗೆ ಹೊಟ್ಟೆ ತುಂಬಿರುವಂತೆ ಮಾಡುವುದು.

ಹಾಲಿನ ಉತ್ಪನ್ನಗಳು

ಹಾಲಿನ ಉತ್ಪನ್ನಗಳು ಮಕ್ಕಳ ಬೆಳವಣಿಗೆಗೆ ತುಂಬಾ ಒಳ್ಳೆಯದು. ಇದರಲ್ಲಿ ಮುಖ್ಯವಾಗಿ ಹಾಲು, ಚೀಸ್ ಮತ್ತು ಮೊಸರು.

ಈ ಹಾಲಿನ ಉತ್ಪನ್ನಗಳಲ್ಲಿ ಉನ್ನತ ಮಟ್ಟದ ಪ್ರೋಟೀನ್ ಮತ್ತು ಕ್ಯಾಲ್ಸಿಯಂ ಇದೆ.

ಇದು ಮೂಳೆಗಳು ಹಾಗೂ ಹಲ್ಲುಗಳು ಬಲಶಾಲಿಯಾಗುವಂತೆ ಮಾಡುವುದು.

ಪ್ರತಿನಿತ್ಯವು ನೀವು ಮಕ್ಕಳಿಗೆ ಒಂದು ರೀತಿಯ ಹಾಲಿನ ಉತ್ಪನ್ನವನ್ನು ನೀಡಿ. ಹಾಲು, ಮೊಸರು ಮತ್ತು ಚೀಸ್ ನೀಡಿ. ಎರಡು ವರ್ಷ ಮೇಲ್ಪಟ್ಟ ಮಕ್ಕಳಿಗೆ ಕಡಿಮೆ ಕೊಬ್ಬಿನಾಂಶವಿರುವ ಹಾಲಿನ ಉತ್ಪನ್ನಗಳನ್ನು ನೀಡಿ.

ಪ್ರೋಟೀನ್ ಮಾಂಸ, ಮೀನು, ಮೊಟ್ಟೆ, ಬೀನ್ಸ್, ಕಡಲೆ, ತೌಫು ಮತ್ತು ಬೀಜಗಳನ್ನು ಸೇರಿದಂತೆ ಪ್ರೋಟೀನ್ ಅಧಿಕವಾಗಿ ಇರುವಂತಹ ಆಹಾರವನ್ನು ಮಕ್ಕಳಿಗೆ ನೀಡಿ. ಇದು ಮಕ್ಕಳ ಬೆಳವಣಿಗೆ ಮತ್ತು ಸ್ನಾಯುಗಳ ಬೆಳವಣಿಗೆಗೆ ತುಂಬಾ ನೆರವಾಗಲಿದೆ.

ಈ ಆಹಾದಲ್ಲಿ ಕೂಡ ಉತ್ತಮ ಮಟ್ಟದ ವಿಟಮಿನ್ ಗಳು ಹಾಗೂ ಖನಿಜಾಂಶಗಳಾಗಿರುವಂತಹ ಸತು, ಕಬ್ಬಿನಾಂಶ, ವಿಟಮಿನ್ ಬಿ12 ಹಾಗೂ ಒಮೆಗಾ 3 ಒಬ್ಬಿನಾಮ್ಲವಿದೆ. ಒಮೆಗಾ-3 ಕೊಬ್ಬಿನಾಮ್ಲ ಮತ್ತು ಕಬ್ಬಿನಾಂಶವು ಕೆಂಪು ಮಾಂಸ ಮತ್ತು ಎಣ್ಣೆಯುಕ್ತ ಮೀನಿನಲ್ಲಿದೆ.

ನೀರು

12 ತಿಂಗಳು ಮೇಲ್ಪಟ್ಟ ಮಕ್ಕಳಿಗೆ ನೀರು ಅತ್ಯುತ್ತಮ ಆರೋಗ್ಯಕಾರಿ ಪಾನೀಯ. ಇದು ತುಂಬಾ ಅಗ್ಗವಾಗಿ ಸಿಗುವುದು ಮತ್ತು ಇದು ಆರೋಗ್ಯಕ್ಕೂ ಒಳ್ಳೆಯದು.

ವ್ಯಾಯಾಮ

ವ್ಯಾಯಾಮ ಮತ್ತು ದೈಹಿಕ ಚಟುವಟಿಕೆಗಳು ವಯಸ್ಕರಿಗೆ ಮತ್ತು ಹಿರಿಯರಷ್ಟೇ ಮಾಡುವುದಲ್ಲ. ಮಕ್ಕಳಿಗೂ ದೈಹಿಕ ಚಟುವಟಿಕೆಗಳು ಅವಶ್ಯಕವಾಗಿರುತ್ತದೆ.

ಬೆಳೆಯುವ ವಯಸ್ಸಿನಲ್ಲಿ ಮಾಂಸಖಂಡಗಳು, ಮೂಳೆಗಳು ದೃಢವಾಗುವುದಕ್ಕೆ ವ್ಯಾಯಾಮಗಳು ನೆರವಾಗುತ್ತವೆ.

ಆ ರು ವರ್ಷಕ್ಕಿಂತ ಮೇಲ್ಪಟ್ಟ ಮಕ್ಕಳು ನಿತ್ಯ ಒಂದು ಗಂಟೆಯಾದರೂ ದೈಹಿಕ ಚಟುವಟಿಕೆಗಳಲ್ಲಿ ಭಾಗಿಯಾಗಿದರೆ ಚಿಕ್ಕಂದಿನಿಂದಲೇ ಫಿಟ್‌ನೆಸ್ ಕಾಯ್ದುಕೊಳ್ಳಬಹುದು.

ವ್ಯಾಯಾಮಗಳೆಂದರೆ ಜಿಮ್‌ಗಳಲ್ಲಿ ಬೆವರು ಹರಿಸುವ ಅಗತ್ಯವಿಲ್ಲ. ಮಕ್ಕಳಿಗೆ ಆಟಗಳೆಂದರೆ ಹೆಚ್ಚು ಇಷ್ಟ. ದೈಹಿಕ ಶ್ರಮ ಬೇಡುವ ಆಟಗಳಲ್ಲಿ ಮಗ್ನರಾದರೂ ಸಾಕು.

ಚಿಕ್ಕಂದಿನಿಂದಲೇ ಮಕ್ಕಳಲ್ಲಿ ಇಂತಹ ಅಭ್ಯಾಸಗಳನ್ನು ರೂಢಿಸುವುದರಿಂದ ದೊಡ್ಡವರಾದ ಮೇಲೂ ನಿತ್ಯ ಅಭ್ಯಾಸ ಮಾಡುವುದನ್ನು ಕಲಿಯುತ್ತಾರೆ. ಇದರಿಂದ ಜೀವನವಿಡೀ ಫಿಟ್‌ನೆಸ್ ಕಾಯ್ದುಕೊಳ್ಳಲು ನೆರವಾಗುತ್ತದೆ.

# ಭೀಮವಾದ ಡಿ ಎಸ್ ಎಸ್ ಪದಾಧಿಕಾರಿಗಳ ಆಯ್ಕೆ



ಬೆಳಗಾವಿ.ಜ. 01. ಭೀಮವಾದ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕರಾದ ಬಿ ಎನ್ ವೆಂಕಟೇಶ್, ಕೋರ್ ಕಮಿಟಿ ಅಧ್ಯಕ್ಷರಾದ ಸಿದ್ಧಾರ್ಥ ಅಣ್ಣಾ ಸಿಂಗೆಯವರು , ರಾಜ್ಯ ಸಂಘಟನಾ ಸಂಚಾಲಕರಾದ ಸಂಜೀವ ಕಾಂಬಳೆ ಹಾಗೂ ರಾಜ್ಯ ಸಮಿತಿ ಸದಸ್ಯರಾದ ಆನಂದ್ ಅರಬಳ್ಳಿಯವರ ನೇತೃತ್ವದಲ್ಲಿ ಬೆಳಗಾವಿ ಜಿಲ್ಲಾ ಸಮಿತಿಯನ್ನು ರಚನೆ ಮಾಡಲಾಯಿತು. ಬೆಳಗಾವಿ ಜಿಲ್ಲಾ ಸಂಚಾಲಕರಾಗಿ ದುರುಗಪ್ಪ ಮೇಲಿನಮನಿ, ಜಿಲ್ಲಾ ಸಂಘಟನಾ ಸಂಚಾಲಕರಾಗಿ ಬಸವರಾಜ ತಳವಾರ, ದುರಗಾರಾಮ ಕಾಂಬಳೆ ಶಿವರಾಮ ತಳವಾರ,ಲಕ್ಷ್ಮಣ ಗುಂಡಪ್ಪನವರ ವಿಜಯ ಧರ್ಮಟ್ಟಿ ಯವರನ್ನು ಆಯ್ಕೆ ಮಾಡಲಾಯಿತು.

ಮಹಿಳಾ ಒಕ್ಕೂಟದ ಬೆಳಗಾವಿ ಜಿಲ್ಲಾ ಸಂಚಾಲಕಿಯಾಗಿ ಶ್ರೀಮತಿ ಮಂಜುಳಾ ಕಾಂಬಳೆಜಿಲ್ಲಾ ಸಂಘಟನಾ ಸಂಚಾಲಕಿಯರಾಗಿ ಶ್ರೀಮತಿ ರೇಣುಕಾ ಕೆಂಪಣ್ಣ ಹರಿಜನಶ್ರೀಮತಿ ರೇಣುಕಾ ಭ್ರಮಾ ಕೋಲಕಾರ ಇವರನ್ನು ಆಯ್ಕೆ ಮಾಡಲಾಯಿತು.

## ವಿದ್ಯಾರ್ಥಿಗಳಿಗೆ ಗ್ರಾಮೀಣ ಕಲೆ, ಸಂಪ್ರದಾಯ ಹಾಗೂ ಸಂಸ್ಕೃತಿಗಳ ತಿಳಿವಳಿಕೆ ಅಗತ್ಯ :- ಮಾದರ




ಮೂಡಲಗಿ : ನಮ್ಮ ದೇಶದ ಗ್ರಾಮೀಣ ಜನರ ಬದುಕು ವಿಶಿಷ್ಟ ವೈವಿಧ್ಯಮಯವಾದ ಆಚರಣೆ ಸಂಪ್ರದಾಯ ಹಾಗೂ ಸಾಮಾಜಿಕ ಕಳಕಳಿಯ ಸಿದ್ಧಾಂತಗಳನ್ನು ಒಳಗೊಂಡಿದ್ದು ಅದರ ಮೌಲ್ಯಗಳನ್ನು ಇಂದಿನ ವಿದ್ಯಾರ್ಥಿಗಳಲ್ಲಿ ತಿಳಿಸಿಕೊಡುವುದು ಅವಶ್ಯಕವಿದೆ ಎಂದು ಕೆ.ಎಚ್. ಸೋನವಾಲ್ಕರ ಸರಕಾರಿ ಪ್ರೌಢ ಶಾಲೆಯ ಸಹ ಶಿಕ್ಷಕ ಸದಾಶಿವ ಮಾದರ ಹೇಳಿದರು.

ಪಟ್ಟಣದ ಆರ್.ಡಿ.ಎಸ್. ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ಕಲಾ ವಾಣಿಜ್ಯ ವಿಜ್ಞಾನ ಸಮಾಜಕಾರ್ಯ ಪದವಿ ಮಹಾವಿದ್ಯಾಲಯಗಳ ಸಹಯೋಗದಲ್ಲಿ ಹಮ್ಮಿ ಕೊಂಡಿರುವ ಹಳ್ಳಿಗರ ಸಂಸ್ಕೃತಿ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು,

ವಿದ್ಯಾರ್ಥಿಗಳಿಗೆ ಗ್ರಾಮೀಣ ಕಲೆ, ಸಂಪ್ರದಾಯ ಹಾಗೂ ಸಂಸ್ಕೃತಿಗಳ ತಿಳವಳಿಕೆ ಅಗತ್ಯವಾಗಿದೆ ಇಂದು ಗ್ರಾಮೀಣ ಸಂಪ್ರದಾಯಗಳು ನಸಿಶಿ ಹೋಗುತ್ತಿದ್ದು ತಾಯಿಯ ಮಮತೆ ತಂದೆಯ ವಾತ್ಸಲ್ಯ ಹಾಗೂ ಬಂದುಗಳು ಆತ್ಮೀಯತೆ ಮಾಯವಾಗುತ್ತಿದ್ದು ಕುಟುಂಬ ಪದ್ದತಿ ಮರೀಚಿಕೆಯಾಗುತ್ತಿದ್ದು ವಿಷಾದನೀಯ ಎಂದರು

ಪದವಿ ಕಾಲೇಜಿನ ಪ್ರಾಚಾರ್ಯ ಸತೀಶ ಗೋಟೂರೆ ಮಾತನಾಡಿ ನಮ್ಮ ಉಡ-ುಗೆ ತೊಡುಗೆಗಳು ನಮ್ಮ ಸಂಪ್ರದಾಯಗಳನ್ನು ಪ್ರತಿಬಿಂಬಿಸುತ್ತೇವೆ ಅವುಗಳನ್ನು ನಾವುಗಳು ಉಳಿಸಿಕೊಂಡು ಹೋಗುವುದು ಅವಶ್ಯವಿದೆ ಎಂದರು.

ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶಿವಾನಂದ ಸತ್ತಿಗೇರಿ ಮಾತನಾಡಿ ಹಳ್ಳಿಯ ಜೀವನ ನಮ್ಮ ಸಂಪ್ರದಾಯಿಗಳ ಪ್ರತಿಬಿಂಬವಾಗಿದ್ದು ಅವುಗಳನ್ನು ವಿದ್ಯಾರ್ಥಿಗಳಲ್ಲಿ ಬೆಳಸಿ ಉಳಿಸಿಕೊಂಡು ಹೋಗುವುದು ಇಂದಿನ ಅವಶ್ಯಕತೆಯಾಗಿದೆ ಎಂದರು. ನ್ಯಾಯವಾದಿ ಲಕ್ಷ್ಮಣ ಅಡಿಹುಡಿ ಮಾತನಾಡಿದರು.

ವಿದ್ಯಾರ್ಥಿಗಳು ಗ್ರಾಮೀಣ ಹಾಡುಗಳು, ಗ್ರಾಮೀಣ ನೃತ್ಯಗಳು ಹಾಗೂ ಗ್ರಾಮೀಣ ಕ್ರೀಡೆಗಳಲ್ಲಿ ಭಾಗವಹಿಸಿ ಗ್ರಾಮೀಣ ಸೊಬಗಿನ ಆನಂದವನ್ನು ಗ್ರಾಮೀಣ ಊಟದೊಂದಿಗೆ ಸವಿದರು.

ಕಾರ್ಯಕ್ರಮದಲ್ಲಿ ಸಂಗಮೇಶ ಕುಂಬಾರ, ಸಂಜೀವ ವಾಲಿ, ಎಸ್.ಬಿ.ಲಟ್ಟಿ, ಎಂ.ಬಿ. ಸಿದ್ನಾಳ, ಎಂ. ಆಯ್ ಜಾಡರ, ರವಿ ಕಟಗೇರಿ, ಸಂಜೀವ ಮಂಟೂರ, ಮಲ್ಲಪ್ಪಾ ಪಾಟೀಲ, ಬಾಳು ಪುರವಂತ, ಮಾಯವ್ವ ಪೂಜೇರಿ, ಅಶ್ವಿನಿ ಬಡಿಗೇರ, ಲಕ್ಷ್ಮೀ ಮುರಗೋಡ ಇನ್ನಿತರ ಸಿಬ್ಬಂದಿಗಳು ಹಾಜರಿದ್ದರು.

ಉಪನ್ಯಾಸಕ ಜಿ.ಎಸ್.ಮನ್ನಾಪೂರ ನಿರೂಪಿಸಿದರು. ಉಪನ್ಯಾಸಕ ಸಿದ್ದಾರೂಡ ಬೆಳವಿ ಸ್ವಾಗತಿಸಿದರು. ಉಪನ್ಯಾಸಕಿ ವಾಣಿಶ್ರೀ ಕಾಪಸೆ ವಂದಿಸಿದರು.

# ಕಡ್ಲಿಕೊಪ್ಪದಲ್ಲಿ ವೇಗಧೂತ ಬಸ್‌ಗಳ ನಿಲುಗಡೆ-ಗ್ರಾಮಸ್ಥರಿಂದ ಪೂಜೆ

ರಾಮದುರ್ಗ:ತಾಲೂಕಿನ ಕಡ್ಲಿಕೊಪ್ಪ ಗ್ರಾಮದ ಮಾರ್ಗವಾಗಿ ಜಮಖಂಡಿಯಿಂದ ಹುಬ್ಬಳ್ಳಿಗೆ ಸಂಚರಿಸುವ ವೇಗದೂತ ಬಸ್ಸುಗಳು ಗ್ರಾಮದಲ್ಲಿ ನಿಲಗಡೆಗೊಳಿಸಲು ಕ್ರಮ ವಹಿಸುವಂತೆ ಗ್ರಾಮದ ಸಾರ್ವಜನಿಕರು ವಿಧಾಸಭೆ ಮುಖ್ಯ ಸಚೇತಕ ಅಶೋಕ ಪಟ್ಟಣ ಅವರಿಗೆ ಮನವಿ ಮಾಡಿಕೊಂಡಿದ್ದರು.

ಗ್ರಾಮಸ್ಥರ ಮನವಿ ಮೇರೆಗೆ ಅಶೋಕ ಪಟ್ಟಣ ಅವರು ಸಂಬಂಧಿಸಿದ ಇಲಾಖೆಯ ಮೇಲಾಧಿಕಾರಿಗಳಿಗೆ ಪತ್ರ ಬರೆದು ಜಮಖಂಡಿಯಿಂದ ರಾಮದುರ್ಗ ಮಾರ್ಗವಾಗಿ ಹುಬ್ಬಳ್ಳಿಗೆ ಸಂಚರಿಸುವ ಎಲ್ಲ ಬಸ್ಸುಗಳನ್ನು



ಕಡ್ಲಿಕೊಪ್ಪದಲ್ಲಿ ನಿಲುಗಡೆಗೊಳಿಸುವಂತೆ ಸೂಚಿಸಿದ್ದರು. ಶಾಸಕರ ಸೂಚನೆಯಂತೆ ಸಾರಿಗೆ ಇಲಾಖೆಯ ಮುಖ್ಯ ಸಂಚಾರ ವ್ಯವಸ್ಥಾಪಕರು ಕಡ್ಲಿಕೊಪ್ಪ ಗ್ರಾಮದಲ್ಲಿ ಬಸ್ ನಿಲುಗಡೆ ಆದೇಶ ಹೊರಡಿಸಿದ್ದರು.

ಹೊಸ ವರ್ಷದ ದಿನದಂದು ಗ್ರಾಮದ ಸಾರ್ವಜನಿಕರು ನಿಲುಗಡೆಗೊಂಡ ಬಸ್ಸಿಗೆ ಪೂಜೆ ಸಲ್ಲಿಸುವ ಮೂಲಕ ಸಂಭ್ರಮಿಸಿದರು. ಗ್ರಾಮಸ್ಥರು ಶಾಸಕ ಅಶೋಕ ಪಟ್ಟಣ ಅವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಮಾದೇವಪ್ಪ ಶರಮಗೊಂಡ, ಕುಬೇರಗೌಡ ಪಾಟೀಲ, ಹನಮಂತ ಧರಿಗೊಂಡ, ಈರಗೌಡ ಪಾಟೀಲ, ಮಾರುತಿ ದ್ಯಾಮನ್ನವರ, ಚನ್ನಪ್ಪ ಕಮತರ, ರಾಮಲಿಂಗಯ್ಯ ವಿಭೂತಿ ಸೇ-ರಿದಂತೆ ಗ್ರಾಮದ ಮುಖಂಡರು ಉಪಸ್ಥಿತ-ರಿದ್ದರು.

# ಕೆರೆ ಹಸ್ತಾಂತರ, ಬಾಗಿನ ಅರ್ಪಣೆ, ನಾಮಫಲಕ ಅನಾವರಣ

ಬಸವನಬಾಗೇವಾಡಿ, ಜ. 1 :ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಕೆರೆ ಹೂಳೆತ್ತುವದು, ಸ್ವ-ಸಹಾಯ ಸಂಘದ ರಚನೆ, ಗ್ರಾಮ ಕಲ್ಯಾಣ ಯೋಜನೆ ಸೇ-ರಿದಂತೆ ವಿವಿಧ ಜನಪರ ಯೋಜನೆಗಳನ್ನು ಜಾರಿ ಗೊಳಿಸುವ ಮೂಲಕ ಜನ-ರಿಗೆ ಉತ್ತಮ ಸೇವೆ ಒದಗಿಸಲಾಗುತ್ತಿದೆ ಎಂದು ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಸಂತೋಷಕುಮಾರ ರೈ ಹೇಳಿದರು. ತಾಲೂಕಿನ ಡೋಣೂರ ಗ್ರಾಮದಲ್ಲಿ ಬುಧವಾರ ಕೆರೆ ಹಸ್ತಾಂತರ, ಬಾಗಿನ ಅರ್ಪಣೆ ಹಾಗೂ ನಾಮಫಲಕ ಅನಾವರಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮದ ಕೆರೆಯ ಹೂಳೆತ್ತುವ ಕಾಮಗಾ-ರಿಯನ್ನು ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಬಿಸಿ ಟ್ರಸ್ಟಿಯ ಕೆರೆ ಸಮಿತಿ, ಗ್ರಾಮ ಪಂಚಾಯತ್ ಸಹಯೋಗದಲ್ಲಿ ಕೈಗೊಳ್ಳಲಾಗಿತ್ತು. ನಮ್ಮ ಊರು ನಮ್ಮ ಕೆರೆ ಯೋಜನೆಯಲ್ಲಿ ಇದು 763 ನೇ ಕೆರೆಯಾಗಿದೆ. ಈ ಕೆರೆ ಗ್ರಾಮಕ್ಕೆ ಶಾಶ್ವತವಾಗಿ ನೀರು ತುಂಬಿ ಗ್ರಾಮಸ್ಥರಿಗೆ, ಕೃಷಿ ಭೂಮಿಗೆ,ಜಾನುವಾರುಗಳಿಗೆ, ಪಕ್ಷಿಗಳಿಗೆ ಅನುಕೂಲವಾಗಲಿದೆ ಎಂದರು.

ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಗ್ರಾಮಾಭಿವೃದ್ಧಿ ಯೋಜನೆಯಿಂದ ಸಮಾಜಮುಖಿ ಕಾರ್ಯಗಳಾದ ಕೆರೆ ಹೂಳೆತ್ತುವದು,



ದೇವಸ್ಥಾನದ ಜೀರ್ಣೋದ್ದಾರ, ಹಿಂದು ರುದ್ರಭೂಮಿ ಅಭಿವೃದ್ಧಿ, ಶಾಲಾ ಮಕ್ಕಳಿಗೆ ಶೌಚಾಲಯ ನಿರ್ಮಾಣ, ಅತಿಥಿ ಶಿಕ್ಷಕರ ನೇಮಕ, ಅಂಗವಿಕಲರಿಗೆ ಬೇಕಾದ ಸಲಕರಣೆಗಳ ವಿತರಣೆ, ನಿರ್ಗತಿಕರಿಗೆ ಮಾಶಾಸನ ವಿತರಣೆ ಹಾಗೂ ವಾತ್ಸಲ್ಯ ಮನೆ ರಚನೆ ಮಾಡಿಕೊಡುವದು ಸೇ-ರಿದಂತೆ ಹತ್ತಾರು ಕಾರ್ಯಕ್ರಮಗಳನ್ನು ಹಾಕಿಕೊಂಡಿದ್ದಾರೆ. ಡೋಣೂರ ಗ್ರಾಮದಲ್ಲಿ ಕೆರೆ ಹೂಳೆತ್ತುವ ಕಾರ್ಯಕ್ರಮ ಯಶಸ್ವಿಯಾಗಿದೆ. ಈ ಗ್ರಾಮವು ಮಾದರಿ ಗ್ರಾಮವಾಗಿ ಬೆಳೆಯಲೆಂದು ಶುಭ ಹಾರೈಸಿದರು.

ಜಿಲ್ಲಾ ಜನಜಾಗೃತಿ ವೇದಿಕೆಯ ಅಧ್ಯಕ್ಷ ಸೋಮನಗೌಡ ಪಾಟೀಲ ಮಾತನಾಡಿ, ವ್ಯಸನಮುಕ್ತ ಸಮಾಜ ನಿರ್ಮಾಣ ಮಾಡಲು ವ್ಯಸನ ಮುಕ್ತರಾಗಲು ಧರ್ಮಸ್ಥಳದ ಧರ್ಮಾಧಿಕಾರಿಗಳು ಮದ್ಯವರ್ಜನ ಶಿಬಿರ ಕಾರ್ಯಕ್ರಮದ ಮೂಲಕ ಸಮಾಜವನ್ನು ಸನ್ಮಾರ್ಗದತ್ತ ಕೊಂಡೊಯ್ಯುತ್ತಿದ್ದಾರೆ. ಇದರಿಂದಾಗಿ ಸಾವಿರಾರು ಕುಟುಂಬಗಳು ಉತ್ತಮವಾದ ಜೀವನವನ್ನು ಸಾಗಿಸುತ್ತಿವೆ. ಸರ್ಕಾರ ಮಾಡದೇ ಇರುವಂತಹ ಕಾರ್ಯಕ್ರಮಗಳನ್ನು ಧರ್ಮಸ್ಥಳದ ಗ್ರಾಮಾಭಿವೃದ್ಧಿ ಯೋಜನೆಯಡಿ ಕೈಗೊಳ್ಳಲಾಗುತ್ತಿರುವುದು ಶ್ಲಾಘನೀಯ. ಈ ಯೋಜನೆಯಡಿ ಸ್ವ-ಸಹಾಯ ಸಂಘಗಳನ್ನು ಕಟ್ಟಿಕೊಂಡು ಕುಟುಂಬಗಳು ಆರ್ಥಿಕವಾಗಿ ಪ್ರಗತಿಯನ್ನು ಹೊಂದುವಂತಾಗಲೆಂದರು.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ಕಲ್ಲನಗೌಡ ಪಾಟೀಲ, ಯುವರಾಜ ಪಡಗಾನೂರ,ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಾಜೇಶ್ವರಿ ಪಾಟೀಲ, ಗ್ರಾಮ ಪಂಚಾಯತಿಯ ಸದಸ್ಯ ಪರಶುರಾಮ ಜ್ಯೋತಿ, ಧರ್ಮಸ್ಥಳ ಸಂಸ್ಥೆಯ ತಾಲೂಕಿನ ಯೋಜನಾಧಿಕಾರಿ ಪ್ರಸನ್ನ ಆರ್., ಕೆರೆ ಸಮಿತಿ ಅಧ್ಯಕ್ಷ ಮಹಾಂತೇಶ ಕೆರೂಟಗಿ,ಕೆರೆ ಸಮಿತಿಯ ಉಪಾಧ್ಯಕ್ಷ ಬಸವರಾಜ ಮಸಳಿ, ಕೆರೆ ಸಮಿತಿಯ ಎಲ್ಲ ಸದಸ್ಯರಾದ ಬಂದೇನವಾಜ ಸುತಾರ, ಯಲ್ಲಪ್ಪ ಮಾದರ, ನಿಜಲಿಂಗಪ್ಪ ಬಿರಾದಾರ, ಭೀಮರಾಯ ಅಗಸರ, ಅಮೃತ ಹಳ್ಳಿ, ಯಲ್ಲಪ್ಪ ಭಜಂತ್ರಿ, ದುಂಡಪ್ಪ ಬಸರಕೋಡ ಅರ್ಚಕ ಮರಳುಸಿದ್ದಯ್ಯ ಹಿರೇಮಠ, ಕೃಷಿ ಮೇಲ್ವಿಚಾರಕ ರಾಜು ಬೇಟಗೇರಿ, ವಲಯ ಮೇಲ್ವಿಚಾರಕಿ ಪ್ರೇಮ ಎಲಿ, ಸೇವಾ ಪ್ರತಿನಿಧಿಗಳು, , ಸ್ವ-ಸಹಾಯ ತಂಡದ ಸದಸ್ಯರು ಇತರರು ಇದ್ದರು.

# ನಾಗರಾಳದಲ್ಲಿ ವಿವಿಧ ಕಾರ್ಯಕ್ರಮ

ಮುಧೋಳ: ತಾಲೂಕಿನ ನಾಗರಾಳ ಗ್ರಾಮದ ಮಾಧವಾನಂದ ವಿದ್ಯಾವರ್ಧಕ ಟ್ರಸ್ಟ(ರಿ) ಹಾಗು ಅನುದಾನಿತ ಹಿರಿಯ ಪ್ರಾಥಮಿಕ ಶಾಲೆ ಸಹಯೋಗದಲ್ಲಿ ಆರ್‌ಎಸ್‌ಎಸ್. ಸಂಘದ ನೂರರ ಸಂಭ್ರಮ, ಹಿಂದೂ ಸೇವಾ ಪ್ರತಿಷ್ಠಾನದ 40.ನೇ ಹಾಗು ಮಾಧವಾನಂದ ಕನ್ನಡ ಅನುದಾನಿತ ಶಾಲೆಯ 35.ನೇ ವಾರ್ಷಿಕೋತ್ಸವ ಸಮಾರಂಭ ಪ್ರಯುಕ್ತ ಜ.1.ರಿಂದ ಮೂರು ದಿನ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಟ್ರಸ್ಟ ಅಧ್ಯಕ್ಷ, ಮತ್ತು ಶಾಲೆಯ ಮು.ಗು. ತಿಳಿಸಿದ್ದಾರೆ.

ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ : ಗುರುವಾರ ಜ.2.ರಂದು ಸಂಜೆ 5.ಕ್ಕೆ ವಿದ್ಯಾರ್ಥಿ/ನಿಯರಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದ್ದು, ಇದರ ಸಾನಿಧ್ಯ ಜ್ಯೋತಿಲಕ್ಕಪ್ಪ ಮಹಾರಾಜರು, ಗೌ.ಅಧ್ಯಕ್ಷತೆ ಆರ್.ಟಿ. ಪಾಟೀಲ, ಅಧ್ಯಕ್ಷತೆ ಮಲ್ಲಪ್ಪ ಕತ್ತಿ ವಹಿಸುವರು, ಅತಿಥಿರಾಗಿ ಹಣಮಂತ ಮಳಲಿ, ಲಕ್ಷ್ಮಣ ಬಿಳ್ಳೂರ, ಎ.ಜಿ. ಬಿ. ಪಾಟೀಲ, ಎಫ್.ಎನ್. ಪಾಟೀಲ, ಹೊಳಬಸು ದಂಡಿನ, ತಲ್ಲಪ್ಪ ಸೂರ್ಯವಂಶಿ, ವೆಂಕಪ್ಪ ಲದ್ದಿ, ಯಲ್ಲಪ್ಪ ಮಾರಾಪೂರ, ಉಪನ್ಯಾಸಕ ಶಿವಲಿಂಗ ಸಿದ್ನಾಳ, ಗುತ್ತಿಗೆದಾರ ವಿಠ್ಠಲಗೌಡ ಪಾಟೀಲ, ಇತರರ ಉಪಸ್ಥಿತಿಯಲ್ಲಿ ವಿವಿಧ ಕ್ಷೇತ್ರದ ದಾನಿಗಳಿಗೆ ಸನ್ಮಾನ ಜರುಗಲಿದೆ.

ಸಪ್ತಸ್ವರ ಆರ್ಕೆಸ್ಟ್ರಾರಿಂದ ರಸಮ-ಂಜರಿ : ಶುಕ್ರವಾರ ಜ.3.ರಂದು ಸಂಜೆ 6.ಕ್ಕೆ ಎಮ್.ಡಿ. ಆನಂದ ಮಹಾಲಿಂಗಪೂರ ಇವರ ಸಪ್ತಸ್ವರ ಲೈವ ಮೆಲೋಡಿ ಆರ್ಕೆಸ್ಟ್ರಾ ಇವರಿಂದ ಜರುಗುವ ರಸಮ-ಂಜರಿ ಕಾರ್ಯಕ್ರಮದ ಗೌ.ಅಧ್ಯಕ್ಷತೆ ವಿಠ್ಠಲಗೌಡ ನ್ಯಾಮಗೌಡ, ಈರಣ್ಣ ಅರಗಂಜಿ ಅಧ್ಯಕ್ಷತೆಯಲ್ಲಿ ಶ್ರೀಶೈಲಗೌಡ ಪಾಟೀಲ ಉದ್ಘಾಟಿಸುವರು. ಅತಿಥಿರಾಗಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಬೀಳಗಿಯ ಸಿದ್ದಪ್ಪ ಬಿದರಿ, ಗ್ರಾಮದ ಮುಖಂಡರಾದ ಶಿವನಗೌಡ ಪಾಟೀಲ, ಬಾಲಪ್ಪಗೌಡ ಪಾಟೀಲ, ಗೋವಿಂದಗೌಡ ಪಾಟಿಲ, ಈರಪ್ಪ ಅಡಕಿ, ಮೌನೇಶ ಸುತಾರ, ಲಕ್ಕಪ್ಪ ಗಿರೆವ್ವಗೋಳ, ಜಯಾನಂದ ಕೋರಿಶೆಟ್ಟಿ, ಪ್ರವೀಣ ಕತ್ತಿ, ಮಾರುತಿ ಲದ್ದಿ, ಹಣಮಂತ ರಡರಟ್ಟಿ, ಶಿವರಾಜ ನ್ಯಾಮಣ್ಣವರ ಇತರರ ಉಪಸ್ಥಿತಿಯಲ್ಲಿ ವಿವಿಧ ಕ್ಷೇತ್ರದ ಗಣ್ಯ-ರಿಗೆ ಗೌರವ ಸನ್ಮಾನ ಜರುಗಲಿದೆ. ಎಂದು ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ದಲಿತಪರ ಸಂಘಟಕರಿಂದ ಅಮೀತ ಶಾ ಪ್ರತಿಕೃತಿ ಧಹನ, ಟೈರಗೆ ಬೆಂಕಿ ಹಚ್ಚಿ ಆಕ್ರೋಶ

# ತಾಳಿಕೋಟೆ ಸಂಪೂರ್ಣ ಬಂದ್ ಯಶಸ್ವಿ



ತಾಳಿಕೋಟೆ, ಸಂವಿದಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಕುರಿತು ಅವಮಾನ ರೀತಿಯಲ್ಲಿ ಮಾತನಾಡಿರುವ ಕೇಂದ್ರ ಸಚಿವ ಅಮೀತ ಶಾ ಅವರ ಹೇಳಿಕೆಗೆ ವಿರೋದಿಸಿ ಗುಡುಗಿದ ದಲಿತಪರ ಸಂಘಟಕರು ಮಂಗಳವಾರರಂದು ತಾಳಿಕೋಟೆ ಪಟ್ಟಣ ಬಂದ್ ಕರೆ ನೀಡಿ ಪ್ರತಿಭಟನೆ ನಡೆಸಿದರಲ್ಲದೇ ಅಮಿತ ಶಾ ಅವರ ಅಣುಕ ಶವ ಯಾತ್ರೆ ನಡೆಸಿ ಕೆಲವೆಡೆ ಅವರ ಪ್ರತಿಕೃತಿ ದಹಿಸಿ ಕೂಡಲೇ ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿದರು.

ಈ ಕುರಿತು ಮುಂಜಾನೆ 6 ಗಂಟೆಯಿಂದಲೇ ಪ್ರತಿಭಟನಾ ಕಾರರು ಬೆಂಬಲ ಕೋರುವದರೊಂದಿಗೆ ಬಂದ್‌ಗೆ ಯಶಸ್ವಿಯಾದರಲ್ಲದೇ ಸಂಬಂದಿತ ಅಡತ್, ಕಪ್ಪಡ, ಕಿರಾಣಿ ಅಂತಹ ವ್ಯಾಪಾರಸ್ಥರಿಗೆ ಸಹಕಾರ ಕೋರಿದ್ದರಿಂದ ತಮ್ಮ ತಮ್ಮ ಅಂಗಡಿ ಮುಗ್ಗಟ್ಟುಗಳನ್ನು ಬಂದ್ ಮಾಡಿ ವ್ಯಾಪಾರಸ್ಥರು ಸಹಕರಿಸಿದ್ದು ಕಂಡುಬಂದಿತು. ಬಸ್ ನಿಲ್ದಾಣದಲ್ಲಿ ಪ್ರತಿದಿನ ಬರು ಹೋಗುವ ಬಸ್ ಸಂಚಾರಕ್ಕೂ ಸಹ ಸಂಬಂದಿತ ಬಸ್ ಘಟಕ ವ್ಯವಸ್ಥಾಪಕರಿಗೆ ಬಂದ್ ಕುರಿತು ಮನವಿ ನೀಡಿದ್ದರಿಂದ ಬಸ್ ಸಂಚಾರವೂ ಕೂಡಾ ಸ್ಥಗಿತಗೊಂಡಿತು. ಬಸ್ ನಿಲ್ದಾಣದ ಒಳಗೆ ಮುಂಜಾನೆ 6 ಗಂಟೆಯಿಂದ ಸಾಯಂಕಾಲದ ವರೆಗೆ ಯಾವ ಬಸ್ಸು ಪ್ರವೇಶಿಸಲಿಲ್ಲಾ ಈ ಕುರಿತು ತಾಳಿಕೋಟೆ ಪಟ್ಟಣ ಹೊರತು ಪಡಿಸಿ ಸುಮಾರು4, 5 ಕೀಲೋ ಮೀಟರ್ ಅಂತರದವರೆಗೆ ಬಸ್ ಸಂಚಾರ ನಡೆದಿದ್ದು ಕಂಡುಬಂದಿತು.

ಇದು ಅಲ್ಲದೇ ಪಟ್ಟಣದಲ್ಲಿಯ ವೈದ್ಯಕೀಯ ಸಂಬಂದಿತ ಆಸ್ಪತ್ರೆ, ಔಷಧ ವ್ಯಾಪಾರಸ್ಥರ ಅಂಗಡಿ ಮುಗ್ಗಟ್ಟುಗಳು, ಸರ್ಕಾರಿ ಕಚೇರಿಗಳ ಸೇವೆ ಎಂದಿನಂತೆ ತಮ್ಮ ಸೇವೆಗೆ ಮುಂದಾಗಿದ್ದು ಕಂಡುಬಂದಿತಲ್ಲದೇ ಕ್ಷೇತ್ರ ಶಿಕ್ಷಣಾಧಿಕಾರಿಗಳ ಆದ-ೇಶದಂತೆ ಸರ್ಕಾರಿ, ಹಾಗೂ ಖಾಸಗಿ ಅನುದಾನಿತ, ಅನುದಾನ ರಹೀತ ಶಾಲಾ ಕಾಲೇಜುಗಳು ಬಂದ್ ಮಾಡಿ ಪ್ರತಿಭಟನಾ ಕಾರರ ಮನವಿಗೆ ಸ್ಪಂದಿಸಿದ್ದು ಕಂಡುಬಂದಿತು. ಈ ವಿಷಯ ಕುರಿತು ಶಾಲಾ ಮಕ್ಕಳಿಗೆ ಬಂದ್ ಕುರಿತು ಮೊದಲೇ ಸೂಚನೆ ನೀಡಲಾಗಿತ್ತು.

ಡಾ.ಬಿ.ಆರ್.ಅಂಬೇಡ್ಕರ್ ಭವನದಿಂದ ಪ್ರಾರಂಭಗೊಂಡ ಅಮೀತಶಾ ಅವರ ಅಣ-ಕು ಶವಯಾತ್ರೆಯ ಪ್ರತಿಭಟನಾ ಮೇರವಣಿಗೆಯು ಪ್ರಾರಂಭಗೊಂಡು ಅಂಬೇಡ್ಕರ್ ವೃತ್ತ, ಶ್ರೀ ಅಂಬಾಭವಾನಿ ಮಂದಿರ ರಸ್ತೆ, ಕತ್ರಿ ಭಜಾರ, ಬಾಲಾಜಿ ಮಂದಿರ ರಸ್ತೆ, ಶಿವಾಜಿ ಮಹಾರಾಜ ಚೌಕ್, ಮಹಾರಣಾಪ್ರತಾಪಸಿಂಹ್ ಸರ್ಕಲ್ ಮಾರ್ಗವಾಗಿ ಶ್ರೀ ಬಸವೇಶ್ವರರ ವೃತ್ತಕ್ಕೆ ಆಗಮಿಸಿ ಅಮೀತಶಾ ಅವರ ಅಣಕು ಶವವನ್ನು ದಹಿಸಲಾಯಿತು.

ನಂತರ ಸಭೆಯಾಗಿ ಮಾರ್ಪಟ್ಟ ಪ್ರತಿಭಟನಾ ಮೇರವಣಿಗೆಯ ನೇತೃತ್ವವಹಿಸಿದ ಸಚೀವ ಅಮಿತಶಾ ಅವರ ಹೇಳಿಕೆಯನ್ನು ಖಂಡಿಸಿ ಮಾತನಾಡಿದ ವಿವಿಧ ದಲಿತ ಪರ ಸಂಘಟನೆಯ ಉಪಾಧ್ಯಕ್ಷ ಬಸವರಾಜ ಕಟ್ಟಿಮನಿ ಅವರು ನಮ್ಮ ದೇಶವನ್ನು ಮುನ್ನಡೆಸುವಂತಹ ಸಂವಿದಾನದ ಕೊಡುಗೆ ನೀಡಿದ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಬಗ್ಗೆ ಚಳಿಗಾಲದ ಅಧೀವೇಶನದಲ್ಲಿ ಅವಹೇಳನಕಾರಿಯಾಗಿ ಮಾತನಾಡಿದಂತಹ ಅಮೀತಶಾ ಅವರು ಕೂಡಲೇ ದೇಶದ ಜನ-ರಿಗೆ ಕ್ಷಮೆಯಾಚಿಸುವದರೊಂದಿಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿದರು.

ಡಿಎಸ್‌ಎಸ್ ಸಂಘಟನಾ ಸಂಚಾಲಕ ಗುರುರಾಜ ಗುಡಿಮನಿ, ಸಿದ್ದು ಭಾರಿಗಿಡದ, ಡಿಎಸ್‌ಎಸ್ ಬೆಳಗಾವಿ ವಿಭಾಗದ ಸಂಘಟನಾ ಸಂಚಾಲಕ ದೇವೇಂದ್ರ ಹಾದಿಮನಿ ಅವರು ಮಾತನಾಡಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ನೀಡಿದ ಸಂವಿದಾನದ ಅಡಿಯಲ್ಲಿ ಅಧಿಕಾರ ಅನುಭವಿಸುತ್ತಿರುವ ಕೋಮುವಾದಿಗಳು ಇಂದು ಅವರ ಬಗ್ಗೆ ಹಗುರವಾಗಿ ಮಾತನಾಡುತ್ತಿರುವದನ್ನು ದೇಶದ ಜನರು ಸಹಿಸುವದಿಲ್ಲಾ ಕೇಂದ್ರ ಗ್ರಹ ಸಚೀವರಾಗಿರುವ ಅಮೀತಶಾ ಅವರು




ಅಂಬೇಡ್ಕರ್ ಅವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವದು ದೇಶದ 140 ಕೋಟಿ ಜನ-ರಿಗೆ ಅಪಮಾನಿಸಿದಂತಾಗಿದೆ ಕೂಡಲೇ ಪ್ರಧಾನಿ ನರೇಂದ್ರ ಮೋದಿಜಿ ಅವರು ಅಮೀತ ಶಾ ಅವರ ರಾಜೀನಾಮೆ ಪಡೆಯುವದರೊಂದಿಗೆ ತಮ್ಮ ಘನತೆಯನ್ನು ಉಳಿಸಿಕೊಳ್ಳಬೇಕು ಇಲ್ಲದಿದ್ದರೆ ಸಂವಿದಾನದ ಅಡಿಯಲ್ಲಿ ನಡೆಯುತ್ತಿರುವ ಹೋರಾಟ ದಾರಿ ತಪ್ಪುವದರಲ್ಲಿ ಸಂದೇಹವಿಲ್ಲಾ ಮತ್ತು ಇದರ ಪರಿಣಾಮವನ್ನು ಗಂಬೀರವಾಗಿ ಎದುರಿಸಬೇಕಾಗುತ್ತದೆ ಎಂದು ಎಚ್ಚ-ರಿಸಿದರು. ಮುಖಂಡ ಜೈಭೀಮ ಮುತ್ತಗಿ ಅವರು ಮಾತನಾಡಿದರು.

ವಿವಿಧ ದಲಿತಪರ ಸಂಘಟನೆಗಳ ಮುಖಂಡರುಗಳು ಅಮೀತ ಶಾ ಅವರ ಮೇಲೆ ಸಂವಿದಾನದಡಿಯಲ್ಲಿ ಯೋಗ್ಯ ಕ್ರಮ ಕೈಗೊಳ್ಳುವ ಕು-ರಿತು ರಾಷ್ಟ್ರಪತಿಗೆ ಬರೆದ ಮನವಿ ಪತ್ರವನ್ನು ತಹಶಿಲ್ದಾರ ಶ್ರೀಮತಿ ಕೀರ್ತಿ ಚಾಲಕ ಅವರಿಗೆ ಸಲ್ಲಿಸಿದರು.

ಈ ಪ್ರತಿಭಟನಾ ನೇತೃತ್ವವನ್ನು ವಿವಿಧ ದಲಿತಪರ ಸಂಘಟನೆಗಳ ಗೌರವಾಧ್ಯಕ್ಷರಾದ ಎಸ್.ಬಿ.ಕಟ್ಟಿಮನಿ, ಅಧ್ಯಕ್ಷರಾದ ಮುತ್ತಪ್ಪಣ್ಣ ಚಮಲಾಪೂರ, ಉಪಾಧ್ಯಕ್ಷ ಬಸವರಾಜ ಕಟ್ಟಿಮನಿ, ಪ್ರಧಾನ ಕಾರ್ಯದರ್ಶಿ ದೇವೇಂದ್ರ ಹಾದಿಮನಿ, ಕಾರ್ಯದರ್ಶಿ ನಾಗೇಶ ಕಟ್ಟಿಮನಿ, ಮಹೇಶ ಚಲವಾದಿ, ಶಾಂತಪ್ಪ ತಮದಡ್ಡಿ, ಶಂಕ್ರಪ್ಪ ಕಟ್ಟಿಮನಿ, ಸಿದ್ರಾಮ ಚಮಲಾಪೂರ, ಹಣಮಂತ ಕೊಡಗಾನೂರ, ಪರಶುರಾಮ ಕಟ್ಟಿಮನಿ, ಮಹಾಂತೇಶ ಕಟ್ಟಿಮನಿ, ಶಾಂತಪ್ಪ ಕೊಡಗಾನೂರ, ಕಾಶಿನಾಥ ಕಾರಗನೂರ, ಕಾರ್ತಿಕ ಕಟ್ಟಿಮನಿ, ವಿಶ್ವನಾಥ ಚಲವಾದಿ, ರವಿ ಕಟ್ಟಿಮನಿ, ಗೋಪಾಲ ಕಟ್ಟಿಮನಿ, ರಾಮಣ್ಣ ಕಟ್ಟಿಮನಿ, ಬಸವರಾಜ ಬಳಗಾನೂರ, ಶ್ರೀನಿವಾಸ ಕುಲಕರ್ಣಿ, ಬಸವರಾಜ ಬಡಿಗೇರ, ಬಾಬು ಮಿಣಜಗಿ, ಗೌತಮ್ಮ ಪತ್ತೇಪೂರ, ಶಂಕರ ಪಡಸಾಲಿ, ಮರೇಪ್ಪ ತಾರನಾಳ, ಬಸವರಾಜ ಬೀಸನಾಳ, ಮೊದಲಾದವರು ವಹಿಸಿದ್ದರು.

ಪ್ರತಿಭಟನಾ ಮೇರವಣಿಗೆಯಲ್ಲಿ ಯಾವುದೇ ತರಹದ ಅಹೀತಕರ ಘಟನೆ ಜರುಗದಂತೆ ಮುನ್ನೇಚ್ಚರಿಕೆ ಕು-ರಿತು ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಹಾಗೂ ಡಿ.ಎಸ್.ಪಿ.ಬಲ್ಲಪ್ಪ ನಂದಗಾವಿ, ಸಿಪಿಐ ಮಲ್ಲಿಕಾರ್ಜುನ ತುಳಸಿಗೇರಿ, ಪಿಎಸ್‌ಐ ರಾಮನಗೌಡ ಸಂಕನಾಳ, ಅಪರಾಧ ವಿಭಾಗ ಪಿ.ಎಸ್.ಐ.ಆರ್.ಎಸ್.ಭಂಗಿ, ಹಾಗೂ ತಾಳಿಕೋಟೆ, ಮುದ್ದೇಬಿಹಾಳ, ಬ.ಬಾಗೇವಾಡಿ, ನಿಡಗುಂದಿ, ಕೋಲಾರ, ಆಲಮಟ್ಟಿ, ಕೂಡಗಿ, ಪೊಲೀಸ್ ಠಾಣಾ ಸಂಬಂದಿತ ಅಧಿಕಾರಿ ವರ್ಗ ತಮ್ಮ ಸಿಬ್ಬಂದಿಯೊಂದಿಗೆ ಯೋಗ್ಯ ಬಂದೋಬಸ್ತ ಏರ್ಪಡಿಸಿದ್ದರು.

## ಶ್ರೀ ಪವಮಾನ ಹೋಮ ಕಾರ್ಯಕ್ರಮ

ಮೂಡಲಗಿ : ಧನುರ್ಮಾಸ ಪ್ರಯುಕ್ತ ಪಟ್ಟಣದ ಪೊಲೀಸ್ ಕ್ವಾಟರ್ಸ ಹತ್ತಿರ ಇರುವ ಶ್ರೀ ಹನುಮಾನ್ ದೇವಸ್ಥಾನದಲ್ಲಿ ಇದೇ ಶನಿವಾರ ದಿ.4 ರಂದು ಬೆಳಗ್ಗೆ 7 ಗಂಟೆಗೆ 'ಶ್ರೀ ಪವಮಾನ ಹೋಮ ಕಾರ್ಯಕ್ರಮ' ಜರುಗಲಿದೆ ಎಂದು ದೇವಸ್ಥಾನ ಅರ್ಚಕ ವೆಂಕಟೇಶ್ ಬಡಿಗೇರ ತಿಳಿಸಿದ್ದಾರೆ. ಶನಿವಾರ ಹನುಮಂತ ದೇವರಿಗೆ ವಿಶೇಷ ಪೂಜೆಯೊಂದಿಗೆ ಬೆಳಗ್ಗೆ 6 ಗಂಟೆಗೆ ಅಭಿಷೇಕ, ವೀಳ್ಯದೆಲೆ ಪೂಜೆ, ಸುಮಂಗಲೆಯರಿಗೆ ಉಡಿ ತುಂಬುವುದು, ಪವಮಾನ ಹೋಮದ ಪೂರ್ಣಾಹುತಿಯೊಂದಿಗೆ ಬಂದ ಸದ್ಭಕರಿಗೆಲ್ಲ ಮಧ್ಯಾನ್ಹ ಅನ್ನಸಂತರ್ಪಣೆ ಇರುವುದು.

ಮೂಡಲಗಿಯ ಪುರೋಹಿತ ಗುಂಡು ಆಚಾರ್ಯ ಹಾಗೂ ವೇದಮೂರ್ತಿ ರಾಘವೇಂದ್ರ ಆಚಾರ್ಯ ನೇತೃತ್ವದಲ್ಲಿ ಹಲವಾರು ದಂಪತಿಗಳು ಕಂಕಣ ಧರಿಸುವ ಮೂಲಕ ಪವಮಾನ ಹೋಮ ಕಾರ್ಯಕ್ರಮ ಅರ್ಥಪೂರ್ಣವಾಗಿ ಜರುಗಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸದ್ಭಕ್ತರು ಆಗಮಿಸಿ ಹನುಮ ದೇವರ ಕೃಪೆಗೆ ಪಾತ್ರರಾಗಬೇಕೆಂದು ಅರ್ಚಕರು ವಿನಂತಿಸಿದ್ದಾರೆ.

Criminal Miscellaneous. No 19/2024

IN THE COURT OF THE ADDL GI Jr. Do. RABAG,
AT-RAIBAG

BETWEEN
11 Shri. Shrikant S/o. Sidram Bane
R/o: Morab, Tal Raibeg
......... Petitioner

AND
1 The Tahashüdar Raihag
..........Respondent

CIATATION

Whereas, the above named Petitioner has filed this petition as per the provisions of under section 13 rule 3 of registration of Birth and Death Act 1969 for the relief of death registration of petitioner's father Sidram /o. Rayappa Bane was died an 01-01-1976 at Merab in Raibng taluks, Dist Belagavi. So it is just and necessary if any body have got any sort of objections to isaur death cerufıcate in favour of the Petitioner, they shall appear before the Hon'ble Court ether perannally or through their Advocates, duly instructed to answer on 07-02-2025 at 10:30am sharp tiling which the matter will be heard and decided in accordance with law

Given under my hand and seal of his Hon'ble court on this day 26-12-2024

By arder of the Court

Bench Clerk
ADDL Civil Judge Ruibag

(Shri PM Kamble)
Advocate Raibeg

